24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 149 | ನವದೆಹಲಿ | ಬೆಲೆ ₹10 | ನವಂಬರ್ 26, 2026 ಗುರುವಾರ


ಸಮಾಜ ಕಲ್ಯಾಣ ಇಲಾಖೆ
ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಡಾ. ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
1948, ನವೆಂಬರ್ 04ರಂದು ನಡೆದ ಸಂವಿಧಾನ ಸಭೆಯಲ್ಲಿ ಅಂಬೇಡ್ಕರ್ ಅವರ ಮಾತು
"ಸಾಂವಿಧಾನಿಕ ನೈತಿಕತೆ ಎನ್ನುವುದು ಸಹಜ ಭಾವನೆಯಲ್ಲ, ಅದನ್ನು ರೂಢಿಸಿಕೊಳ್ಳಬೇಕು"

ಸಂವಿಧಾನ ನಮ್ಮ ಬಲ ನಮ್ಮ ಭವಿಷ್ಯ
ಸಂವಿಧಾನ ದಿನಾಚರಣೆ
26ನೇ ನವೆಂಬರ್, 2026
ಸ್ಥಳ: ಮಹಾರಾಜ ಕಾಲೇಜು ಮೈದಾನ, ಮೈಸೂರು
ಸಮಯ: ಬೆಳಿಗ್ಗೆ 11.00 ಗಂಟೆಗೆ
ಸಂವಿಧಾನ ನಾಗರಿಕ ಹಕ್ಕುಗಳಿಗೆ ಭದ್ರ ಬುನಾದಿ, ಪ್ರಜಾಪ್ರಭುತ್ವದ ಜೀವಾಳ.
ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ್, ಸಮಾಜ ಕಲ್ಯಾಣ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪ ಹಾಗೂ ಗಣ್ಯರುಗಳಿಂದ ಬೆಳಿಗ್ಗೆ 9 ಗಂಟೆಗೆ ವಿಧಾನಸೌಧದ ಮುಂಭಾಗ ಡಾ. ಬಿ.ಆರ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ
ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನವು, ದೇಶವನ್ನು ಪ್ರಗತಿ, ಏಕತೆ ಮತ್ತು ಸಮಗ್ರತೆಯತ್ತ ಮುನ್ನಡೆಸುವ ಪರಮೋಚ್ಛ ಶಕ್ತಿಯಾಗಿದೆ. ನಾವೆಲ್ಲರೂ ಸಂವಿಧಾನವನ್ನು ನಿಷ್ಠೆಯಿಂದ ಪಾಲಿಸೋಣ, ಗೌರವಿಸೋಣ ಮತ್ತು ದೇಶವನ್ನು ಮತ್ತಷ್ಟು ಬಲಪಡಿಸೋಣ.
ಸಂವಿಧಾನದ ಆಶಯ, ಪ್ರತಿ ಪ್ರಜೆಯ ಅಭ್ಯುದಯ
ನ್ಯಾಯ | ಸ್ವಾತಂತ್ರ್ಯ | ಸಮಾನತೆ | ಭ್ರಾತೃತ್ವ
ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್, ನಿಕಟಪೂರ್ವ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ, ಸಮಾಜ ಕಲ್ಯಾಣ ಸಚಿವರಾದ ಶ್ರೀ ಕೆ.ಹೆಚ್.ಮುನಿಯಪ್ಪ ಅವರು ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ವಾಚನ ಮಾಡುತ್ತಿರುವ ಸಂದರ್ಭ
ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿ ಸಾಧಿಸಲು ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು; - ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ
ಆಯುಕ್ತರು ಸಮಾಜ ಕಲ್ಯಾಣ ಇಲಾಖೆ
ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ
@SWDGok
ಕರ್ನಾಟಕ ವಾರ್ತೆ

ನಿತ್ಯ ಪಂಚಾಂಗ 26.11.2026 ಗುರುವಾರ



ಶ್ರೀ ಪರಾಭವ ನಾಮ ಸಂವತ್ಸರ,
ದಕ್ಷಿಣಾಯನ ಶರದ್ ಋತು/
ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ
ಕಾರ್ತಿಕ ಬಹುಳ, ಬಿದಿಗೆ
ಮೃಗಶಿರ ನಕ್ಷತ್ರ
ಹೊರನಾಡು ದೀಪೋತ್ಸವ, ಕಾನೂನು ದಿನ
ಸಂತ ರಾಜಾರಾಮ ಪುಣ್ಯದಿನ,
ಬೀದರ್ ಸಿದ್ದಮಹಾರಾಜ ಪುಣ್ಯದಿನ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಎಂ.ಎಸ್. ರಾಮಚಂದ್ರರಾವ್

ಜಾರ್ಖಂಡ್ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ವಿಭು ಬಖ್ರು: ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸು



ಬೆಂಗಳೂರು, ನ.25: ರಾಜ್ಯ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರನ್ನು ಜಾರ್ಖಂಡ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ವರ್ಗಾವಣೆ ಮಾಡಲು ಹಾಗೂ ತ್ರಿಪುರಾ ಹೈಕೋರ್ಟ್‌ನ ಹಾಲಿ ಮುಖ್ಯ ನ್ಯಾಯಮೂರ್ತಿ ಎಂ.ಎಸ್. ರಾಮಚಂದ್ರ ರಾವ್ ಅವರನ್ನು ಕರ್ನಾಟಕ ಹೈಕೋರ್ಟ್‌ನ ನೂತನ ಮುಖ್ಯ ನ್ಯಾಯಮೂರ್ತಿಯಾಗಿ ನೇಮಕ ಮಾಡಲು ಸುಪ್ರೀಂಕೋರ್ಟ್ ಕೊಲಿಜಿಯಂ ಶಿಫಾರಸು ಮಾಡಿದೆ.

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ನಡೆದ ಕೊಲಿಜಿಯಂ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ವರ್ಗಾವಣೆ ಮತ್ತು ನೇಮಕಾತಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ.

ವಿಭು ಬಖ್ರು ಅವರು 2025ರ ಜುಲೈ 19ರಿಂದ ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದೀಗ ಅವರನ್ನು ಜಾರ್ಖಂಡ್ ಹೈಕೋರ್ಟ್‌ಗೆ ವರ್ಗಾವಣೆ ಮಾಡಲು ಶಿಫಾರಸು ಮಾಡಲಾಗಿದೆ. ಅವರ ಸ್ಥಾನಕ್ಕೆ ಎಂ.ಎಸ್. ರಾಮಚಂದ್ರ ರಾವ್ ಅವರನ್ನು ನೇಮಿಸಲು ಕೊಲಿಜಿಯಂ ಮುಂದಾಗಿದೆ.

ರಾಮಚಂದ್ರ ರಾವ್ ಪರಿಚಯ

ನ್ಯಾಯಮೂರ್ತಿ ಎಂ.ಎಸ್.ರಾಮಚಂದ್ರ ರಾವ್ ಅವರು 1966ರ ಆಗಸ್ಟ್ 7ರಂದು ಹೈದರಾಬಾದ್‌ನಲ್ಲಿ ಜನಿಸಿದರು. 1989ರಲ್ಲಿ ಹೈದರಾಬಾದ್‌ನ ಉಸ್ಮಾನಿಯಾ ವಿಶ್ವವಿದ್ಯಾಲಯದ ಯೂನಿವರ್ಸಿಟಿ ಕಾಲೇಜ್ ಆಫ್ ಲಾದಲ್ಲಿ ಕಾನೂನು ಪದವಿ ಪಡೆದರು. ಎಲ್‌ಎಲ್‌ಬಿ ಅಂತಿಮ ವರ್ಷದಲ್ಲಿ ಅತ್ಯಧಿಕ ಅಂಕ ಗಳಿಸಿದ ಸಾಧನೆಗಾಗಿ ಉಸ್ಮಾನಿಯಾ ವಿಶ್ವವಿದ್ಯಾಲಯದಿಂದ ಚಿನ್ನದ ಪದಕವನ್ನೂ ಪಡೆದಿದ್ದಾರೆ.

1989ರ ಸೆಪ್ಟೆಂಬರ್ 7ರಂದು ವಕೀಲ ವೃತ್ತಿ ಆರಂಭಿಸಿದ ಅವರು, 2012ರ ಜೂನ್ 29ರಂದು ಆಂಧ್ರಪ್ರದೇಶ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಯಾಗಿ ನೇಮಕಗೊಂಡರು. 2013ರ ಡಿಸೆಂಬರ್ 4ರಂದು ಕಾಯಂ ನ್ಯಾಯಮೂರ್ತಿಯಾಗಿ ಸೇವೆ ಆರಂಭಿಸಿದರು.

2021ರ ಆಗಸ್ಟ್ 31ರಂದು ತೆಲಂಗಾಣ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಪದೋನ್ನತಿ ಪಡೆದರು. ಅದೇ ವರ್ಷ ಅಕ್ಟೋಬರ್ 12ರಂದು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ವರ್ಗಾವಣೆಯಾದರು.

ಕೊಲಿಜಿಯಂ ಶಿಫಾರಸು:

ನಂತರ 2023ರ ಮೇ 30ರಂದು ಹಿಮಾಚಲ ಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣವಚನ ಸ್ವೀಕರಿಸಿದರು. 2024ರ ಸೆಪ್ಟೆಂಬರ್ 21ರಂದು ಜಾರ್ಖಂಡ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ವರ್ಗಾವಣೆಗೊಂಡಿದ್ದರು.

ಇದೀಗ ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಎಂ.ಎಸ್. ರಾಮಚಂದ್ರರಾವ್ ಅವರನ್ನು ನೇಮಿಸಲು ಸುಪ್ರೀಂಕೋರ್ಟ್ ಕೊಲಿಜಿಯಂ ಶಿಫಾರಸು ಮಾಡಿದ್ದು, ಕೇಂದ್ರ ಸರ್ಕಾರದ ಅಂತಿಮ ಅನುಮೋದನೆ ಬಳಿಕ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

ಕೋರಮಂಗಲದಲ್ಲಿ ಬೃಹತ್ ರಕ್ತದಾನ ಶಿಬಿರ: ಯು.ಟಿ.ಖಾದರ್ ಉದ್ಘಾಟನೆ



ಬೆಂಗಳೂರು, ನ.25: ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನಾಚರಣೆಯ ಅಂಗವಾಗಿ, ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಆಯೋಜಿಸಲಾಗಿರುವ ದಾಖಲೆ ನಿರ್ಮಿಸುತ್ತಿರುವ ಕರ್ನಾಟಕ ಬೃಹತ್ ರಕ್ತದಾನ ಶಿಬಿರವನ್ನು ಬುಧವಾರ ವಿಧ್ಯುಕ್ತವಾಗಿ ಉದ್ಘಾಟಿಸಿ, ಸ್ವತಃ ರಕ್ತದಾನ ಮಾಡುವ ಮೂಲಕ ಈ ಮಹತ್ಕಾರ್ಯಕ್ಕೆ ಚಾಲನೆ ನೀಡಿದೆ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

ರಾಜ್ಯಾದ್ಯಂತ ಒಂದೇ ದಿನ ಸಾವಿರಾರು ಜನರು ರಕ್ತದಾನ ಮಾಡುತ್ತಿರುವ ಈ ಶಿಬಿರದ ಮೂಲಕ, ದೇಶದಲ್ಲೇ ಅತಿ ಹೆಚ್ಚು ರಕ್ತ ಸಂಗ್ರಹಿಸುವ ದಾಖಲೆಯತ್ತ ಕರ್ನಾಟಕ ಹೆಜ್ಜೆ ಇಟ್ಟಿದೆ.

ನನ್ನ ಪ್ರೀತಿಯ ನಾಡಿನ ಬಂಧುಗಳೇ, ರಕ್ತದಾನ ಎನ್ನುವುದು ಕೇವಲ ಒಂದು ದಿನದ ಕಾರ್ಯಕ್ರಮವಲ್ಲ; ಅದು ನಮ್ಮ ಸಮಾಜದ ಜವಾಬ್ದಾರಿ, ಮಾನವೀಯತೆಯ ನಿಜವಾದ ಪ್ರತಿಬಿಂಬ ಮತ್ತು ಕಷ್ಟದಲ್ಲಿರುವ ಜೀವಗಳಿಗೆ ನೀಡುವ ಅಮೂಲ್ಯ ಕೊಡುಗೆ. ನಾವು ನೀಡುವ ಒಂದು ಯುನಿಟ್ ರಕ್ತವು ಅಪಘಾತದಲ್ಲಿ ಸಿಲುಕಿದವರು, ತುರ್ತು ಶಸ್ತ್ರಚಿಕಿತ್ಸೆಗೆ ಒಳಗಾಗುವವರು ಹಾಗೂ ಕ್ಯಾನ್ಸರ್‌ನಂತಹ ಗಂಭೀರ ಕಾಯಿಲೆಯಿಂದ ಹೋರಾಡುತ್ತಿರುವವರು ಸೇರಿದಂತೆ 4 ಜೀವಗಳಿಗೆ ಹೊಸ ಬದುಕು ನೀಡಬಲ್ಲದು. ಅಂತಹ ಮಹತ್ವದ ಸೇವೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎನ್ನುವುದೇ ನಮ್ಮ ಉದ್ದೇಶ.

ಈ ಬೃಹತ್ ರಕ್ತದಾನ ಅಭಿಯಾನ ಬುಧವಾರ ಸಂಜೆ 6 ಗಂಟೆಯವರೆಗೂ ರಾಜ್ಯಾದ್ಯಂತ ನಡೆಯಿತು. 18 ರಿಂದ 65 ವರ್ಷದೊಳಗಿನ ಆರೋಗ್ಯವಂತ ವ್ಯಕ್ತಿಗಳು ಹಿಂಜರಿಕೆಯಿಲ್ಲದೆ ಮುಂದೆ ಬನ್ನಿ. ನಿಮ್ಮ ಹತ್ತಿರದ ತಾಲೂಕು ಅಥವಾ ಜಿಲ್ಲಾ ಕೇಂದ್ರಕ್ಕೆ ಈಗಲೇ ತೆರಳಿ ರಕ್ತದಾನ ಮಾಡಿ, ಸಂಕಷ್ಟದಲ್ಲಿರುವ ಜೀವಗಳಿಗೆ ಆಸರೆಯಾಗುವ ಮೂಲಕ ಈ ದಾಖಲೆಯ ಅಭಿಯಾನಕ್ಕೆ ಸಂಪೂರ್ಣ ಸಹಕಾರ ನೀಡಬೇಕೆಂದು ಮನವಿ ಮಾಡುತ್ತೇನೆ.

ರಕ್ತದಾನಿಗಳಿಗೆ ಪ್ರಮಾಣಪತ್ರ, ಲಘು ಉಪಹಾರ ಹಾಗೂ ನಿಯಮಾನುಸಾರ ಸರ್ಕಾರಿ ನೌಕರರಿಗೆ ವಿಶೇಷ ರಜೆ ಸೌಲಭ್ಯವೂ ಇದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳು , ನಿರ್ದೇಶಕರು, ಕರ್ನಾಟಕ ರಾಜ್ಯ ರಕ್ತ ಚಾಲನಾ ಪರಿಷತ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾವಿರಾರು ಸ್ವಯಂಪ್ರೇರಿತ ರಕ್ತದಾನಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.



ನವದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವಾಲಯ ಮತ್ತು ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ ನಡುವೆ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿಯವರು, ಜಲಶಕ್ತಿ ಸಚಿವ ಸಿ.ಆರ್ ಪಾಟೀಲ್ ಮತ್ತು ಎರಡೂ ಸಚಿವಾಲಯಗಳ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಮಹತ್ವದ ಒಡಂಬಡಿಕೆಗೆ ಸಹಿ ಹಾಕಿದ ಸಭೆಯಲ್ಲಿ ಕೇಂದ್ರ ರಾಜ್ಯ ಸಚಿವ ವಿ.ಸೋಮಣ್ಣ ಪಾಲ್ಗೊಂಡಿದ್ದರು. ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ನಿಯಮಿತ ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ಸ್ಥಳೀಯ ಮಟ್ಟದಲ್ಲಿ ನುರಿತ ಮಾನವ ಸಂಪನ್ಮೂಲವನ್ನು ಸಿದ್ಧಪಡಿಸುವುದು ಮತ್ತು ಗ್ರಾಮೀಣ ಯುವಕರಿಗೆ ಉದ್ಯೋಗಾವಕಾಶ ಹೆಚ್ಚಿಸುವುದು ಈ ಒಪ್ಪಂದದ ಪ್ರಮುಖ ಉದ್ದೇಶವಾಗಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ, ದೇಶದ ಪ್ರತಿಯೊಂದು ಗ್ರಾಮೀಣ ಕುಟುಂಬಕ್ಕೂ ಶುದ್ಧ ಕುಡಿಯುವ ನೀರನ್ನು ಒದಗಿಸುವ ನಿಟ್ಟಿನಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಸೋಮಣ್ಣ ನುಡಿದರು.



ಕಮೀಷನ್ ಹೊಡೆಯಲು ವೈಟ್ ಟಾಪಿಂಗ್ ವೆಚ್ಚ ಮೂರು ಪಟ್ಟು ಹೆಚ್ಚಳ: ಅಶೋಕ್ ಆರೋಪ



ಬೆಂಗಳೂರು, ನ.25: ರಸ್ತೆಗಳ ವೈಟ್ ಟಾಪಿಂಗ್ ವೆಚ್ಚ ಮೂರು ಪಟ್ಟು ಹೆಚ್ಚಿಸುವ ಮೂಲಕ ಕಾಂಗ್ರೆಸ್ ಸರ್ಕಾರ

ಕಮೀಷನ್ ಲೂಟಿಗೆ ಸಖತ್ ಸ್ಕೆಚ್ ಹಾಕಿದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮಾರ್ಚ್ ತಿಂಗಳ ಬಜೆಟ್‌ನಲ್ಲಿ ಕಿ.ಮೀ.ಗೆ ಸರಾಸರಿ 6.66 ಕೋಟಿ ವೆಚ್ಚದಲ್ಲಿ ವೈಟ್ ಟಾಪಿಂಗ್ ಮಾಡುತ್ತೇವೆ ಎಂದು ಬೊಗಳೆ ಬಿಟ್ಟಿದ್ದ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರ, ಈಗ 130.85 ಕಿ.ಮೀ. ರಸ್ತೆಗೆ 2,321.17 ಕೋಟಿ – ಅಂದರೆ ಕಿ.ಮೀ.ಗೆ ಸರಾಸರಿ ಬರೋಬ್ಬರಿ 17.74 ಕೋಟಿ ಖರ್ಚು ಮಾಡಲು ಸಚಿವ ಸಂಪುಟದಲ್ಲಿ ಸಮ್ಮತಿ ನೀಡಿರುವುದು ಹಗಲು ದರೋಡೆ ಎಂದು ಕಿಡಿಕಾರಿದ್ದಾರೆ

ಮುಖ್ಯಮಂತ್ರಿ ಶಿವಕುಮಾರ್ ಅವರು ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಕಮೀಷನ್ ಹಾಗೂ ಲೂಟಿಯ ಹುನ್ನಾರಕ್ಕಾಗಿಯೇ ವೆಚ್ಚವನ್ನು ಮೂರು ಪಟ್ಟು ಹಿಗ್ಗಿಸಿದ್ದಾರೆ.

ಕೇವಲ 88 ರಸ್ತೆಗಳ 130.85 ಕಿ.ಮೀ.ಗೆ 2,321 ಕೋಟಿ ಸುರಿಯುತ್ತಿರುವುದನ್ನು ನೋಡಿದರೆ, ರಸ್ತೆಗಳ ಗುಣಮಟ್ಟಕ್ಕಿಂತ ಕಾಂಟ್ರ್ಯಾಕ್ಟರ್‌ಗಳ ಜೇಬು ತುಂಬಿಸುವುದೇ ಈ ಸರ್ಕಾರದ ಮುಖ್ಯ ಉದ್ದೇಶ ಎಂಬುದು ಸ್ಪಷ್ಟವಾಗಿದೆ. ಎಂದು ಟೀಕಿಸಿದ್ದಾರೆ.

ಒಂದೆಡೆ ಬಡವರ, ಮಹಿಳೆಯರ, ಆಶಾ ಕಾರ್ಯಕರ್ತೆಯರ ನ್ಯಾಯಯುತ ಬೇಡಿಕೆಗಳಿಗೆ "ಆರ್ಥಿಕವಾಗಿ ಶಕ್ತವಾಗಿಲ್ಲ" ಎಂದು ಸಬೂಬು ಹೇಳುವ ಈ ದಿವಾಳಿ ಸರ್ಕಾರಕ್ಕೆ, ಬೆಂಗಳೂರಿನ ರಸ್ತೆಗಳ ಹೆಸರಿನಲ್ಲಿ ಸಾವಿರಾರು ಕೋಟಿ ರೂಪಾಯಿಗಳ ಲೂಟಿಗಾಗಿ ಸ್ಕೆಚ್ಚು ಹಾಕಲು ಮಾತ್ರ ಹಣದ ಕೊರತೆಯಿಲ್ಲ!

ಬೆಂಗಳೂರಿನ ಜನರ ಶ್ರಮದ ತೆರಿಗೆ ಹಣವನ್ನು ಲೂಟಿ ಮಾಡುತ್ತಿರುವ ಡಿ.ಕೆ. ಶಿವಕುಮಾರ್ ಮತ್ತು ಕೃಷ್ಣ ಬೈರೇಗೌಡ ಅವರ ಈ ಭ್ರಷ್ಟ ನೀತಿಗೆ ಬೆಂಗಳೂರಿನ ಜನತೆ ತಕ್ಕ ಪಾಠ ಕಲಿಸುವ ದಿನ ದೂರವಿಲ್ಲ. ಈ ದುಬಾರಿ, ಶಂಕಾಸ್ಪದ ಯೋಜನೆಯನ್ನು ತಕ್ಷಣವೇ ಮರುಪರಿಶೀಲಿಸಿ, ಪಾರದರ್ಶಕತೆ ತರಬೇಕು ಎಂದು ಆಗ್ರಹಿಸಿದ್ದಾರೆ.

ಆಶಾಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದಿಂದ ಶೀಘ್ರ ಸಿಹಿಸುದ್ದಿ

ಮಾಸಿಕ ಗೌರವಧನ 1500ರೂ. ಹೆಚ್ಚಿಸಲು ಸಕಲ ಸಿದ್ಧತೆ: ಸಂಸದ ಡಾ.ಸಿ.ಎನ್. ಮಂಜುನಾಥ್



ರಾಮನಗರ, ನ.25: ವೇತನ ಪರಿಷ್ಕರಣೆಗೆ ಆಗ್ರಹಿಸಿ ರಾಜಧಾನಿ ಬೆಂಗಳೂರಿನಲ್ಲಿ ಪ್ರತಿಭಟನೆ ನಡೆಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದಿಂದ ಶೀಘ್ರದಲ್ಲೇ ಶುಭಸುದ್ದಿ ಸಿಗಲಿದೆ. ದೇಶಾದ್ಯಂತ ಸೇವೆ ಸಲ್ಲಿಸುತ್ತಿರುವ ಆಶಾ ಕಾರ್ಯಕರ್ತೆಯರ ಮಾಸಿಕ ಗೌರವಧನವನ್ನು 1,500 ರೂಪಾಯಿಗಳಷ್ಟು ಏರಿಕೆ ಮಾಡಲು ಕೇಂದ್ರ ಸರ್ಕಾರ ಸಕಲ ಸಿದ್ಧತೆ ನಡೆಸಿದೆ ಎಂದು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಭರವಸೆ ನೀಡಿದ್ದಾರೆ.

ರಾಮನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಶಾ ಕಾರ್ಯಕರ್ತೆಯರ ಬೇಡಿಕೆಗಳ ಕುರಿತು ತಾವು ಈಗಾಗಲೇ ರಾಷ್ಟ್ರೀಯ ಆರೋಗ್ಯ ಮಿಷನ್ ನಿರ್ದೇಶಕರೊಂದಿಗೆ ಚರ್ಚಿಸಿದ್ದು, ಅವರ ನ್ಯಾಯಯುತ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು.

ಗೌರವಧನ ಹೆಚ್ಚಳಕ್ಕೆ ಸಂಬಂಧಿಸಿದಂತೆ ಈಗಾಗಲೇ ಕರಡು ಪ್ರಸ್ತಾವನೆ ಸಿದ್ಧಗೊಂಡಿದ್ದು, ಮುಂಬರುವ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಇದನ್ನು ಮಂಡಿಸಿ ಅಧಿಕೃತ ಅನುಮೋದನೆ ಪಡೆಯಲಾಗುವುದು ಎಂದರು.

ಇದೇ ವೇಳೆ, ಆಶಾ ಕಾರ್ಯಕರ್ತೆಯರು ಸ್ವಾಭಿಮಾನದ ಬದುಕು ನಡೆಸಲು ರಾಜ್ಯ ಸರ್ಕಾರವೂ ತನ್ನ ಪಾಲಿನ ಗೌರವಧನವನ್ನು ಹೆಚ್ಚಳ ಮಾಡಬೇಕು ಎಂದು ಆಗ್ರಹಿಸಿದರು.

ಜ್ಞಾನ ದಿಗ್ಗಜ ಡಾ.ಅಂಬೇಡ್ಕರ್ ವಿರಚಿತ ಭಾರತೀಯ ಸಂವಿಧಾನ ಶ್ರೇಷ್ಠತೆಯ ಮಹಾಸಾಗರ: ಅಂಬರಕ್ಕಿಂತಲೂ ವಿಸ್ತಾರ



ಲೇಖನ:
ಕೆ.ಎಚ್.ಮುನಿಯಪ್ಪ ಸಮಾಜ
ಕಲ್ಯಾಣ ಸಚಿವರು ಕರ್ನಾಟಕ ಸರ್ಕಾರ

ಶ್ರೀಗಂಧ ತನ್ನನ್ನು ತೇಯ್ದು ಪರಿಮಳವನ್ನು ಧಾರೆ ಎರೆಯುತ್ತದೆ, ಅದೇ ರೀತಿ ನಮ್ಮ ಸಂವಿಧಾನಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಸಹ ಅನೇಕ ನೋವು, ಅಪಮಾನ ಎದುರಿಸಿದರೂ ಸಹ ಪ್ರತಿಯೊಬ್ಬ ಭಾರತೀಯ ಘನತೆಯಿಂದ ಬದುಕಬೇಕು ಎಂಬ ಏಕೈಕ ಸಂಕಲ್ಪದೊಂದಿಗೆ ಬರೆದ ಭಾರತೀಯ ಸಂವಿಧಾನವೇ ನಮ್ಮೆಲ್ಲರ ಘನತೆಯ ಹಾಗೂ ಹಕ್ಕುಗಳ ಬದುಕಿಗೆ ಪರಮಾಧಾರ. ಸಂವಿಧಾನದ ಶ್ರೇಷ್ಠ ತತ್ವಗಳ ಸಾಕಾರ ರೂಪವನ್ನು ನಾವು ನಿತ್ಯ ಅನುಭವಿಸುತ್ತಿದ್ದೇವೆ, ನಮ್ಮ ಘನತೆಯ ಬದುಕೇ ನಮ್ಮ ಶ್ರೇಷ್ಠತೆಯ ಸಂವಿಧಾನದ ಫಲಶೃತಿ.

ಜ್ಞಾನ, ಸಾಮಾಜಿಕ ಕಳಕಳಿ, ಕಾನೂನು ಆದಿಯಾಗಿ ಎಲ್ಲ ವಿಷಯಗಳ ಬಗ್ಗೆ ಪಾಂಡಿತ್ಯ, ಕೋಟ್ಯಂತರ ಗ್ರಂಥಗಳನ್ನು ಓದಿದ ಅನುಭವದ ಶ್ರೇಷ್ಠತೆ ಸ್ವರೂಪಿಯಾಗಿರುವ ಡಾ.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಸಹ ಅಷ್ಟೇ ಶ್ರೇಷ್ಠತೆ ಸ್ವರೂಪ ಪಡೆದುಕೊಳ್ಳಲು ಸಾಧ್ಯವಾಯಿತು.

ಭಾರತೀಯ ಸಂವಿಧಾನದ ಶ್ರೇಷ್ಠತೆ ಹಾಗೂ ಈ ಶ್ರೇಷ್ಠ ಸಂವಿಧಾನದ ಶಕ್ತಿಯಾಗಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಹೇಳಲು ದಿನಗಳೇ ಬೇಕು, ಇಡೀ ಮಹಾಸಾಗರದ ನೀರನ್ನು ಶಾಹಿಯಾಗಿ ಬಳಸಿ ಬರೆಯಲು ಆರಂಭಿಸಿದರೂ ಪೂರ್ತಿಯಾಗುವುದಿಲ್ಲ. ಡಾ.ಅಂಬೇಡ್ಕರ್ ಅವರ ವ್ಯಕ್ತಿತ್ವವನ್ನು ಒಂದೇ ಲೇಖನದಲ್ಲಿ ಕಟ್ಟಿಕೊಡುವುದು ಅಸಾಧ್ಯದ ಮಾತು, ಇದು ಒಂದರ್ಥದಲ್ಲಿ ಸೂರ್ಯನಿಗೆ ಬೆಳಕಿನ ದೀಪ ಹಿಡಿದಂತೆ.

ಏಕೆಂದರೆ ನಮ್ಮ ಸಂವಿಧಾನದ ಪ್ರತಿ ಆಯಾಮ ಗಮನಿಸಿದಾಗ ಅಲ್ಲಿ ವಿಶೇಷತೆ ಇದೆ, ಮಾನವೀಯತೆ ಸೆಲೆ ಇದೆ, ಸಮಾನತೆಯ ಅಪ್ಪುಗೆ ಇದೆ, ಪ್ರಜೆಯೇ ಸಾರ್ವಭೌಮ ಎಂಬ ಭಾವವಿದೆ, ಪ್ರಜಾಪ್ರಭುತ್ವದ ಸೌಂದರ್ಯವಿದೆ, ಮೂಲಭೂತ ಹಕ್ಕುಗಳ ಅಧಿಕಾರವಿದೆ

ಘನತೆಯ ಬದುಕಿಗೆ ಹಕ್ಕುಗಳೇ ದಿವ್ಯಾಧಾರ

ಹಕ್ಕು ಈ ಶಬ್ದ ಎಷ್ಟೊಂದು ಪ್ರಬಲ ಅಲ್ಲವೇ. ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಹಕ್ಕುಗಳನ್ನು ಸಂವಿಧಾನದಲ್ಲಿ ಅಳವಡಿಸಿಕೊಳ್ಳದೇ ಹೋಗಿದ್ದರೆ ಯಾವ ರೀತಿ ಪರಿಸ್ಥಿತಿ ಇರುತ್ತಿತ್ತು ಎಂಬುದನ್ನು ಊಹಿಸಿಕೊಳ್ಳಿ. ಆಗುತ್ತಿಲ್ಲವಲ್ಲವೇ ಹಕ್ಕುಗಳೇ ಇಲ್ಲದೇ ಹೋದರೆ ಅದು ಸರ್ವಾಧಿಕಾರದ ಪರಮಾವಧ

24ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ನವಂಬರ್ 26, 2026 ಗುರುವಾರ

ಒಳಪುಟಗಳಲ್ಲಿ

5 ಪ್ರಮುಖ ಯೋಜನೆಗಳಿಗೆ 20 ಸಾವಿರ ಕೋಟಿ ರೂ. ನಿಗದಿ ಪ್ರಧಾನಿ ನೇತೃತ್ವದ ಕೇಂದ್ರ ಸಂಪುಟ ಸಭೆಯಲ್ಲಿ ಅನುಮೋದನೆ - ಪು.4

ರಾಜ್ಯೋತ್ಸವದ ಅಂಗವಾಗಿ ಕಬ್ಬನ್‌ಪಾರ್ಕ್‌ನಲ್ಲಿ ಡಿ.7ರವರೆಗೆ ಹೂವಿನ ಹಬ್ಬ - ಪು.5

ಜಪಾನ್ ಹೂಡಿಕೆ ಉತ್ತೇಜಿಸಲು ಕರ್ನಾಟಕ ಸರ್ಕಾರ ಬದ್ಧ: ಸಿಎಂ

ಟೋಕಿಯೊ(ಜಪಾನ್), ನ.25: ಕರ್ನಾಟಕದಲ್ಲಿ ಹೂಡಿಕೆ ಮಾಡಲು ಬನ್ನಿ, ಜಪಾನ್ ಮತ್ತು ಕರ್ನಾಟಕದ ನಡುವಿನ ಆರ್ಥಿಕ ಸಹಕಾರ ಹಾಗೂ ದ್ವಿಪಕ್ಷೀಯ ಸಹಭಾಗಿತ್ವವನ್ನು ಬಲಪಡಿಸುವ ಅಗತ್ಯವನ್ನು ಹಾಗೂ ಕರ್ನಾಟಕದಲ್ಲಿ ಜಪಾನ್ ಹೂಡಿಕೆಗಳನ್ನು ಉತ್ತೇಜಿಸಲು ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಟೋಕಿಯೊದಲ್ಲಿ ಜಪಾನ್‌ನ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಯಸುತಾಕಾ ನಕಸೋನ್ ಅವರನ್ನು ಬುಧವಾರ ಭೇಟಿಯಾಗಿ ಮಾತುಕತೆ ನಡೆಸಿದ ಅವರು, ಮುಂದಿನ ತಿಂಗಳು ನಡೆಯುವ 'ಕರ್ನಾಟಕ ಜಾಗತಿಕ ಹೂಡಿಕೆದಾರರ ಸಮಾವೇಶ 2027'ರಲ್ಲಿ 'ಜಪಾನ್ ಕಂಟ್ರಿ ಪೆವಿಲಿಯನ್' ಜೊತೆಗೆ ಭಾಗವಹಿಸುವಂತೆ ಜಪಾನ್ ಸರ್ಕಾರದ ಉನ್ನತ ಮಟ್ಟದ ನಿಯೋಗಕ್ಕೆ ಸಿಎಂ ಆಹ್ವಾನ ನೀಡಿದರು.

ಬೆಂಗಳೂರು ಮೆಟ್ರೋ ಮತ್ತು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಸೇರಿದಂತೆ ವಿವಿಧ ಇಲಾಖೆಗಳ ಪ್ರಮುಖ ಮೂಲಸೌಕರ್ಯ ಯೋಜನೆಗಳಿಗೆ ಜಪಾನ್ ನೀಡುತ್ತಿರುವ ನಿರಂತರ ಬೆಂಬಲಕ್ಕೆ ಈ ಸಂದರ್ಭದಲ್ಲಿ ಕೃತಜ್ಞತೆ ಸಲ್ಲಿಸಿದ ಸಿಎಂ, ಕರ್ನಾಟಕದ ಅಭಿವೃದ್ಧಿ ಆದ್ಯತೆಗಳಿಗೆ ಜಪಾನ್ ಸರ್ಕಾರ ಸಹಕಾರವನ್ನು ವಿಸ್ತರಿಸುವಂತೆ ಸಹಕಾರ ಕೋರಿದರು.

ಜಪಾನ್‌ನ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವರ ಜತೆ ಸಿಎಂ ಡಿ.ಕೆ. ಶಿವಕುಮಾರ್ ಮಾತುಕತೆ



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಜಪಾನ್‌ನ ಟೋಕಿಯೊದಲ್ಲಿ ಅಲ್ಲಿನ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಯಸುತಾಕಾ ನಕಾಸೋನೆ ಅವರೊಂದಿಗೆ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಮತ್ತು ಜಪಾನ್ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವುದು ಹಾಗೂ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರ ವಿಸ್ತರಿಸುವ ಹೊಸ ಅವಕಾಶಗಳ ಬಗ್ಗೆ ಚರ್ಚಿಸಲಾಯಿತು.

ಹೂಡಿಕೆ ಕರ್ನಾಟಕ ಪ್ರಮುಖ ತಾಣ

ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಯಸುತಾಕಾ ನಕಸೋನ್ ಭಾರತ–ಜಪಾನ್ ನಡುವಿನ ನಿರಂತರ ಬಾಂಧವ್ಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ. ಕರ್ನಾಟಕ ಜಪಾನ್ ಹೂಡಿಕೆಗಳಿಗೆ ಪ್ರಮುಖ ತಾಣವಾಗಿದೆ. ಜಪಾನ್ ಮತ್ತು ಕರ್ನಾಟಕದ ನಡುವಿನ ನಿರಂತರ ಸಹಭಾಗಿತ್ವ ವ್ಯಪಹಾರಿಕ ಅಭಿವೃದ್ಧಿ ಮೈಲಿಗಲ್ಲು ಎಂದು ಶ್ಲಾಘಿಸಿದರು.

ಪ್ಯಾನಾಸೋನಿಕ್ ಆಟೋಮೋಟಿವ್ ಸಂಸ್ಥೆಗೆ ನಿಯೋಗ ಭೇಟಿ

ರಾಜ್ಯದಲ್ಲಿ ಬಂಡವಾಳ ಹೂಡಿಕೆ ಹಾಗೂ ಕೈಗಾರಿಕಾ ವಿಸ್ತರಣೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನಿಯೋಗ ಪ್ಯಾನಾಸೋನಿಕ್ ಆಟೋಮೋಟಿವ್ ಸಂಸ್ಥೆ ಅಧ್ಯಕ್ಷರು ಮತ್ತು ಸಿಇಒ ಮೈಕ್ ನಾಗಯಾಸು ನೇತೃತ್ವದ ಉನ್ನತ ಮಟ್ಟದ ನಿಯೋಗವನ್ನು ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದರು. ಅತ್ಯಾಧುನಿಕ ತಯಾರಿಕಾ ಕ್ಷೇತ್ರದಲ್ಲಿ ಕರ್ನಾಟಕ ಹೊಂದಿರುವ ಸಾಮರ್ಥ್ಯ ಹಾಗೂ ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ಗ್ಲೋಬಲ್ ಕೇಪಬಿಲಿಟಿ ಸೆಂಟರ್‌ಗಳ (ಜಿಸಿಸಿ) ಪೂರಕ ವಾತಾವರಣದ ಕುರಿತು ಸಭೆಯಲ್ಲಿ ವಿವರವಾಗಿ ಚರ್ಚಿಸಲಾಯಿತು. ಅಲ್ಲದೆ, ರಾಜ್ಯದಲ್ಲಿ ಪ್ಯಾನಾಸೋನಿಕ್ ಆಟೋಮೋಟಿವ್ ಸಂಸ್ಥೆಯು ತನ್ನ ಕಾರ್ಯಕ್ಷೇತ್ರವನ್ನು ವಿಸ್ತರಿಸಲು ಮತ್ತು ಹೊಸದಾಗಿ ಬಂಡವಾಳ ಹೂಡಿಕೆ ಮಾಡಲು ಇರುವ ವ್ಯಾಪಕ ಅವಕಾಶಗಳ ಹಾದಿಯ ಬಗ್ಗೆ ಪರಿಶೀಲಿಸಲಾಯಿತು.

ತ್ಯಾಜ್ಯ ನಿರ್ವಹಣೆ, ನಗರ ಮೂಲಸೌಕರ್ಯ ಕ್ಷೇತ್ರದಲ್ಲಿ ಸಹಯೋಗ ಕುರಿತು ಚರ್ಚೆ

ಟೋಕಿಯೋ, ನ.25: ತ್ಯಾಜ್ಯದಿಂದ ಇಂಧನ ಉತ್ಪಾದನೆ, ನಗರ ಘನತ್ಯಾಜ್ಯ ನಿರ್ವಹಣೆ ಮತ್ತು ನಗರ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಸಹಯೋಗದ ಅವಕಾಶಗಳನ್ನು ಅನ್ವೇಷಿಸುವ ಕುರಿತು ಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಚಿವ ಎಂ.ಬಿ.ಪಾಟೀಲ್ ಅವರೊಂದಿಗೆ ಜಪಾನ್‌ನಲ್ಲಿ ಜೆಎಫ್‌ಇ ಇಂಜಿನಿಯರಿಂಗ್ ಕಾರ್ಪೊರೇಷನ್ ವ್ಯವಸ್ಥಾಪಕ ನಿರ್ದೇಶಕ ಕೀಜಿ ನಾಗಯಾ ಮತ್ತು ಕಂಪನಿಯ ಹಿರಿಯ ಪ್ರತಿನಿಧಿಗಳು ಮಂಗಳವಾರ ಮಾತುಕತೆ ನಡೆಸಿದರು.

- **ರಾಜ್ಯದ ಪ್ರಮುಖ ನಗರಗಳಲ್ಲಿ ತ್ಯಾಜ್ಯದಿಂದ ವಿದ್ಯುತ್ ಉತ್ಪಾದನೆ ಕುರಿತು ಸರ್ಕಾರದ ಆಸಕ್ತಿ**

ಲ್ಯಾಂಡ್‌ಫಿಲ್ ಪ್ರದೇಶಗಳಿಗೆ ಸೇರುವ ತ್ಯಾಜ್ಯದ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡುವುದರ ಜೊತೆಗೆ, ಸುಮಾರು 15 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಸಾಮರ್ಥ್ಯವಿರುವ ತ್ಯಾಜ್ಯದಿಂದ ಇಂಧನ ತಯಾರಿಸುವ ಘಟಕಗಳನ್ನು ಅಭಿವೃದ್ಧಿಪಡಿಸುವ ತನ್ನ ಪರಿಣತಿಯನ್ನು ಕಂಪನಿಯು ಹಂಚಿಕೊಂಡಿತು.

ತ್ಯಾಜ್ಯ ಸಂಸ್ಕರಣೆ, ಇಂಧನ ಉತ್ಪಾದನೆ ಮತ್ತು ದೀರ್ಘಕಾಲೀನ ಕಾರ್ಯಾಚರಣೆಗಳನ್ನು ಸಂಯೋಜಿಸುವ ಮೂಲಕ, ಕರ್ನಾಟಕದ ನಗರ ತ್ಯಾಜ್ಯ ನಿರ್ವಹಣಾ ಅಗತ್ಯಗಳಿಗೆ ತಕ್ಕಂತೆ ಜೆಎಫ್‌ಇ ಸಂಸ್ಥೆಯ ತಂತ್ರಜ್ಞಾನ ಮತ್ತು ಕಾರ್ಯನಿರ್ವಹಣಾ ಮಾದರಿಗಳನ್ನು ಅಳವಡಿಸಿಕೊಳ್ಳುವ ಸಾಧ್ಯತೆಗಳ ಕುರಿತು ನಿಯೋಗವು ಪರಿಶೀಲಿಸಿತು. ಆಯಾ ನಗರಗಳ ತ್ಯಾಜ್ಯದ ಸ್ವರೂಪ, ಸಂಗ್ರಹಣಾ ವ್ಯವಸ್ಥೆ, ಪ್ರಮಾಣ ಮತ್ತು ಮೂಲಸೌಕರ್ಯ ಅಗತ್ಯಗಳಿಗೆ ಅನುಗುಣವಾಗಿ ವಿಶೇಷ ಪರಿಹಾರಗಳನ್ನು ಅಭಿವೃದ್ಧಿಪಡಿಸುವ ಕುರಿತೂ ಚರ್ಚಿಸಲಾಯಿತು. ರಾಜ್ಯಾದ್ಯಂತ ಕಾರ್ಯಸಾಧುವಾದ ತ್ಯಾಜ್ಯದಿಂದ ಇಂಧನ ಉತ್ಪಾದನೆ ಮತ್ತು ನಗರ ಮೂಲಸೌಕರ್ಯ ಯೋಜನೆಗಳನ್ನು ಅನ್ವೇಷಿಸಲು ಜೆಎಫ್‌ಇ ಇಂಜಿನಿಯರಿಂಗ್‌ನೊಂದಿಗೆ ಮುಂದಿನ ಹಂತದ ಮಾತುಕತೆಗಳಿಗೆ ಅನುವು ಮಾಡಿಕೊಡಲಿದ್ದೇವೆ ಎಂದು ಸಿಎಂ ತಿಳಿಸಿದ್ದಾರೆ.

ಶಾಸಕ ವಿನಯ್ ಕುಲಕರ್ಣಿಗೆ ಮತ್ತೆ ಜೈಲು: ಜೀವಾವಧಿ ಶಿಕ್ಷೆ ಅಮಾನತು ಆದೇಶ ರದ್ದುಪಡಿಸಿದ ಸುಪ್ರೀಂ

ನವದೆಹಲಿ, ನ.25: ಧಾರವಾಡದ ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಮಧ್ಯಂತರ ರಿಲೀಫ್‌ಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ. ಹೈಕೋರ್ಟ್ ಅಮಾನತುಗೊಳಿಸಿದ್ದ ಅಪರಾಧ ಸಾಬೀತು ಆದೇಶ ಹಾಗೂ ಜೀವಾವಧಿ ಶಿಕ್ಷೆಯನ್ನು ಮರು ಸ್ಥಾಪಿಸಿರುವ ಸುಪ್ರೀಂ ಕೋರ್ಟ್, ವಿನಯ್ ಕುಲಕರ್ಣಿ ಸೇರಿ ಇತರ ಅಪರಾಧಿಗಳು



2 ವಾರದಲ್ಲಿ ಸಂಬಂಧಪಟ್ಟ ನ್ಯಾಯಾಲಯಕ್ಕೆ ಶರಣಾಗುವಂತೆ ಆದೇಶಿಸಿದೆ. ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಹಾಗೂ ಚಂದ್ರಶೇಖರ್ ಅವರನ್ನೊಳಗೊಂಡ ಪೀಠ ಈ ಮಹತ್ವದ ಆದೇಶ ನೀಡಿದೆ. ಪ್ರಕರಣದ ವಿಚಾರಣೆ ನಡೆಸಿದ್ದ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಿನಯ್ ಕುಲಕರ್ಣಿ ಸೇರಿ ಆರೋಪಿಗಳನ್ನು ದೋಷಿಗಳೆಂದು ಘೋಷಿಸಿ ಜೀವಾವಧಿ ಶಿಕ್ಷೆ ವಿಧಿಸಿತ್ತು. ಈ ತೀರ್ಪನ್ನು ಪ್ರಶ್ನಿಸಿ ವಿನಯ್ ಕುಲಕರ್ಣಿ ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್ ಅಪರಾಧ ಸಾಬೀತು ಆದೇಶಕ್ಕೆ ತಡೆ ನೀಡಿ, ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿತ್ತು. ಮೇಲ್ಮನವಿ ವಿಚಾರಣೆ ಪೂರ್ಣಗೊಳ್ಳುವವರೆಗೆ ಷರತ್ತುಬದ್ಧ ಜಾಮೀನಿನ ಮೇಲೆ ಬಿಡುಗಡೆಗೂ ಆದೇಶಿಸಿತ್ತು. ಹೈಕೋರ್ಟ್‌ನ ಈ ಆದೇಶವನ್ನು ಪ್ರಶ್ನಿಸಿ ಸಿಬಿಐ ಮತ್ತು ಯೋಗೇಶಗೌಡ ಸಹೋದರ ಗುರುನಾಥಗೌಡ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಕವಾಸಕಿ ಹೆವಿ ಇಂಡಸ್ಟ್ರೀಸ್ ಘಟಕ ವಿಸ್ತರಣೆಗೆ 10 ವರ್ಷದಲ್ಲಿ 800 ಕೋಟಿ ರೂ. ಹೂಡಿಕೆಗೆ ಬದ್ಧತೆ

600 ಉನ್ನತಮಟ್ಟದ ಉದ್ಯೋಗ ಸೃಷ್ಟಿಯ ನಿರೀಕ್ಷೆ

ಪ್ರಸ್ತಾವಿತ ಘಟಕವು ನಿರ್ಮಾಣ ಸಲಕರಣೆಗಳ ಉದ್ಯಮಕ್ಕೆ ಅಗತ್ಯವಿರುವ ಹೈಡ್ರಾಲಿಕ್ ಪಂಪ್ಗಳು, ಸ್ವಿಂಗ್ ಮೋಟಾರ್ಗಳು ಮತ್ತು ಸಂಬಂಧಿತ ಬಿಡಿಭಾಗಗಳನ್ನು ತಯಾರಿಸಲಿದೆ. ಈ ಹೂಡಿಕೆಯನ್ನು ಎರಡು ಹಂತಗಳಲ್ಲಿ ಅನುಷ್ಠಾನಗೊಳಿಸಲಾಗುವುದು; ಮೊದಲ ಹಂತದಲ್ಲಿ 200–400 ಕೋಟಿ ಮತ್ತು ಎರಡನೇ ಹಂತದಲ್ಲಿ 400–800 ಕೋಟಿ ಹೂಡಿಕೆಯಾಗಲಿದ್ದು, ಇದರಿಂದ ಸುಮಾರು 600 ಉನ್ನತ ಮಟ್ಟದ ಉತ್ಪಾದನಾ ಉದ್ಯೋಗಗಳು ಸೃಷ್ಟಿಯಾಗಲಿವೆ.

ಟೋಕಿಯೋ, ನ.25: ಹಾರೋಹಳ್ಳಿ ಕೈಗಾರಿಕಾ ಪ್ರದೇಶದ 5ನೇ ಹಂತದಲ್ಲಿರುವ 'ವಿಪ್ರೋ ಕವಾಸಕಿ ಪ್ರಿಸಿಷನ್ ಮೆಷಿನರಿ ಪ್ರೈವೇಟ್ ಲಿಮಿಟೆಡ್ ಘಟಕವನ್ನು ವಿಸ್ತರಿಸಲು ಕವಾಸಕಿ ಹೆವಿ ಇಂಡಸ್ಟ್ರೀಸ್ ಸಂಸ್ಥೆಯು ಮುಂದಿನ 10 ವರ್ಷಗಳಲ್ಲಿ 800 ಕೋಟಿವರೆಗೆ ಹೂಡಿಕೆ ಮಾಡಲು ಬದ್ಧತೆ ತೋರಿದ್ದು, ಇದು ಕರ್ನಾಟಕದ ಉತ್ಪಾದನಾ ಮತ್ತು ಎಂಜಿನಿಯರಿಂಗ್ ವಲಯಕ್ಕೆ ದೊಡ್ಡ ಉತ್ತೇಜನ ನೀಡಿದೆ.

ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರ ಸಮ್ಮುಖದಲ್ಲಿ ಟೋಕಿಯೊದಲ್ಲಿ ಈ ಒಡಂಬಡಿಕೆಗೆ ಸಹಿ ಹಾಕಲಾಯಿತು. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಸೆಲ್ವಕುಮಾರ್, ಐಎಎಸ್, ಕವಾಸಕಿ ಹೆವಿ ಇಂಡಸ್ಟ್ರೀಸ್ನ ಕೆಂಜಿ ಮಟ್ಸುಶಿತಾ ಮತ್ತು ವಿಪ್ರೋ ಕವಾಸಕಿ ಪ್ರಿಸಿಷನ್ ಮೆಷಿನರಿಯ ಸಿಇಒ ಮಿನೋರು ಹಟ್ಸುಡಾ ಅವರು ಒಪ್ಪಂದವನ್ನು ವಿನಿಮಯ ಮಾಡಿಕೊಂಡರು. 2012ರಲ್ಲಿ ಬೆಂಗಳೂರಿನಲ್ಲಿ ಸ್ಥಾಪನೆಯಾದ ವಿಪ್ರೋ ಕವಾಸಕಿ ಪ್ರಿಸಿಷನ್ ಮೆಷಿನರಿ, ಭಾರತದ ಎಕ್ಸ್ಕಾವೇಟರ್ ಹೈಡ್ರಾಲಿಕ್ ಪಂಪ್ ಮಾರುಕಟ್ಟೆಯಲ್ಲಿ ಮುಂಚೂಣಿಯಲ್ಲಿದೆ. ಈ ವಿಸ್ತರಣೆಯು ಈ ಯಶಸ್ವಿ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಕರ್ನಾಟಕದ ನಿರ್ಮಾಣ ಸಲಕರಣೆಗಳು ಮತ್ತು ಬಂಡವಾಳ ಸರಕು ವಲಯಕ್ಕೆ ಹೆಚ್ಚಿನ ಶಕ್ತಿ ತುಂಬಲಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮ್ಮುಖದಲ್ಲಿ ಒಡಂಬಡಿಕೆಗೆ ಸಹಿ



ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರ ಸಮ್ಮುಖದಲ್ಲಿ ಟೋಕಿಯೊದಲ್ಲಿ ಈ ಒಡಂಬಡಿಕೆಗೆ ಸಹಿ ಹಾಕಲಾಯಿತು.

ಮತಗಳ್ಳತನ ವಿರೋಧಿಸಿ ಕಾಂಗ್ರೆಸ್‌ನಿಂದ ಸಂವಿಧಾನ ರಕ್ಷಾ ಪಾದಯಾತ್ರೆ

ನವದೆಹಲಿ, ನ.25: ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಕ್ರಮಗಳು ಮತ್ತು ಮತ ಕಳ್ಳತನ ಆರೋಪಗಳನ್ನು ಮುಂದಿಟ್ಟುಕೊಂಡು, ಸಂವಿಧಾನ ದಿನವಾದ ನವೆಂಬರ್ 26ರಂದು ದೇಶಾದ್ಯಂತ ಬೃಹತ್ ಪ್ರತಿಭಟನಾ ಮೆರವಣಿಗೆಗಳನ್ನು ನಡೆಸಲು ಕಾಂಗ್ರೆಸ್ ನಿರ್ಧರಿಸಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಉತ್ತರ ಪ್ರದೇಶದ ಲಖನೌದಲ್ಲಿ ನಡೆಯಲಿರುವ ಪ್ರಮುಖ ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿದ್ದಾರೆ.



- **ಉತ್ತರ ಪ್ರದೇಶದ ಲಖನೌದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭಾಗಿ**

ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್, ಸಂವಿಧಾನವನ್ನು ರಕ್ಷಿಸುವ ನಮ್ಮ ಅಭಿಯಾನದ ಕೇಂದ್ರ ಬಿಂದುವಾಗಿ ನವೆಂಬರ್ 26ರಂದು ಪ್ರತಿಯೊಂದು ಪ್ರದೇಶ ಕಾಂಗ್ರೆಸ್ ಸಮಿತಿಯು ತಮ್ಮ ರಾಜ್ಯಗಳಲ್ಲಿ ಬೃಹತ್ ಸಂವಿಧಾನ ರಕ್ಷಾ ಪಾದಯಾತ್ರೆ ಆಯೋಜಿಸಲಿದೆ ಎಂದು ತಿಳಿಸಿದ್ದಾರೆ.

ಪ್ರತಿಯೊಂದು ಪಾದಯಾತ್ರೆಯೂ ಡಾ. ಬಿ.ಆರ್. ಅಂಬೇಡ್ಕರ್ ಅಥವಾ ಮಹಾತ್ಮ ಗಾಂಧಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರೊಂದಿಗೆ ಆರಂಭವಾಗಲಿದೆ. ಅದಾದ ಬಳಿಕ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಸಾರ್ವಜನಿಕರು ಸಾಮೂಹಿಕವಾಗಿ ಸಂವಿಧಾನದ ಪೀಠಿಕೆಯನ್ನು ಓದುವ ಮೂಲಕ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ಪ್ರತಿಜ್ಞೆ ಸ್ವೀಕರಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಪಾದಯಾತ್ರೆಯ ಜೊತೆಗೆ, ವೋಟ್ ರಕ್ಷಕ್ ಅಭಿಯಾನದ ಅಡಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿ ಮತಗಟ್ಟೆಗೆ (ಬೂತ್) ಭೇಟಿ ನೀಡಿ, ಮತದಾರರ ಪಟ್ಟಿಯಿಂದ ಅಕ್ರಮವಾಗಿ ಹೆಸರು ಅಳಿಸಲ್ಪಟ್ಟಿರುವ ಅರ್ಹ ಮತದಾರರನ್ನು ಗುರುತಿಸಿ, ಅವರಿಗೆ ಮತ್ತೆ ಮತದಾನದ ಹಕ್ಕು ದೊರಕಿಸಿಕೊಡಲು ನೆರವಾಗಲಿದ್ದಾರೆ ಎಂದು ಹೇಳಿದ್ದಾರೆ.

ಇನ್ನು ಸಂವಿಧಾನವನ್ನು ಗೌರವಿಸುವ ಪ್ರತಿಯೊಬ್ಬ ನಾಗರಿಕರು, ವಿದ್ಯಾರ್ಥಿಗಳು, ಯುವಜನರು, ರೈತರು, ಕಾರ್ಮಿಕರು, ಮಹಿಳೆಯರು, ದಲಿತ, ಆದಿವಾಸಿ, ಒಬಿಸಿ, ಅಲ್ಪಸಂಖ್ಯಾತ ಸಮುದಾಯಗಳು ಮತ್ತು ನಾಗರಿಕ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಈ ಮೆರವಣಿಗೆಗಳಲ್ಲಿ ಭಾಗಹಿಸಿ. ನವೆಂಬರ್ 26 ಅನ್ನು ಐತಿಹಾಸಿಕ ಸಂಕಲ್ಪದ ದಿನವನ್ನಾಗಿ ಮಾಡಬೇಕೆ ಎಂದು ಕೆ.ಸಿ. ವೇಣುಗೋಪಾಲ್ ಮನವಿ ಮಾಡಿದ್ದಾರೆ.

ಸಾಕ್ಷ್ಯ ಮುಂದಿಟ್ಟರೂ ತನಿಖೆ ಇಲ್ಲ: ವೇಣುಗೋಪಾಲ್



ಇನ್ನು ಒಬ್ಬ ನಾಗರಿಕನ ಮತವನ್ನು ಕದ್ದಾಗ, ಸಂವಿಧಾನ ನೀಡಿರುವ ಉಳಿದೆಲ್ಲಾ ಹಕ್ಕುಗಳು ಅರ್ಥಹೀನವಾಗುತ್ತವೆ ಎಂದು ಹೇಳಿರುವ ಕಾಂಗ್ರೆಸ್ ನಾಯಕ ವೇಣುಗೋಪಾಲ್ ಅವರು, ಮಹದೇವಪುರದಲ್ಲಿನ ನಕಲಿ ಮತದಾರರು, ಆಳಂದ ಕ್ಷೇತ್ರದಲ್ಲಿ ಸಾವಿರಾರು ಮತದಾರರ ಹೆಸರು ಅಳಿಸಲು ನಡೆದ ವ್ಯವಸ್ಥಿತ ಪ್ರಯತ್ನ ಮತ್ತು ಹರಿಯಾಣ ಸೇರಿದಂತೆ ವಿವಿಧ ರಾಜ್ಯಗಳ ಮತದಾರರ ಪಟ್ಟಿಯ ಅಕ್ರಮಗಳ ಬಗ್ಗೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ದಾಖಲೆ ಸಮೇತ ಸಾಕ್ಷ್ಯಗಳನ್ನು ದೇಶದ ಮುಂದಿಟ್ಟಿದ್ದಾರೆ. ಆದರೆ ಚುನಾವಣಾ ಆಯೋಗ ಮಾತ್ರ ನಿಷ್ಪಕ್ಷಪಾತ ತನಿಖೆ ಮಾಡದೆ ಆರೋಪಗಳನ್ನು ತಳ್ಳಿಹಾಕುತ್ತಿದೆ ಎಂದೂ ಈ ಸಂದರ್ಭದಲ್ಲೇ ದೂರಿದ್ದಾರೆ.

ಸುಪ್ರೀಂ ಕೋರ್ಟ್‌ನಲ್ಲಿ ರಾಹುಲ್ ಗಾಂಧಿಗೆ ರಿಲೀಫ್

ಸಿಬಿಐ, ಇ.ಡಿ. ತನಿಖೆಗೆ ಹೈಕೋರ್ಟ್ ನೀಡಿದ್ದ ಆದೇಶ ರದ್ದು

ನವದೆಹಲಿ, ನ.25: ಆದಾಯಕ್ಕಿಂತ ಅಧಿಕ ಆಸ್ತಿ ಹೊಂದಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಸಿಬಿಐ ಮತ್ತು ಜಾರಿ ನಿರ್ದೇಶನಾಲಯ ತನಿಖೆ ನಡೆಸುವಂತೆ ಅಲಹಾಬ

5 ಪ್ರಮುಖ ಯೋಜನೆಗಳಿಗೆ 20 ಸಾವಿರ ಕೋಟಿ ರೂ. ನಿಗದಿ

ಪ್ರಧಾನಿ ನೇತೃತ್ವದ ಕೇಂದ್ರ ಸಂಪುಟ ಸಭೆಯಲ್ಲಿ ಅನುಮೋದನೆ



ನವದೆಹಲಿ, ನ.25: ದೇಶದ ಮೂಲಸೌಕರ್ಯ ಅಭಿವೃದ್ಧಿ, ದೇಶೀಯ ಉತ್ಪಾದನಾ ವಲಯದ ಉತ್ತೇಜನ ಹಾಗೂ ಅಂಚೆ ಸೇವೆಗಳ ಆಧುನೀಕರಣಕ್ಕೆ ವೇಗ ನೀಡುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಬರೋಬ್ಬರಿ 19, 934 ಕೋಟಿ ಮೊತ್ತದ ಐದು ಮಹತ್ವದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.

ಈ ನಿರ್ಧಾರಗಳಲ್ಲಿ ಅಸ್ಸಾಂನಲ್ಲಿ ನೂತನ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣ ನಿರ್ಮಾಣ, ತಮಿಳುನಾಡಿನ ಕಾಮರಾಜರ್ ಬಂದರಿನಲ್ಲಿ ಎರಡನೇ ಕಂಟೈನರ್ ಟರ್ಮಿನಲ್ ಸ್ಥಾಪನೆ, ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ದೇಶೀಯ ತಯಾರಿಕಾ ಯೋಜನೆ ಹಾಗೂ ಅಂಚೆ ಇಲಾಖೆಯ ಎರಡು ಪ್ರಮುಖ ಯೋಜನೆಗಳ ಮುಂದುವರಿಕೆ ಸೇರಿವೆ.

ಒಟ್ಟಾರೆಯಾಗಿ, ಸುಮಾರು 20 ಸಾವಿರ ಕೋಟಿ ಮೊತ್ತದ ಈ ಐದು ಯೋಜನೆಗಳು ದೇಶದ ತಯಾರಿಕಾ ವಲಯ, ಬಂದರು ಅಭಿವೃದ್ಧಿ, ವಾಯುಯಾನ ಸಂಪರ್ಕ ಮತ್ತು ಗ್ರಾಮೀಣ ಮಟ್ಟದ ಅಂಚೆ ಸೇವೆಗಳಿಗೆ ಹೊಸ ಚೈತನ್ಯ ತುಂಬಲಿವೆ.

ಸಚಿವ ಸಂಪುಟದ ಪ್ರಮುಖ ನಿರ್ಧಾರ

1. ವಿದೇಶಿ ಯಂತ್ರೋಪಕರಣಗಳ ಮೇಲಿನ ಅವಲಂಬನೆ ತಗ್ಗಿಸುವುದು, ದೇಶೀಯ ಪೂರೈಕೆ ಸರಪಳಿಯನ್ನು ವಿಸ್ತರಿಸುವುದು ಹಾಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ನಿಟ್ಟಿನಲ್ಲಿ 'ಮೇಕ್ ಇನ್ ಇಂಡಿಯಾ' ಮತ್ತು 'ಆತ್ಮನಿರ್ಭರ ಭಾರತ' ಅಭಿಯಾನದಡಿ ದೇಶದಲ್ಲಿ ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ದೇಶೀಯ ಉತ್ಪಾದನಾ ವ್ಯವಸ್ಥೆಯನ್ನು ಬಲಪಡಿಸಲು 11,000 ಕೋಟಿ ರೂ. ಮೊತ್ತದ ಯೋಜನೆಗೆ ಹಸಿರು ನಿಶಾನೆ.

2. ತಮಿಳುನಾಡಿನ ಕಾಮರಾಜರ್ ಬಂದರಿನಲ್ಲಿ 4,288 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಎರಡನೇ ಕಂಟೈನರ್ ಟರ್ಮಿನಲ್ ಅಭಿವೃದ್ಧಿಗೆ ಅನುಮೋದನೆ. ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣ. ಬಂದರಿನ ಸರಕು ನಿರ್ವಹಣಾ ಸಾಮರ್ಥ್ಯ ಗಣನೀಯವಾಗಿ ಹೆಚ್ಚಲಿದ್ದು, ರಫ್ತು–ಆಮದು ವಹಿವಾಟಿಗೆ ದೊಡ್ಡ ಉತ್ತೇಜನ ಸಿಗಲಿದೆ.

3. ಈಶಾನ್ಯ ಭಾರತದ ವಾಯು ಸಂಪರ್ಕವನ್ನು ಮತ್ತಷ್ಟು ಸುಧಾರಿಸುವ ನಿಟ್ಟಿನಲ್ಲಿ ಅಸ್ಸಾಂನ ಸಿಲ್ಚಾರ್‌ನ ಡೋಲೂ ಎಂಬಲ್ಲಿ 2,014 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನೂತನ ಗ್ರೀನ್‌ಫೀಲ್ಡ್ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸಲು ಸಂಪುಟ ಸಮ್ಮತಿ. ಈ ಯೋಜನೆಯು ಬರಾಕ್ ಕಣಿವೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಆರ್ಥಿಕ ಪ್ರಗತಿ, ಪ್ರವಾಸೋದ್ಯಮ ಮತ್ತು ಸರಕು ಸಾಗಣೆಗೆ ಹೊಸ ವೇಗ ನೀಡಲಿದೆ.

4. ಅಂಚೆ ಸೇವೆ ಆಧುನೀಕರಣ, ತಂತ್ರಜ್ಞಾನ ಅಳವಡಿಕೆಗಾಗಿ 16ನೇ ಹಣಕಾಸು ಆಯೋಗದ ಅವಧಿಗೆ (2026–27ನೇ ಆರ್ಥಿಕ ವರ್ಷದಿಂದ 2030–31ರವರೆಗೆ) ಅನ್ವಯವಾಗುವಂತೆ 'ಅಂಚೆ ಕಾರ್ಯಾಚರಣೆ ಯೋಜನೆ'ಯನ್ನು ಮುಂದುವರಿಸಲು 1,141 ಕೋಟಿ ರೂ. ಅನುದಾನಕ್ಕೆ ಸಂಪುಟ ಒಪ್ಪಿಗೆ.

5. ಅಂಚೆ ಇಲಾಖೆಯ ಆಸ್ತಿಗಳು ಮತ್ತು ಕಟ್ಟಡಗಳ ಸಮರ್ಪಕ ನಿರ್ವಹಣೆ, ನವೀಕರಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗಾಗಿ ಎಸ್ಟೇಟ್ ನಿರ್ವಹಣಾ ಯೋಜನೆಯನ್ನು ಮುಂದುವರಿಸಲು 1,491 ಕೋಟಿ ರೂ. ಅನುದಾನ ಮೀಸಲಿಡಲು ಒಪ್ಪಿಗೆ.

ಭಾರತಕ್ಕೆ ಬಾಹ್ಯ ಶತ್ರುಗಳಿಗಿಂತ ಆಂತರಿಕ ಬೆದರಿಕೆಗಳೇ ಹೆಚ್ಚು ಅಪಾಯಕಾರಿ: ಮಾಜಿ ಸಿಡಿಎಸ್ ಅನಿಲ್ ಚೌಹಾಣ್



ನವದೆಹಲಿ, ನ.25: ಭಾರತದ ಪಾಲಿಗೆ ಬಾಹ್ಯ ಶತ್ರುಗಳಿಗಿಂತ ಆಂತರಿಕ ಬೆದರಿಕೆಗಳೇ ಹೆಚ್ಚು ಅಪಾಯಕಾರಿ ಎಂದು ರಕ್ಷಣಾ ಪಡೆಗಳ ಮಾಜಿ ಮುಖ್ಯಸ್ಥ (ಸಿಡಿಎಸ್) ಜನರಲ್ ಅನಿಲ್ ಚೌಹಾಣ್ ಎಚ್ಚರಿಕೆ ನೀಡಿದ್ದಾರೆ.

ಜ್ಞಾನಗಾಯನ ಫೌಂಡೇಶನ್ ಆಯೋಜಿಸಿದ್ದ ಪದ್ಮ ಉತ್ಸವದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, 'ದೇಶದ ಆಲೋಚನೆ, ಚಿಂತನೆ ಹಾಗೂ ಸಾಮಾಜಿಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುವ 'ಕಾಗ್ನಿಟಿವ್ ಡೊಮೇನ್' (ಮಾನಸಿಕ ಮತ್ತು ಬೌದ್ಧಿಕ ವಲಯ) ಪ್ರಸ್ತುತ ಭಾರತದ ಮುಂದಿರುವ ಅತಿ ದೊಡ್ಡ ಅಪಾಯ ಎಂದು ಎಚ್ಚರಿಸಿದ್ದಾರೆ.

"ಬಾಹ್ಯ ಶತ್ರುಗಳಿಗಿಂತ ಆಂತರಿಕ ಬೆದರಿಕೆಗಳು ಹೆಚ್ಚು ಅಪಾಯಕಾರಿ. ಬಾಹ್ಯ ಶತ್ರುಗಳನ್ನು ನಾವು ಗುರುತಿಸಬಹುದು. ಅವರ ವಿರುದ್ಧ ಹೋರಾಡುವಾಗ ಇಡೀ ದೇಶ ಒಂದಾಗುತ್ತದೆ. ಆದರೆ ಆಂತರಿಕ ಅಪಾಯಗಳಿಗೆ ಹೊರಗಿನ ಶಕ್ತಿಗಳ ಬೆಂಬಲವೂ ದೊರೆತಾಗ ಪರಿಸ್ಥಿತಿ ಮತ್ತಷ್ಟು ಅಪಾಯಕಾರಿಯಾಗುತ್ತದೆ" ಎಂದು ಎಚ್ಚರಿಕೆ ಕೊಟ್ಟರು.

"ಪ್ರಸ್ತುತ ಭಾರತಕ್ಕೆ ಎದುರಾಗಿರುವ ಅತಿ ದೊಡ್ಡ ಅಪಾಯ ಕಾಗ್ನಿಟಿವ್ ಡೊಮೇನ್‌ನಲ್ಲಿದೆ. ಇದು ನಮ್ಮ ಆಲೋಚನೆ, ಚಿಂತನೆ ಮತ್ತು ಸಮಾಜದ ಮೇಲೆ ನೇರ ಪರಿಣಾಮ ಬೀರುತ್ತದೆ. ಇಂತಹ 'ಕಾಗ್ನಿಟಿವ್ ವಾರ್‌ಫೇರ್' (ಮಾನಸಿಕ ಮತ್ತು ಬೌದ್ಧಿಕ ಯುದ್ಧ) ಹೊಸದೇನಲ್ಲ" ಎಂದು ಜನರಲ್ ಅನಿಲ್ ಚೌಹಾಣ್ ಹೇಳಿದರು.

ಭಾರತ ಅಭಿವೃದ್ಧಿ ಹೊಂದುವುದನ್ನು ಯಾವುದೇ ಪ್ರಬಲ ರಾಷ್ಟ್ರ ಬಯಸಲ್ಲ: ಮೋಹನ್ ಭಾಗವತ್



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮೋಹನ್ ಭಾಗವತ್, ಭಾರತ ಅಭಿವೃದ್ಧಿ ಹೊಂದುವುದನ್ನು ಜಗತ್ತಿನ ಯಾವುದೇ ಪ್ರಬಲ ರಾಷ್ಟ್ರ ಬಯಸುವುದಿಲ್ಲ. ದೊಡ್ಡ ದೇಶಗಳು ತಮ್ಮ ಪ್ರಾಬಲ್ಯವನ್ನು ಸ್ಥಾಪಿಸಲು ಬಯಸುತ್ತವೆ. ಅವುಗಳ ದೃಷ್ಟಿಯಲ್ಲಿ 'ಬಲಿಷ್ಠರು ಮಾತ್ರ ಬದುಕುಳಿಯುತ್ತಾರೆ' ಎಂಬ ತತ್ವವೇ ಮುಖ್ಯವಾಗಿದೆ ಎಂದು ಹೇಳಿದರು.

ಇದೇ ಅಭಿಪ್ರಾಯ ವ್ಯಕ್ತಪಡಿಸಿದ ಜನರಲ್ ಅನಿಲ್ ಚೌಹಾಣ್, ಭಾರತ ಯಶಸ್ವಿ, ಅಭಿವೃದ್ಧಿ ಹೊಂದಿದ ಮತ್ತು ಜಾಗತಿಕ ಮಟ್ಟದಲ್ಲಿ ಪ್ರಭಾವಿ ರಾಷ್ಟ್ರವಾಗಿ ಬೆಳೆಯುವುದನ್ನು ಅಭಿವೃದ್ಧಿ ಹೊಂದಿದ ದೇಶಗಳು ಬಯಸುವುದಿಲ್ಲ. ಭಾರತದ ಪ್ರಗತಿಗೆ ಅಡ್ಡಿಪಡಿಸುವ ಪ್ರಯತ್ನಗಳೂ ನಡೆಯಬಹುದು ಎಂದರು.

ಬಿಜೆಪಿ–ಅಕಾಲಿದಳದ್ದು ಮಾದಕವಸ್ತು ದಂಧೆಕೋರರ ಮೈತ್ರಿ: ಕೇಜ್ರಿವಾಲ್ ಟೀಕೆ

ನವದೆಹಲಿ, ನ.25: 2027ರ ಪಂಜಾಬ್ ವಿಧಾನಸಭಾ ಚುನಾವಣೆಗೆ ಮುನ್ನ ಭಾರತೀಯ ಜನತಾ ಪಕ್ಷ (ಬಿಜೆಪಿ) ಮತ್ತು ಶಿರೋಮಣಿ ಅಕಾಲಿದಳ (ಎಸ್‌ಎಡಿ) ಆರು ವರ್ಷಗಳ ಸುದೀರ್ಘ ವಿರಾಮದ ನಂತರ ಮತ್ತೆ ಕೈಜೋಡಿಸಿರುವುದು ಪಂಜಾಬ್ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಗುರುನಾನಕ್ ಜಯಂತಿಯ ದಿನದಂದೇ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಮತ್ತು ಅಕಾಲಿದಳದ ಅಧ್ಯಕ್ಷ ಸುಖ್ಬೀರ್ ಸಿಂಗ್ ಬಾದಲ್ ಜಂಟಿ ಸುದ್ದಿಗೋಷ್ಠಿ ನಡೆಸಿ ಮೈತ್ರಿಯನ್ನು ಅಧಿಕೃತವಾಗಿ ಘೋಷಿಸಿದ್ದಾರೆ. ಈ ಬೆಳವಣಿಗೆಯ ಬೆನ್ನಲ್ಲೇ ಆಡಳಿತಾರೂಢ ಆಮ್ ಆದ್ಮಿ ಪಕ್ಷ (ಎಎಪಿ) ಮತ್ತು ಪ್ರತಿಪಕ್ಷ ಕಾಂಗ್ರೆಸ್ ನಾಯಕರು ಈ ಮೈತ್ರಿಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಮಂಗಳವಾರ ಸುದ್ದಿಗಾರ ರೊಂದಿಗೆ ಮಾತನಾಡಿದ ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ಅಧಿಕಾರದ ದಾಹಕ್ಕಾಗಿ ಕೇಸರಿ ಪಕ್ಷ ಯಾರೊಂದಿಗೆ ಬೇಕಾದರೂ ಕೈಜೋಡಿಸುತ್ತದೆ ಎಂದು ಕಿಡಿಕಾರಿದರು. ಬಿಜೆಪಿ ಮತ್ತು ಅಕಾಲಿದಳ ತಮ್ಮ ರಾಜಕೀಯ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ಪದೇಪದೆ ಒಂದಾಗುವುದು ಮತ್ತು ಬೇರ್ಪಡುವುದನ್ನು ಮಾಡುತ್ತಲೇ ಬಂದಿವೆ. ಆದರೆ, ಎಎಪಿಯ ಮೈತ್ರಿ ಇರುವುದು ಪಂಜಾಬ್‌ನ ಮಹಿಳೆಯರು, ಪರಿಶಿಷ್ಟ ಜಾತಿ ಸಮುದಾಯ, ರೈತರು ಮತ್ತು ವ್ಯಾಪಾರಿಗಳೊಂದಿಗೆ. ನಾವು ರಾಜ್ಯದ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದ್ದೇವೆ ಎಂದು ಪ್ರತಿಪಾದಿಸಿದರು.

2020ರ ರೈತರ ಪ್ರತಿಭಟನೆಯನ್ನು ನೆನಪಿಸಿದ ಕೇಜ್ರಿವಾಲ್, ಕೇಂದ್ರದ ಮೂರು ಕೃಷಿ ಕಾಯ್ದೆಗಳ ವಿರುದ್ಧದ ಹೋರಾಟದಲ್ಲಿ 700ಕ್ಕೂ ಹೆಚ್ಚು ರೈತರು ಪ್ರಾಣ ಕಳೆದುಕೊಂಡಿದ್ದನ್ನು ಪಂಜಾಬ್ ಜನತೆ ಇನ್ನೂ ಮರೆತಿಲ್ಲ. ಕಳೆದ ಐದು ವರ್ಷಗಳಲ್ಲಿ ಮುಖ್ಯಮಂತ್ರಿ ಭಗವಂತ್ ಮಾನ್ ನೇತೃತ್ವದ ಎಎಪಿ ಸರ್ಕಾರ ದಶಕಗಳಿಂದ ರಾಜ್ಯವನ್ನು ಕಾಡುತ್ತಿದ್ದ ಸಮಸ್ಯೆಗಳನ್ನು ಬಗೆಹರಿಸುತ್ತಿರುವುದನ್ನು ಜನ ನೋಡಿದ್ದಾರೆ ಎಂದರು. ಇದೇ ವೇಳೆ, ಅಕಾಲಿದಳದ ಆಡಳಿತಾವಧಿ ಯಲ್ಲಿ ನಡೆದ ಪವಿತ್ರ ಗ್ರಂಥದ ಅಪಮಾನ ಪ್ರಕರಣಗಳು ಹಾಗೂ ಪಂಜಾಬ್ ಅನ್ನು ಮಾದಕವಸ್ತುಗಳ ವ್ಯಸನಕ್ಕೆ ತಳ್ಳಿದ ಕರಾಳ ದಿನಗಳನ್ನು ಕೇಜ್ರಿವಾಲ್ ಉಲ್ಲೇಖಿಸಿದರು.

ಈ ಮೈತ್ರಿಯು ಪಂಜಾಬ್‌ನಲ್ಲಿ ಡ್ರಗ್ಸ್ ದಂಧೆಯೊಂದಿಗೆ ನಂಟು ಹೊಂದಿದ್ದ ನಾಯಕರನ್ನು ಮತ್ತೆ ಒಟ್ಟುಗೂಡಿಸಿದೆ. ಈ ಹಿಂದೆ ಪಂಜಾಬ್ ಯುವ ಜನತೆಯನ್ನು ಮಾದಕವಸ್ತುಗಳ ವ್ಯಸನಕ್ಕೆ ತಳ್ಳಿದವರೇ ಇವರು. ಈಗ ಬಿಜೆಪಿ–ಅಕಾಲಿದಳ ಒಂದಾಗುತ್ತಿವೆಯೋ ಅಥವಾ ಹಳೆಯ ಡ್ರಗ್ಸ್ ಸ್ಮಗ್ಲರ್‌ಗಳು ಮತ್ತೆ ಕೈಜೋಡಿಸುತ್ತಿದ್ದಾರೋ ಎಂಬುದು ರಾಜ್ಯದ ಜನತೆಗೆ ಚೆನ್ನಾಗಿ ತಿಳಿದಿದೆ ಎಂದು ಎಎಪಿ ನಾಯಕ ಮನೀಶ್ ಸಿಸೋಡಿಯಾ ವಾಗ್ದಾಳಿ ನಡೆಸಿದರು.

ಈ ಮೈತ್ರಿಯು ಪಂಜಾಬ್ ಚುನಾವಣೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದ ಎಎಪಿ ಶಾಸಕ ಜರ್ನೈಲ್ ಸಿಂಗ್, ಎರಡು ಸೊನ್ನೆಗಳು ಸೇರಿದರೆ ಫಲಿತಾಂಶ ಸೊನ್ನೆಯೇ ಆಗಿರುತ್ತದೆ ಎಂದು ಲೇವಡಿ ಮಾಡಿದರು.

ಕೆಲಸದ ಆಧಾರದ ಮೇಲೆ ಮತ ಕೇಳುವ ಏಕೈಕ ಪಕ್ಷ ಎಂದು ಹೇಳಿದರು.

ಪಂಜಾಬ್ ಪ್ರದೇಶ ಕಾಂಗ್ರೆಸ್ ಸಮಿತಿ (ಪಿಪಿಸಿಸಿ) ಅಧ್ಯಕ್ಷ ಪರ್ಗತ್ ಸಿಂಗ್ ಸೇರಿದಂತೆ ಕಾಂಗ್ರೆಸ್ ನಾಯಕರು ಈ ಮೈತ್ರಿಯನ್ನು ಶತಮಾನದ ದೊಡ್ಡ ಸುಳ್ಳು ಮತ್ತು ದೌರ್ಬಲ್ಯದ ಸಂಕೇತ ಎಂದು ಟೀಕಿಸಿದ್ದಾರೆ.

1997ರಿಂದ 2002 ಮತ್ತು 2007ರಿಂದ 2017ರವರೆಗೆ ಒಟ್ಟು 15 ವರ್ಷಗಳ ಕಾಲ ಪಂಜಾಬ್ ಆಳಿದ್ದ ಬಿಜೆಪಿ–ಅಕಾಲಿದಳ ಮೈತ್ರಿಕೂಟ, 2020ರ ಸೆಪ್ಟೆಂಬರ್‌ನಲ್ಲಿ ಕೇಂದ್ರದ ಕೃಷಿ ಕಾಯ್ದೆಗಳನ್ನು ವಿರೋಧಿಸಿ ಮುರಿದುಬಿದ್ದಿತ್ತು. ಅಂದು ಕೇಂದ್ರ ಸಚಿವೆಯಾಗಿದ್ದ ಹರ್ಸಿಮ್ರತ್ ಕೌರ್ ಬಾದಲ್ ರಾಜೀನಾಮೆ ನೀಡಿ ಎನ್‌ಡಿಎ ಯಿಂದ ಹೊರನಡೆದಿದ್ದರು.



ಮೈತ್ರಿ ಪಕ್ಷವನ್ನೇ ರಾಜಕೀಯವಾಗಿ ನಿರ್ನಾಮ ಮಾಡುವುದು ಬಿಜೆಪಿಯ ಚಾಳಿ

ಮೈತ್ರಿ ಘೋಷಣೆಯ ವೇಳೆ ಅಮಿತ್ ಶಾ ಪಂಜಾಬ್ನಲ್ಲಿ ಅಕಾಲಿದಳವೇ 'ದೊಡ್ಡಣ್ಣ' ಮತ್ತು ಆ ಪಕ್ಷದ ನಾಯಕರೇ ಮುಖ್ಯಮಂತ್ರಿ ಅಭ್ಯರ್ಥಿಯಾಗಲಿದ್ದಾರೆ ಎಂದು ಘೋಷಿಸಿದ್ದರು. ಇದಕ್ಕೆ ತಿರುಗೇಟು ನೀಡಿದ ದೆಹಲಿ ಎಎಪಿ ಘಟಕದ ಅಧ್ಯಕ್ಷ ಸೌರಭ್ ಭಾರದ್ವಾಜ್, ಮೈತ್ರಿ ಪಕ್ಷಗಳಿಗೆ ದೊಡ್ಡಣ್ಣನ ಪಟ್ಟ ಕಟ್ಟಿ, ನಂತರ ಆ ಪಕ್ಷವನ್ನೇ ರಾಜಕೀಯವಾಗಿ ಮುಗಿಸುವುದು ಬಿಜೆಪಿಯ ಹಳೆಯ ಚಾಳಿ. ಒಡಿಶಾದಲ್ಲಿ ಬಿಜು ಜನತಾ ದಳ (ಬಿಜೆಡಿ) ಮತ್ತು ಬಿಹಾರದಲ್ಲಿ ನಿತೀಶ್ ಕುಮಾರ್ ಅವರ ಪಕ್ಷವನ್ನು ದುರ್ಬಲಗೊಳಿಸಿದಂತೆಯೇ, ಈಗ ಪಂಜಾಬ್‌ನಲ್ಲಿ ಅಕಾಲಿದಳವನ್ನು ದೊಡ್ಡ ಪಾಲುದಾರನನ್ನಾಗಿ ಮಾಡಿ ಅದರ ರಾಜಕೀಯ ಅಸ್ತಿತ್ವವನ್ನೇ ಬಿಜೆಪಿ ಮುಗಿಸಲಿದೆ ಎಂದು ಕೇಜ್ರಿವಾಲ್ ಭವಿಷ್ಯ ನುಡಿದರು.

ಸೀಟು ಹಂಚಿಕೆಯಲ್ಲಿ ಕಾಂಗ್ರೆಸ್–ಎಸ್‌ಪಿ ನಡುವೆ ಭಿನ್ನಾಭಿಪ್ರಾಯ

ಉತ್ತರಪ್ರದೇಶ ಚುನಾವಣೆ: 120 ಸ್ಥಾನಕ್ಕೆ ಕೈ ಬೇಡಿಕೆ, 26 ಸ್ಥಾನಗಳಿಗೆ ಎಸ್ಪಿ ಒಪ್ಪಿಗೆ

ನವದೆಹಲಿ, ನ.25: 2027ರ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷ (ಎಸ್‌ಪಿ)ದ ನಡುವೆ ಸೀಟು ಹಂಚಿಕೆ ವಿಚಾರದಲ್ಲಿ ಭಿನ್ನಾಭಿಪ್ರಾಯ ವ್ಯಕ್ತವಾಗಿದೆ. ಕಾಂಗ್ರೆಸ್ 120 ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಬೇಡಿಕೆ ಮುಂದಿಟ್ಟಿದ್ದರೆ, ಎಸ್‌ಪಿ ಆರಂಭಿಕವಾಗಿ 26 ಕ್ಷೇತ್ರಗಳನ್ನು ನೀಡುವ ಪ್ರಸ್ತಾವ ಮಾಡಿದೆ.

ಈ ನಡುವೆ ಸೀಟು ಹಂಚಿಕೆ ಬಗ್ಗೆ ಮಾತುಕತೆ ನಡೆಯುತ್ತಿರುವ ಹೊತ್ತಲ್ಲೇ ಎಸ್ಪಿ ಐದು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಣೆ ಮಾಡಿರುವುದು ಕಾಂಗ್ರೆಸ್ ಆಕ್ರೋಶಕ್ಕೆ ಕಾರಣವಾಗಿದೆ. ಎಸ್‌ಪಿ ಬಿಡುಗಡೆ ಮಾಡಿರುವ ಮೊದಲ ಐದು ಅಭ್ಯರ್ಥಿಗಳ ಪಟ್ಟಿಯಲ್ಲಿ ಬೆಹಟ್‌ನಿಂದ ಉಮರ್ ಅಲಿ ಖಾನ್, ಸಹಾರನ್‌ಪುರ ಗ್ರಾಮೀಣ ಕ್ಷೇತ್ರದಿಂದ ಆಶು ಮಲಿಕ್, ಕೈರಾನಾದಿಂದ ನಾಹಿದ್ ಹಸನ್, ಅಮ್ರೋಹಾದಿಂದ ಮೆಹಬೂಬ್ ಅಲಿ ಹಾಗೂ ಲಲಿತ್‌ಪುರದಿಂದ ಜ್ಯೋತಿ ಲೋಧಿ ಅವರಿಗೆ ಟಿಕೆಟ್ ನೀಡಲಾಗಿದೆ.

ಈ ಪೈಕಿ ಬೆಹಟ್ ಮತ್ತು ಸಹಾರನ್‌ಪುರ ಗ್ರಾಮೀಣ ಕ್ಷೇತ್ರಗಳ ಮೇಲೆ ಕಾಂಗ್ರೆಸ್ ಕೂಡ ಆಸಕ್ತಿ ಹೊಂದಿದೆ. ವಿಶೇಷವಾಗಿ ಸಹಾರನ್‌ಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಸಂಸದ ಇಮ್ರಾನ್ ಮಸೂದ್ ಅವರ ರಾಜಕೀಯ ನೆಲೆ ಇರುವ ಪ್ರದೇಶದಲ್ಲಿ ಎಸ್‌ಪಿ ಅಭ್ಯರ್ಥಿಗಳನ್ನು ಘೋಷಿಸಿರುವುದು ಅಸಮಾಧಾನಕ್ಕೆ ಕಾರಣವಾಗಿದೆ. ಈ ಬೆಳವಣಿಗೆ ಕುರಿತು ಕಾಂಗ್ರೆಸ್ ಸಂಸದ ಹಾಗೂ ಉತ್ತರ ಪ್ರದೇಶ ಕಾಂಗ್ರೆಸ್ ಕಾರ್ಯಾಧ್ಯಕ್ಷ ಇಮ್ರಾನ್ ಮಸೂದ್ ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. 'ನಾವು ಭಿಕ್ಷುಕರಲ್ಲ, ಅಖಿಲೇಶ್ ಯಾದವ್ ನೀಡುವ ಕ್ಷೇತ್ರಗಳಿಗಾಗಿ ಕಾಯುತ್ತಿಲ್ಲ. ಒಂದು ಕಡೆ ಮೈತ್ರಿ ಮಾತುಕತೆ ನಡೆಸುತ್ತಾ ಮತ್ತೊಂದೆಡೆ ಅಭ್ಯರ್ಥಿಗಳನ್ನು ಘೋಷಿಸುವುದಾದರೆ ಮೈತ್ರಿಯ ಉದ್ದೇಶವೇನು?' ಎಂದು ಪ್ರಶ್ನಿಸಿದ್ದಾರೆ. ಈ ಕುರಿತು ಅಂತಿಮ ನಿರ್ಧಾರವನ್ನು ಕಾಂಗ್ರೆಸ್ ಹೈಕಮಾಂಡ್ ತೆಗೆದುಕೊಳ್ಳಲಿದೆ ಎಂದೂ ತಿಳಿಸಿದ್ದಾರೆ.

ಇಂದು ಸಮಾಜವಾದಿ ಪಕ್ಷದ ಪ್ರಣಾಳಿಕೆ ಬಿಡುಗಡೆ

ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಎಸ್‌ಪಿ ತನ್ನ 'ಜನ–ಮನ ಪ್ರಣಾಳಿಕೆ'ಯನ್ನು ನವೆಂಬರ್ 26ರಂದು ಸಂವಿಧಾನ ದಿನದಂದು ಬಿಡುಗಡೆ ಮಾಡಲು ಸಿದ್ಧತೆ ನಡೆಸಿದೆ. 'ಸತ್ತಾಯೀಸ್ ಕಾ ಸಂಕಲ್ಪ್: ಪಿಡಿಎ ಕಾ ಪ್ರಮಾಣಪತ್ರ' ಎಂಬ ಹೆಸರಿನ ಈ ಪ್ರಣಾಳಿಕೆಯಲ್ಲಿ ಹಿಂದುಳಿದವರು, ದಲಿತರು ಮತ್ತು ಅಲ್ಪಸಂಖ್ಯಾತರ ಜೊತೆಗೆ ಮಹಿಳೆಯರು, ಯುವಕರು ಹಾಗೂ ಬಡವರ ಸಮಸ್ಯೆಗಳಿಗೆ ಆದ್ಯತೆ ನೀಡಲು ಉದ್ದೇಶಿಸಲಾಗಿದೆ. ಮಹಿಳೆಯರಿಗೆ ವಾರ್ಷಿಕ 40 ಸಾವಿರ ಆರ್ಥಿಕ ನೆರವು ಅಥವಾ ಪಿಂಚಣಿ, ಗೃಹಬಳಕೆದಾರರಿಗೆ 300 ಯೂನಿಟ್ ಉಚಿತ ವಿದ್ಯುತ್, ಸ್ವಯಂ ಉದ್ಯೋಗ ಆರಂಭಿಸಲು 2 ಲಕ್ಷದವರೆಗೆ ಆರ್ಥಿಕ ನೆರವು ಹಾಗೂ ಬಡವರಿಗೆ ಉಚಿತ ಚಿಕಿತ್ಸೆ ನೀಡುವ ಭರವಸೆಗಳನ್ನು ಪ್ರಣಾಳಿಕೆಯಲ್ಲಿ ಸೇರಿಸುವ ಸಾಧ್ಯತೆಯಿದೆ. ವಿದ್ಯಾರ್ಥಿಗಳಿಗೆ ಉಚಿತ ಮೆಟ್ರೊ ಪ್ರಯಾಣ ಸೇರಿದಂತೆ ಇನ್ನಿತರ ಪ್ರಸ್ತಾವಗಳೂ ವರದಿಯಾಗಿವೆ. ರಾಜ್ಯಮಟ್ಟದ ಪ್ರಣಾಳಿಕೆಯ ಜತೆಗೆ ಜಿಲ್ಲಾವಾರು ಮತ್ತು ಲಖನೌ ನಗರಕ್ಕೆ ಪ್ರತ್ಯೇಕ ಪ್ರಣಾಳಿಕೆ ರೂಪಿಸುವ ಸಿದ್ಧತೆಯೂ ನಡೆದಿದೆ. ಮಾಜಿ ಮುಖ್ಯ ಕಾರ್ಯದರ್ಶಿ ಅಲೋಕ್ ರಂಜನ್ ಅವರ ಮೇಲ್ವಿಚಾರಣೆಯಲ

ಮಂಗಳೂರಿನಲ್ಲಿ ಡೆಲಾಯ್ಟ್ ಸಂಸ್ಥೆಯ ಭಾರತದ 27ನೇ ಕಚೇರಿ ಉದ್ಘಾಟನೆ

ಕರ್ನಾಟಕದ ಜಿಡಿಪಿಗೆ 2ನೇ ಅತಿಹೆಚ್ಚು ಕೊಡುಗೆ ನೀಡುವ ಜಿಲ್ಲೆ ದಕ್ಷಿಣ ಕನ್ನಡ: ಪ್ರಿಯಾಂಕ್ ಮೆಚ್ಚುಗೆ

ಬೆಂಗಳೂರು, ನ.25: ಕರ್ನಾಟಕದ ಪ್ರಾದೇಶಿಕ ಅಭಿವೃದ್ಧಿಯ ಅಂತರವನ್ನು ಕಡಿಮೆ ಮಾಡುವಲ್ಲಿ ಮಂಗಳೂರು ಮಹತ್ವದ ಪಾತ್ರ ವಹಿಸುವ ಸಾಮರ್ಥ್ಯ ಹೊಂದಿದೆ. ಮಂಗಳೂರನ್ನು ಪ್ರಮುಖ ತಂತ್ರಜ್ಞಾನ ಮತ್ತು ಆರ್ಥಿಕ ಬೆಳವಣಿಗೆಯ ಕೇಂದ್ರವನ್ನಾಗಿ ರೂಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದೊಂದಿಗೆ ಕೈಜೋಡಿಸುವಂತೆ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಉದ್ಯಮ ವಲಯದ ನಾಯಕರಿಗೆ ಕರೆ ನೀಡಿದರು.

ಬೆಂಗಳೂರು ನಂತರ ಕರ್ನಾಟಕದ ರಾಜ್ಯದ ಒಟ್ಟು ಆಂತರಿಕ ಉತ್ಪನ್ನಕ್ಕೆ ಎರಡನೇ ಅತಿಹೆಚ್ಚು ಕೊಡುಗೆ ನೀಡುವ ಜಿಲ್ಲೆಯಾಗಿ ದಕ್ಷಿಣ ಕನ್ನಡ ಗುರುತಿಸಿಕೊಂಡಿದೆ. ರಾಜ್ಯದ ಒಟ್ಟು ಆಂತರಿಕ ಉತ್ಪನ್ನಕ್ಕೆ ಜಿಲ್ಲೆಯ ಕೊಡುಗೆ ಶೇ.5.3ರಷ್ಟಿದೆ. ಈ ಆರ್ಥಿಕ ಶಕ್ತಿ, ಈ ಭಾಗದ ಪ್ರತಿಭಾನ್ವಿತ ಮಾನವ ಸಂಪನ್ಮೂಲ, ಶೈಕ್ಷಣಿಕ ಸಂಸ್ಥೆಗಳು ಹಾಗೂ ಉತ್ತಮ ಜೀವನಮಟ್ಟದೊಂದಿಗೆ ಮಂಗಳೂರು, ಕರ್ನಾಟಕದ ಮುಂದಿನ ಹಂತದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುವ ಸಾಮರ್ಥ್ಯ ಹೊಂದಿದೆ. ಬಿಯಾಂಡ್ ಬೆಂಗಳೂರು: ಪ್ರಾದೇಶಿಕ ನಗರಗಳಿಗೆ ಬೆಳವಣಿಗೆಯ ಅವಕಾಶ ಸರ್ಕಾರದ ಬಿಯಾಂಡ್ ಬೆಂಗಳೂರು ಕಾರ್ಯತಂತ್ರವನ್ನು ವಿವರಿಸಿದ ಖರ್ಗೆ, ವಿವಿಧ ಪ್ರದೇಶಗಳ ಸಾಮರ್ಥ್ಯ ಮತ್ತು ಶಕ್ತಿಯನ್ನು ಬಳಸಿಕೊಂಡು ರಾಜ್ಯದಲ್ಲಿ ಬಹು ಆರ್ಥಿಕ ಬೆಳವಣಿಗೆಯ ಕೇಂದ್ರಗಳನ್ನು ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ.

ಮಂಗಳೂರಿನ ಇತಿಹಾಸ ದಲ್ಲೇ ಮೊದಲ ಬಾರಿಗೆ ನಗರದಲ್ಲಿ ಇತ್ತೀಚೆಗೆ ನಡೆದ ಕರ್ನಾಟಕ ಸಚಿವ ಸಂಪುಟ ಸಭೆಯನ್ನು ಉಲ್ಲೇಖಿಸಿದ ಅವರು, ಈ ಭಾಗದ ಪ್ರಮುಖ ಬೆಳವಣಿಗೆಯ ಅವಕಾಶಗಳನ್ನು ಗುರುತಿಸಲಾಗಿದ್ದು, ಪ್ರದೇಶದ ಅಭಿವೃದ್ಧಿಗಾಗಿ 6,000 ಕೋಟಿ ಅನುದಾನವನ್ನು ಮೀಸಲಿಡಲಾಗಿದೆ ಎಂದರು.

ಪ್ರಾದೇಶಿಕ ಅಭಿವೃದ್ಧಿಗೆ ಸರ್ಕಾರ ಬದ್ಧ



ಪ್ರಾದೇಶಿಕ ಅಭಿವೃದ್ಧಿಗೆ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ ಖರ್ಗೆ, ಹೂಡಿಕೆಗಳಿಗೆ ಅನುಕೂಲ ಕಲ್ಪಿಸುವುದು, ಪ್ರತಿಭಾನ್ವಿತ ಮಾನವ ಸಂಪನ್ಮೂಲ ವ್ಯವಸ್ಥೆಯನ್ನು ಬಲಪಡಿಸುವುದು ಹಾಗೂ ಕರಾವಳಿ ಕರ್ನಾಟಕದಲ್ಲಿ ಉದ್ಯಮಗಳಿಗೆ ಹೊಸ ಅವಕಾಶಗಳನ್ನು ಸೃಷ ಿಸುವ ನಿಟ್ಟಿನಲ್ಲಿ ಸರ್ಕಾರದಿಂದ ಸಂಪೂರ್ಣ ಸಹಕಾರ ನೀಡುವುದಾಗಿ ಉದ್ಯಮ ವಲಯದ ನಾಯಕರಿಗೆ ಭರವಸೆ ನೀಡಿದರು. ಕರ್ನಾಟಕದ ಮುಂದಿನ ಹಂತದ ಬೆಳವಣಿಗೆ ನಮ್ಮ ಪ್ರಾದೇಶಿಕ ನಗರಗಳಿಂದ ಬರಬೇಕು. ಬೆಂಗಳೂರಿನ ಆಚೆಗೂ ಇರುವ ಅವಕಾಶಗಳನ್ನು ಉದ್ಯಮಗಳು ಗುರುತಿಸಿ, ರಾಜ್ಯದಾದ್ಯಂತ ಸದೃಢ ಮತ್ತು ಸುಸ್ಥಿರ ಆರ್ಥಿಕ ವ್ಯವಸ್ಥೆಗಳನ್ನು ನಿರ್ಮಿಸುವಲ್ಲಿ ನಮ್ಮೊಂದಿಗೆ ಕೈಜೋಡಿಸಬೇಕು ಎಂಬುದು ನಮ್ಮ ಆಶಯ ಎಂದು ಹೇಳಿದರು.

ಮಕ್ಕಳ ಕಲಿಕಾ ಗುಣಮಟ್ಟ ಸುಧಾರಣೆಗೆ ಸರ್ಕಾರ ಆದ್ಯತೆ: ಸಚಿವ ಮಧು ಬಂಗಾರಪ್ಪ

2 ತಿಂಗಳಲ್ಲಿ ರಾಜ್ಯಾದ್ಯಂತ 1300 ಕೆಪಿಎಸ್ ಶಾಲೆಗಳ ಸ್ಥಾಪನೆ

3ನೇ ತರಗತಿಯಿಂದಲೇ ಎಐ ಶಿಕ್ಷಣ, ಕಂಪ್ಯೂಟರ್ ಕಲಿಕೆಗೆ ಅವಕಾಶ

ಬೆಂಗಳೂರು, ನ.25: ಮುಂದಿನ ಎರಡು ತಿಂಗಳ ಅವಧಿಯಲ್ಲಿ ರಾಜ್ಯಾದ್ಯಂತ 1,300 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ಸ್ಥಾಪಿಸುವ ಗುರಿ ಹೊಂದಿದ್ದು, ಈ ಶಾಲೆಗಳ ನಿರ್ಮಾಣದ ಮೂಲಕ ಕರ್ನಾಟಕವು ಶೈಕ್ಷಣಿಕವಾಗಿ ದೇಶದಲ್ಲೇ ಗಮನ ಸೆಳೆಯಲಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್ ಮಧು ಬಂಗಾರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಬೆಂಗಳೂರಿನ ಬಿಐಇಸಿ ಸಭಾಂಗಣದಲ್ಲಿ ಇಂಡಿಯಾ ಡೈಡ್ಯಾಕ್ ಆಯೋಜಿಸಿದ್ದ ಟೈಸ್ ಅಂತರರಾಷ್ಟ್ರೀಯ ಶಿಕ್ಷಣ ಮತ್ತು ಕೌಶಲ್ಯ ಕುರಿತ ಸಮ್ಮೇಳನ ಮತ್ತು ವಸ್ತುಪ್ರದರ್ಶನದಲ್ಲಿ



ಮಾತನಾಡಿ, ಮಕ್ಕಳ ಕಲಿಕೆಯ ಗುಣಮಟ್ಟ ಸುಧಾರಣೆಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ಕೆಪಿಎಸ್ ಶಾಲೆಗಳಲ್ಲಿ ಪ್ರತಿಯೊಂದು ವಿಷಯಕ್ಕೂ ನುರಿತ ಶಿಕ್ಷಕರನ್ನು ನೇಮಿಸಲಾಗುವುದು. ಮೂರನೇ ತರಗತಿಯಿಂದಲೇ ಕೃತಕ ಬುದ್ಧಿಮತ್ತೆ (ಎಐ) ಶಿಕ್ಷಣ ನೀಡಲಾಗುವುದು. ಪ್ರಾಥಮಿಕ ಹಂತದಿಂದಲೇ ಕಂಪ್ಯೂಟರ್ ಕಲಿಕೆಗೆ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಶೃಂಗಸಭೆಯಲ್ಲಿ ಮಾಲ್ಡೀವ್ಸ್ ಗಣರಾಜ್ಯದ ಉನ್ನತ ಶಿಕ್ಷಣ ಸಚಿವ ಅಹಮದ್ ಶೆಫ್ಯೂ, ಕರ್ನಾಟಕದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್, 'ಆರ್ಟ್ ಆಫ್ ಲಿವಿಂಗ್ ಫೌಂಡೇಶನ್' ಸಂಸ್ಥೆಯ ರವಿಶಂಕರ್, ಮಾಜಿ ಸಚಿವ ಸಿ ಎನ್ ಅಶ್ವತ್ಥನಾರಾಯಣ, ವಿಧಾನ ಪರಿಷತ್ ಮುಖ್ಯ ಸಚೇತಕ ಮಂಜುನಾಥ ಭಂಡಾರಿ ಉಪಸ್ಥಿತರಿದ್ದರು.

4500 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ

ಕೆಪಿಎಸ್ ಶಾಲೆಗಳ ಅಭಿವೃದ್ಧಿಗೆ ಏಷ್ಯನ್ ಅಭಿವೃದ್ಧಿ ಬ್ಯಾಂಕ್ (ಎಡಿಬಿ) ಸಾಲ ನೀಡುತ್ತಿದ್ದು, ರಾಜ್ಯ ಸರ್ಕಾರದ ಅನುದಾನ ಸೇರಿದಂತೆ ಒಟ್ಟು 4,500 ಕೋಟಿ ರೂ. ವೆಚ್ಚದಲ್ಲಿ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುವುದು. ಎಲ್‌ಕೆಜಿಯಿಂದ ಪಿಯುಸಿವರೆಗೆ ಒಂದೇ ಕ್ಯಾಂಪಸ್‌ನಲ್ಲಿ ಗುಣಮಟ್ಟದ ಶಿಕ್ಷಣ ದೊರೆಯಲಿದೆ. ಪ್ರತಿಯೊಂದು ಕೆಪಿಎಸ್ ಶಾಲೆಗೂ ಸರ್ಕಾರದ ವತಿಯಿಂದ ಉಚಿತ ಬಸ್ ಸೌಲಭ್ಯ ಕಲ್ಪಿಸುವ ಉದ್ದೇಶವಿದೆ. ಶೈಕ್ಷಣಿಕ ವಿಷಯಗಳ ಬೋಧನೆಯ ಜೊತೆಗೆ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿ ಸಂಗೀತ ಮತ್ತು ರಂಗಭೂಮಿ ಶಿಕ್ಷಕರನ್ನೂ ಕೆಪಿಎಸ್ ಶಾಲೆಗಳಲ್ಲಿ ಒದಗಿಸಲಾಗುವುದು. ನಮ್ಮದು ಸಂಸ್ಕೃತಿಯನ್ನು ಗೌರವಿಸುವ ದೇಶ. ಅದರಲ್ಲೂ ದಕ್ಷಿಣ ಭಾರತದಲ್ಲಿ ಸಂಸ್ಕೃತಿ ಮತ್ತು ಪರಂಪರೆಗೆ ವಿಶೇಷ ಗೌರವವಿದೆ. ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವುದಕ್ಕೂ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ಮಧು ಬಂಗಾರಪ್ಪ ಹೇಳಿದರು.

ಐದು ನಗರಪಾಲಿಕೆ ಹಾಗೂ ಬಿಬಿಎಂಪಿ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ

ಫೆಬ್ರವರಿಯೊಳಗೆ ರಸ್ತೆ ಕಾಮಗಾರಿ ಪೂರ್ಣಗೊಳಿಸುವಂತೆ ಕೃಷ್ಣಬೈರೇಗೌಡ ಸೂಚನೆ

ಬೆಂಗಳೂರು, ನ.25: ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಫೆಬ್ರವರಿ ವೇಳೆಗೆ ಬಹುತೇಕ ಪೂರ್ಣಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಗರದ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುರಿತು ಐದು ನಗರ ಪಾಲಿಕೆಗಳ ಹಾಗೂ ಬಿಬಿಎಂಪಿ ಅಧಿಕಾರಿಗಳೊಂದಿಗೆ ನಡೆಸಿದ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಸ್ತೆ ಗುಂಡಿಗಳು ಹಾಗೂ ಹದಗೆಟ್ಟ ರಸ್ತೆಗಳಿಂದ ಸಾರ್ವಜನಿಕರು ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದಾರೆ. ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸರ್ಕಾರ ಅಗತ್ಯ ಅನುದಾನ ಒದಗಿಸಿದ್ದು, ಕಾಮಗಾರಿಗಳನ್ನು ವಿಳಂಬ ಮಾಡದೆ ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಮಳೆಗಾಲದಿಂದ ಕಾಮಗಾರಿಗಳಿಗೆ ಅಡಚಣೆಯಾಗಿದ್ದು, ಮಧ್ಯಪ್ರಾಚ್ಯದ



ಪ್ರತಿಕೂಲ ಪರಿಸ್ಥಿತಿಯಿಂದ ಟಾರ್ ಬೆಲೆಯೂ ಏರಿಕೆಯಾಗಿತ್ತು. ಇದೀಗ ಮಳೆಗಾಲ ಮುಗಿದಿರುವುದರಿಂದ ಸ್ಟಾರ್ ರೇಟ್ ಆಧಾರದಲ್ಲಿ ಡಾಂಬರೀಕರಣಕ್ಕೆ ಹಣ ಪಾವತಿಸಲಾಗುತ್ತಿದೆ. ಹೀಗಾಗಿ ಕಾಮಗಾರಿಗಳ ವೇಗ ಹೆಚ್ಚಿಸಿ, ಗುತ್ತಿಗೆದಾರರೊಂದಿಗೆ ಚರ್ಚಿಸಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸುವ ಮೂಲಕ ನಿಗದಿತ ಅವಧಿಯಲ್ಲಿ ಕೆಲಸ ಪೂರ್ಣಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಆನ್‌ಲೈನ್‌ನಲ್ಲೇ ಕಾಮಗಾರಿಗಳ ನಿಗಾ: ರಸ್ತೆ ಕಾಮಗಾರಿಗಳ ಪ್ರಗತಿಯನ್ನು ಅಧಿಕಾರಿಗಳು ಕಚೇರಿಯಲ್ಲಿಯೇ ಕುಳಿತು ಮೊಬೈಲ್ ಅಥವಾ ಕಂಪ್ಯೂಟರ್ ಮೂಲಕ ವೀಕ್ಷಿಸಲು ರಿಮ್ಸ್ ವ್ಯವಸ್ಥೆಯಲ್ಲಿ ಲೈವ್ ಡೇಟಾ ಲಭ್ಯವಾಗುವಂತೆ ಮಾಡಬೇಕು ಎಂದು ಕೃಷ್ಣ ಬೈರೇಗೌಡ ಸೂಚಿಸಿದರು.

120 ಕಿ.ಮೀ. ವೈಟ್ ಟಾಪಿಂಗ್ ಕಾಮಗಾರಿ: ನಗರದಲ್ಲಿ ಈಗಾಗಲೇ 120 ಕಿ.ಮೀ. ಉದ್ದದ ವೈಟ್ ಟಾಪಿಂಗ್ ಕಾಮಗಾರಿಗಳು ಪ್ರಗತಿಯಲ್ಲಿವೆ. ಸಂಚಾರ ದಟ್ಟಣೆಯಿಂದಾಗಿ ಸುಮಾರು 20ರಿಂದ 25 ಕಿ.ಮೀ. ರಸ್ತೆಗಳಲ್ಲಿ ಕಾಮಗಾರಿಗೆ ಅನುಮತಿ ದೊರೆಯುತ್ತಿಲ್ಲ. ಸಂಚಾರಕ್ಕೆ ತೊಂದರೆಯಾಗದಂತೆ ಹಂತ ಹಂತವಾಗಿ ಕೆಲಸ ಕೈಗೆತ್ತಿಕೊಳ್ಳಲಾಗುತ್ತಿದ್ದು, ಕಾಮಗಾರಿ ನಡೆಸಲು ಅವಕಾಶವಿರುವ ಸ್ಥಳಗಳಲ್ಲಿ ಡಿಸೆಂಬರ್ ವೇಳೆಗೆ ಕೆಲಸ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

2,321 ಕೋಟಿ ರೂ. ವೆಚ್ಚದಲ್ಲಿ 88 ರಸ್ತೆ ಅಭಿವೃದ್ಧಿ: ನಗರದಲ್ಲಿ 2,321 ಕೋಟಿ ರೂ. ವೆಚ್ಚದಲ್ಲಿ 130 ಕಿ.ಮೀ. ಉದ್ದದ 88 ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಯೋಜಿಸಲಾಗಿದೆ. ಮುಂದಿನ ಎರಡರಿಂದ ಮೂರು ತಿಂಗಳೊಳಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಆರಂಭಿಸುವ ಗುರಿ ಹೊಂದಲಾಗಿದೆ ಎಂದರು.

ಡಿಸೆಂಬರ್ ಅಂತ್ಯಕ್ಕೆ ವಾರ್ಡ್ ಒನ್ ಅಭಿಯಾನ ಪೂರ್ಣ: ವಾರ್ಡ್ ಒನ್ ಅಭಿಯಾನದಡಿ ರಸ್ತೆ ಗುಂಡಿಗಳನ್ನು ಮುಚ್ಚುವುದರ ಜತೆಗೆ ರಸ್ತೆ ದುರಸ್ತಿ, ಸ್ವಚ್ಛತೆ ಹಾಗೂ ವಾರ್ಡ್‌ಗಳ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ಡಿಸೆಂಬರ್ ಅಂತ್ಯದೊಳಗೆ ಅಭಿಯಾನವನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಸಭೆಯಲ್ಲಿ ವಿಶೇಷ ಆಯುಕ್ತರಾದ ನಿತೀಶ್, ಲಕ್ಷ್ಮೀಪ್ರಿಯಾ, ನಗರ ಪಾಲಿಕೆ ಆಯುಕ್ತರಾದ ಡಿ.ಎಸ್. ರಮೇಶ್, ಪೊಮ್ಮಲ ಸುನೀಲ್ ಕುಮಾರ್, ಕೆ.ಎನ್. ರಮೇಶ್, ಜಿ. ಜಗದೀಶ್ ಸೇರಿದಂತೆ ಅಪರ ಆಯುಕ್ತರು, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು, ಅಧೀಕ್ಷಕ ಅಭಿಯಂತರರು ಹಾಗೂ ಕಾರ್ಯಪಾಲಕ ಅಭಿಯಂತರರು ಉಪಸ್ಥಿತರಿದ್ದರು.

ಸುರಂಗ ರಸ್ತೆ: ಲಾಲ್‌ಬಾಗ್‌ಗೆ ಹಾನಿಯಿಲ್ಲ, ಉದ್ಯಾನದ ಹೊರಭಾಗದಲ್ಲಿ ನಿರ್ಮಾಣಕ್ಕೆ ನಿರ್ಧಾರ

ಲಾಲ್‌ಬಾಗ್ ಉದ್ಯಾನವನದ ಒಳಭಾಗದಲ್ಲಿ ಸುರಂಗ (ಟನಲ್) ರಸ್ತೆ ನಿರ್ಮಿಸಲಾಗುತ್ತದೆ ಎಂಬ ಸಾರ್ವಜನಿಕರ ಆತಂಕವನ್ನು ಬೆಂಗಳೂರು ನಗರ ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ದೂರ ಮಾಡಿದ್ದಾರೆ. ಈ ಯೋಜನೆಗೆ ಪರಿಸರ ಪ್ರೇಮಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿದ್ದಲ್ಲದೆ, ಸಂಸದ ತೇಜಸ್ವಿ ಸೂರ್ಯ ಕೂಡ ಈ ಕುರಿತು ಅಭಿಯಾನ ನಡೆಸಿದ್ದರು. ಇದೀಗ ಉದ್ಯಾನಕ್ಕೆ ಧಕ್ಕೆಯಾಗದಂತೆ ಲಾಲ್‌ಬಾಗ್ ಹೊರಭಾಗದಲ್ಲಿ ಸುರಂಗ ಮಾರ್ಗ ನಿರ್ಮಿಸಲು ಸರ್ಕಾರ ನಿರ್ಧರಿಸಿದೆ. ಇದಕ್ಕಾಗಿ ಯೋಜನೆಯ ಮಾರ್ಗ ವಿನ್ಯಾಸವನ್ನು (ಅಲೈನ್‌ಮೆಂಟ್) ಬದಲಾಯಿಸಲಾಗುತ್ತಿದ್ದು, ಸದ್ಯ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದೆ. ಪರ್ಯಾಯವಾಗಿ ಎರಡು ರಸ್ತೆಗಳನ್ನು ಗುರುತಿಸುವ ಪ್ರಕ್ರಿಯೆಯಲ್ಲಿ ಸರ್ಕಾರ ನಿರತವಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.



ಕೊಡವ ಸಮಾಜದ ಸದಸ್ಯರು ಬುಧವಾರ ಮೈಸೂರಿನ ಕುವೆಂಪುನಗರದಲ್ಲಿರುವ ಕಾವೇರಿ ಶಿಕ್ಷಣ ಸಂಸ್ಥೆಯಲ್ಲಿ ಪುತ್ತರಿ ನಮ್ಮೆ (ಕೊಡವ ಸಾಂಪ್ರದಾಯಿಕ ಸುಗ್ಗಿ ಹಬ್ಬ) ಆಚರಿಸಿದರು.

ಬಸವ ಸಂಸ್ಕೃತಿ ಮೇಲಿನ ದಾಳಿ ನಿಲ್ಲದಿದ್ದರೆ ಬೀದಿಗಿಳಿದು ಹೋರಾಟ: ಲಿಂಗಾಯತ ಮಠಾಧೀಶರ ಎಚ್ಚರಿಕೆ

ವಿವಾದಿತ ಕೃತಿ ಸಂಪೂರ್ಣ ನಿಷೇಧಕ್ಕೆ ಆಗ್ರಹ; ಬಸವ ತತ್ವಕ್ಕೆ ಧಕ್ಕೆ ತಂದವರ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯ



ಬೆಂಗಳೂರು, ನ.25: ಬಸವಣ್ಣನವರು, ಬಸವಾದಿ ಶರಣರು ಹಾಗೂ ಬಸವ ಸಂಸ್ಕೃತಿಯ ವಿರುದ್ಧ ನಡೆಯುತ್ತಿರುವ ಅಪಪ್ರಚಾರವನ್ನು ತಕ್ಷಣ ನಿಲ್ಲಿಸಬೇಕು. ಇಲ್ಲದಿದ್ದರೆ ಕನ್ನಡ ನಾಡಿನ ಜನತೆ ಒಗ್ಗಟ್ಟಿನಿಂದ ಬೀದಿಗಿಳಿದು ಹೋರಾಟ ನಡೆಸ ಬೇಕಾಗುತ್ತದೆ ಎಂದು ಲಿಂಗಾಯತ ಮಠಾಧೀಶರ ಒಕ್ಕೂಟ ಎಚ್ಚರಿಕೆ ನೀಡಿದೆ.

ಬಸವಣ್ಣನವರ ಕುರಿತು ರವಿ ಹಂಜ್ ವಿವಾದಾತ್ಮಕ ಕೃತಿಯ ವಿರುದ್ಧ ನಗರದ ಬಸವ ಸಮಿತಿಯಲ್ಲಿ ನಡೆದ 'ಇವ ನಮ್ಮವ' ಚಿಂತನ-ಮಂಥನ ಸಭೆಯಲ್ಲಿ ತೀವ್ರ ಆಕ್ರೋಶ ವ್ಯಕ್ತವಾಯಿತು. ವಿವಾದಿತ ಕೃತಿಯನ್ನು ಸಂಪೂರ್ಣ ನಿಷೇಧಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಒತ್ತಾಯಿಸಿ ಸಭೆ ಸರ್ವಾನುಮತದ ನಿರ್ಣಯ ಕೈಗೊಂಡಿತು.

ಸಭೆಯ ಸಾನ್ನಿಧ್ಯ ವಹಿಸಿದ್ದ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ವಿವಾದಿತ ಲೇಖಕನ ಹತ್ಯೆಗೆ ಬಹುಮಾನ ಘೋಷಿಸುವುದು ಸರಿಯಲ್ಲ. ವ್ಯಕ್ತಿಯನ್ನು ಕೊಲ್ಲುವ ಬದಲು ಅವರ ತಲೆಯಲ್ಲಿರುವ ಕಸವನ್ನು ತೆಗೆಯುವ ಕೆಲಸವಾಗಬೇಕು. ಪ್ರತಿ ಗ್ರಾಮದಲ್ಲೂ ಅನುಭವ ಮಂಟಪ ಅಭಿಯಾನ ಆರಂಭಿಸಿ, ವಿವಾದಿತ ಕೃತಿಗೆ ಸಂಶೋಧನಾತ್ಮಕ ಉತ್ತರ ನೀಡುವ ಗ್ರಂಥ ಪ್ರಕಟಿಸಬೇಕು ಎಂದರು.

ಸಿದ್ಧಗಂಗೆಯ ಸಿದ್ಧಲಿಂಗ ಸ್ವಾಮೀಜಿ ಮಾತನಾಡಿ, ಬಸವಣ್ಣನವರು ಒಂದು ಜಾತಿಗೆ ಸೀಮಿತರಲ್ಲ, ಇಡೀ ಮನುಕುಲಕ್ಕೆ ದಾರಿದೀಪ. ವಿವಾದಿತ ಕೃತಿಯನ್ನು ಸಂಪೂರ್ಣ ನಿಷೇಧಿಸಬೇಕು ಎಂದು ಆಗ್ರಹಿಸಿದರು. ಕೂಡಲ ಸಂಗಮದ ಗಂಗಾ ಮಾತಾಜಿ, ಬಸವಣ್ಣನವರ ವಿಚಾರದಲ್ಲಿ ಭಿನ್ನಾಭಿಪ್ರಾಯ ಮರೆತು ಎಲ್ಲರೂ ಒಂದಾಗಬೇಕು ಎಂದರು.

ಬಸವಕುಮಾರ ಸ್ವಾಮೀಜಿ, ಮಲ್ಲಿಕಾರ್ಜುನ ಮುರುಘರಾಜೇಂದ್ರ ಸ್ವಾಮೀಜಿ, ಕುಂದೂರು ಮಠದ ಶರಶ್ಚಂದ್ರ ಸ್ವಾಮೀಜಿ, ಚಿಂತಕ ಎಸ್.ಜಿ. ಸಿದ್ಧರಾಮಯ್ಯ, ಎಲ್. ಹನುಮಂತಯ್ಯ, ಕೆಆರ್‌ಎಸ್ ಪಕ್ಷದ ರವಿ ಕೃಷ್ಣಾರೆಡ್ಡಿ ಉಪಸ್ಥಿತರಿದ್ದರು.

ರಾಜ್ಯೋತ್ಸವದ ಅಂಗವಾಗಿ ಕಬ್ಬನ್‌ಪಾರ್ಕ್‌ನಲ್ಲಿ ಡಿ.7ರವರೆಗೆ ಹೂವಿನ ಹಬ್ಬ

ಬೆಂಗಳೂರು, ನ.25: ಮಕ್ಕಳ ದಿನಾಚರಣೆ ಹಾಗೂ ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿ ಡಿಸೆಂಬರ್ 7ರ ವರೆಗೆ "ಹೂವಿನ ಹಬ್ಬ 2026 – ಫಲಪುಷ್ಪ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಲಾಲ್‌ಬಾಗ್ ಮಾದರಿಯಲ್ಲಿ ಕಬ್ಬನ್ ಪಾರ್ಕ್‌ನಲ್ಲೂ ಕಳೆದ ವರ್ಷದಿಂದ ಫಲಪುಷ್ಪ ಪ್ರದರ್ಶನ ಆಯೋಜಿಸುತ್ತಿದ್ದು, ಇಂದಿನಿಂದ ಡಿಸೆಂಬರ್ 7ರ ವರೆಗೂ ಪ್ರದರ್ಶನ ನಡೆಯಲಿದೆ. ವೀಕ್ಷಕರು ಭೇಟಿ ನೀಡುತ್ತಿದ್ದಾರೆ.

ಕಬ್ಬನ್ ಪಾರ್ಕ್‌ನ ಉಪ ನಿರ್ದೇಶಕರಾದ ಕುಸುಮಾ ಮಾತನಾಡಿ, ಕಳೆದ ವರ್ಷದಿಂದ ಕಬ್ಬನ್ ಪಾರ್ಕ್‌ನಲ



ಹಾಸನ ಜಿಲ್ಲೆಯಿಂದ ಕಾಡಾನೆಗಳನ್ನು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆಯಲ್ಲಿರುವ ಭದ್ರಾ ವನ್ಯಜೀವಿ ಧಾಮದತ್ತ ಸ್ಥಳಾಂತರಿಸಲು ಅರಣ್ಯ ಇಲಾಖೆ ಕೈಗೊಂಡಿರುವ ಕಾರ್ಯಾಚರಣೆ ವಿರುದ್ಧ ಮೂಡಿಗೆರೆ ತಾಲೂಕಿನ ನಿವಾಸಿಗಳು ಬುಧವಾರ ಪ್ರತಿಭಟನೆ ನಡೆಸಿ, ಬಂದ್‌ಗೆ ಕರೆ ನೀಡಿದರು.

ಎಲ್‌ನಿನೊ ಎಫೆಕ್ಟ್: ಕುಡಿಯುವ ಉದ್ದೇಶದ ತುಂಗಭದ್ರಾ ನೀರು ನೀರಾವರಿಗೆ ಬಳಕೆ



ರಾಯಚೂರು, ನ. 25: ಎಲ್–ನಿನೊ ಪರಿಣಾಮದ ಆತಂಕದ ನಡುವೆ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಬೆಳೆ ಉಳಿಸಿಕೊಳ್ಳಲು ನೀರಾವರಿ ಸಲಹಾ ಸಮಿತಿ ನಿರ್ಧಾರ ಕೈಗೊಂಡಿರುವುದು ಚರ್ಚೆಗೆ ಗ್ರಾಸವಾಗಿದೆ.

ಮುಂಗಾರು ಹಂಗಾಮಿನಲ್ಲಿ ನಾಟಿ ಮಾಡಿರುವ ಭತ್ತದ ಬೆಳೆಯನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಇದೇ ಮೊದಲ ಬಾರಿಗೆ ಜಲಾಶಯದಲ್ಲಿ ಕುಡಿಯುವ ನೀರಿಗಾಗಿ ಕಾಯ್ದಿರಿಸಿದ್ದ ನೀರಿನಲ್ಲಿಯೇ ಒಂದಿಷ್ಟು ಪ್ರಮಾಣವನ್ನು ನೀರಾವರಿಗೆ ಬಳಸಲು ಮುಂದಾಗಿದೆ.

ಆದರೂ ಅಚ್ಚುಕಟ್ಟು ಪ್ರದೇಶದಲ್ಲಿ ಸುಮಾರು 8ರಿಂದ 10 ಲಕ್ಷ ಎಕರೆ ಪ್ರದೇಶದಲ್ಲಿ ಬೆಳೆದಿರುವ ಭತ್ತದ ಬೆಳೆಯನ್ನು ಸಂಪೂರ್ಣವಾಗಿ ಉಳಿಸಿಕೊಳ್ಳಲು ಈ ನೀರು ಸಾಕಾಗುವುದಿಲ್ಲ ಎಂಬ ಆತಂಕ ರೈತರನ್ನು ಕಾಡುತ್ತಿದೆ.

ಹೌದು, ತುಂಗಭದ್ರಾ ಜಲಾಶಯದಲ್ಲಿ ಕರ್ನಾಟಕದ ಪಾಲಿನ ನೀರಿನ ಬಳಕೆ ಬಹುತೇಕ ಮುಕ್ತಾಯದ ಹಂತ ತಲುಪಿದೆ. ಆದರೆ, ಈಗಾಗಲೇ ನಾಟಿ ಮಾಡಿರುವ ಭತ್ತದ ಬೆಳೆ ಕಟಾವಿಗೆ ಬರುವ ವರೆಗೂ ನೀರಿನ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಅಚ್ಚುಕಟ್ಟು ಪ್ರದೇಶದ ರೈತರ ಸಂಕಷ್ಟಕ್ಕೆ ಸ್ಪಂದಿಸಲು ಕುಡಿಯುವ ನೀರಿಗಾಗಿ ಮೀಸಲಿಟ್ಟಿದ್ದ ನೀರಿನಲ್ಲಿಯೇ ಅಲ್ಪ ಪ್ರಮಾಣವನ್ನು ಬಳಕೆ ಮಾಡಿಕೊಳ್ಳಲು ನ. 18ರಂದು ನಡೆದ ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ.

10.716 ಟಿಎಂಸಿ ಮೀಸಲು: ಅಕ್ಟೋಬರ್ ತಿಂಗಳಲ್ಲಿ ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತುಂಗಭದ್ರಾ ಜಲಾಶಯದಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಡೆಡ್ ಸ್ಟೋರೇಜ್ ಸೇರಿದಂತೆ 10.716 ಟಿಎಂಸಿ ನೀರನ್ನು ಕಾಯ್ದಿರಿಸಲಾಗಿತ್ತು. ಆದರೆ, ನ.18ರಂದು ನಡೆದ ಸಭೆಯಲ್ಲಿ ಈ ಪ್ರಮಾಣವನ್ನು 5.5 ಟಿಎಂಸಿಗೆ ಇಳಿಸಲಾಗಿದೆ. ಉಳಿದ ನೀರನ್ನು ನ.28ರ ವರೆಗೆ ಕಾಲುವೆಗಳಿಗೆ ಹರಿಸಿ ಅಚ್ಚುಕಟ್ಟು ಪ್ರದೇಶದ ಬೆಳೆಗಳನ್ನು ಉಳಿಸಿಕೊಳ್ಳಲು ತೀರ್ಮಾನಿಸಲಾಗಿದೆ.

ಸಂಪ್ರದಾಯಕ್ಕೆ ಮೊದಲ ಬಾರಿ ಬ್ರೇಕ್: ತುಂಗಭದ್ರಾ ಜಲಾಶಯದಲ್ಲಿ ಈ ಹಿಂದೆ ಕುಡಿಯುವ ನೀರಿಗಾಗಿ ಸುಮಾರು 8 ಟಿಎಂಸಿ ಹಾಗೂ ಜಲಚರಗಳಿಗಾಗಿ 2 ಟಿಎಂಸಿ ಸೇರಿ ಒಟ್ಟು 10 ಟಿಎಂಸಿ ನೀರನ್ನು ಡೆಡ್ ಸ್ಟೋರೇಜ್ ಸೇರಿದಂತೆ ಕಾಯ್ದಿರಿಸುವ ಸಂಪ್ರದಾಯವಿತ್ತು. ಆದರೆ, ಈ ಬಾರಿ ರೈತರ ಬೆಳೆ ಉಳಿಸುವ ಅನಿವಾರ್ಯತೆ ಎದುರಾಗಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಮೀಸಲನ್ನು 5.5 ಟಿಎಂಸಿಗೆ ಸೀಮಿತಗೊಳಿಸಿ, ಉಳಿಕೆ ನೀರನ್ನು ನೀರಾವರಿಗೆ ಬಳಸಲು ನಿರ್ಧರಿಸಿರುವುದು ಜಲಾಶಯದ ಇತಿಹಾಸದಲ್ಲೇ ಮೊದಲ ಪ್ರಯತ್ನವಾಗಿದೆ.

ಆದರೂ ಈ ನಿರ್ಧಾರದಿಂದ ಅಚ್ಚುಕಟ್ಟು ಪ್ರದೇಶದ ಎಲ್ಲ ರೈತರ ಬೆಳೆ ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಡಿಸೆಂಬರ್ ತಿಂಗಳ ವರೆಗೂ ಕಾಲುವೆಗಳಿಗೆ ನೀರು ಹರಿಸಬೇಕು ಎಂದು ರೈತರು ಒತ್ತಾಯಿಸಿ ಹೋರಾಟ ನಡೆಸುತ್ತಿದ್ದಾರೆ. ಆದರೆ, ಜಲಾಶಯದಲ್ಲಿರುವ ನೀರಿನ ಲಭ್ಯತೆ ಹಾಗೂ ಕುಡಿಯುವ ನೀರಿನ ಅಗತ್ಯದ ನಡುವೆ ಸಮತೋಲನ ಕಾಯ್ದುಕೊಳ್ಳುವುದು ಅಧಿಕಾರಿಗಳಿಗೆ ಸವಾಲಾಗಿದೆ.

ಹತ್ತು ವರ್ಷಗಳ ಲೆಕ್ಕಾಚಾರ: ಕಳೆದ ಹತ್ತು ವರ್ಷಗಳಲ್ಲಿ ತುಂಗಭದ್ರಾ ಜಲಾಶಯದಿಂದ ಕುಡಿಯುವ ನೀರಿಗಾಗಿ ಬಳಕೆಯಾಗಿರುವ ನೀರಿನ ಪ್ರಮಾಣದ ಲೆಕ್ಕಾಚಾರವನ್ನು ಆಧಾರವಾಗಿಟ್ಟುಕೊಂಡು ಈ ಬಾರಿ ಮೀಸಲು ಪ್ರಮಾಣ ನಿರ್ಧರಿಸಲಾಗಿದೆ ಎನ್ನಲಾಗಿದೆ. ಆದರೆ, ಎಲ್‌ನಿನೊ ಪರಿಣಾಮದಿಂದ ಮುಂದಿನ ಮುಂಗಾರು ಮಳೆಯ ಪ್ರಮಾಣದ ಬಗ್ಗೆ ಅನಿಶ್ಚಿತತೆ ಎದುರಾಗಿದ್ದು, ಈಗಾಗಲೇ ಅಂತರ್ಜಲ ಮಟ್ಟವೂ ಕುಸಿಯುತ್ತಿದೆ. ಹೀಗಾಗಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೇ ಎಂಬ ಆತಂಕವೂ ಇದೆ.

ಒಂದೆಡೆ ಲಕ್ಷಾಂತರ ಎಕರೆ ಭತ್ತದ ಬೆಳೆ ಉಳಿಸಿಕೊಳ್ಳಬೇಕಾದ ಅನಿವಾರ್ಯತೆ, ಮತ್ತೊಂದೆಡೆ ಬೇಸಿಗೆಯಲ್ಲಿ ಜನರಿಗೆ ಕುಡಿಯುವ ನೀರು ಒದಗಿಸಬೇಕಾದ ಜವಾಬ್ದಾರಿ. ಈ ಎರಡರ ನಡುವೆ ತುಂಗಭದ್ರಾ ಜಲಾಶಯದ ನೀರು ಹಂಚಿಕೆ ಈಗ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಸಚಿವ ಶಿವರಾಜ್ ತಂಗಡಗಿ ಹೇಳಿದ್ದೇನು?: ಕುಡಿಯುವ ನೀರಿಗೆ ಅಗತ್ಯವಿರುವ ನೀರಿನ ಪ್ರಮಾಣದ ಲೆಕ್ಕಾಚಾರ ಮಾಡಿಯೇ ರೈತರ ಹಿತದೃಷ್ಟಿಯಿಂದ ಒಂದಿಷ್ಟು ನೀರನ್ನು ನೀರಾವರಿಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಈ ಹಿಂದೆ ಕಾಯ್ದಿರಿಸುತ್ತಿದ್ದ ನೀರಿನ ಬಳಕೆಯ ಪ್ರಮಾಣವನ್ನು ಪರಿಶೀಲಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆಗಿರುವ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ಕುಡಿಯುವ ನೀರಿಗಾಗಿ ಕಾಯ್ದಿರಿಸಿದ ನೀರಿನಲ್ಲಿಯೇ ಒಂದಿಷ್ಟು ಪ್ರಮಾಣವನ್ನು ಬಳಕೆ ಮಾಡಿಕೊಂಡು ಬೆಳೆ ಉಳಿಸಿಕೊಳ್ಳುವ ಪ್ರಯತ್ನ ಮಾಡಲಾಗುತ್ತಿದೆ. ಆದರೆ, ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಸಮಸ್ಯೆಗಳ ಕುರಿತು ಈಗಲೇ ಏನನ್ನೂ ಹೇಳಲು ಸಾಧ್ಯವಿಲ್ಲ ಎಂದು ಹೆಸರು ಹೇಳಲು ಇಚ್ಛಿಸದ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಬೀದರ್ ಶಿವನಗರ ಸಿಗ್ನಲ್ ಬಳಿ ಗೂಡಂಗಡಿ ತೆರವಿಗೆ ಸ್ಥಳೀಯರ ಆಗ್ರಹ



ಬೀದರ್, ನ. 25: ನಗರದ ಶಿವನಗರ ಸಿಗ್ನಲ್ ಬಳಿ ನಿರ್ಮಾಣವಾಗುತ್ತಿರುವ ಫುಟ್‌ಪಾತ್‌ನುದ್ದಕ್ಕೂ ಅನಧಿಕೃತವಾಗಿ ತೆರೆದಿರುವ ಗೂಡಂಗಡಿ ಹಾಗೂ ತಳ್ಳುಗಾಡಿ ಮಳಿಗೆಗಳಿಂದ ಪಾದಚಾರಿಗಳಿಗೆ ಸಮಸ್ಯೆಯಾಗುತ್ತಿದ್ದು, ಅವುಗಳನ್ನು ತೆರವುಗೊಳಿಸುವಂತೆ ಸ್ಥಳೀಯರು ಆಗ್ರಹಿಸಿ, ಈ ಸಂಬಂಧ ಸ್ಥಳೀಯ ನಾಗರಿಕರು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದ್ದಾರೆ.

ಶಿವನಗರ ಸಿಗ್ನಲ್ ಬಳಿ ಜಿಲ್ಲಾಡಳಿತದಿಂದ ಫುಟ್‌ಪಾತ್ ನಿರ್ಮಾಣ ಮಾಡಲಾಗುತ್ತಿದೆ. ಕಾಮಗಾರಿ ಇನ್ನೂ ಸಂಪೂರ್ಣವಾಗಿ ಮುಗಿದಿಲ್ಲ. ಕೆಲವು ಕಡೆ ಕಾಮಗಾರಿ ಅಪೂರ್ಣವಾಗಿಯೇ ಉಳಿದಿದೆ. ಹೀಗಿರುವಾಗ ಅಲ್ಲಿ ರಸ್ತೆಯುದ್ದಕ್ಕೂ ಆಹಾರ ಮಳಿಗೆ, ಗೂಡಂಗಡಿಗಳು ತಲೆ ಎತ್ತಿವೆ. ಇದರಿಂದ ಜನ ಓಡಾಡಲು ತೊಂದರೆಯಾಗುತ್ತಿದೆ. ಸಂಚಾರಕ್ಕೂ ದಟ್ಟಣೆಯಾಗುತ್ತಿದೆ. ಅಪಘಾತಗಳು ಸಂಭವಿಸುತ್ತಿವೆ ಎಂದು ಗಮನ ಸೆಳೆದಿದ್ದಾರೆ.

ಜಿಲ್ಲಾಡಳಿತವು ಬೇರೆಡೆ ಫುಡ್ ಕೋರ್ಟ್ ಸ್ಥಾಪಿಸಿ ಆಹಾರ ಮಳಿಗೆಗಳಿಗೆ ವ್ಯವಸ್ಥೆ ಮಾಡಿಕೊಡಬೆಕು. ಶಿವನಗರ ಸಿಗ್ನಲ್ ಬಳಿ ತಲೆ ಎತ್ತಿರುವ ಮಳಿಗೆಗಳನ್ನು ಅಲ್ಲಿಗೆ ಸ್ಥಳಾಂತರಿಸಬೇಕು. ಸಾರ್ವಜನಿಕರಿಗೆ ಸುಗಮ ಹಾಗೂ ಸುರಕ್ಷಿತ ಪಾದಚಾರಿ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಎಂದು ಆಗ್ರಹಿಸಿದ್ದಾರೆ.

500 ರೂ. ಮುಖಬೆಲೆ 76 ನೋಟುಗಳನ್ನು ವಶಪಡಿಸಿಕೊಂಡ ಪೊಲೀಸರು

ಎಟಿಎಂನಲ್ಲೇ ನಕಲಿ ನೋಟು ತುಂಬಲು ಯತ್ನಿಸಿದ ಇಬ್ಬರು ಅಪರಿಚಿತರ ಬಂಧನ



ಹಾವೇರಿ, ನ.25: ಬ್ಯಾಂಕ್ ಎಟಿಎಂನಲ್ಲೇ ನಕಲಿ ನೋಟುಗಳನ್ನು ಜಮೆ ಮಾಡಲು ಯತ್ನಿಸಿದ ಇಬ್ಬರನ್ನು ಪೊಲೀಸರು ಬಂಧಿಸಿದ್ದು, 500 ಮುಖಬೆಲೆಯ 76 ನಕಲಿ ನೋಟುಗಳನ್ನು ವಶಕ್ಕೆ ಪಡೆದಿರುವ ಘಟನೆ ರಾಣೆಬೆನ್ನೂರಿನಲ್ಲಿ ನಡೆದಿದೆ.

ಬಂಧಿತರನ್ನು ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಮೇಡ್ಲೇರಿ ಗ್ರಾಮದ ಸುರೇಶ ಬಿಲ್ಲಾಳ ಹಾಗೂ ಮಾಲತೇಶ ಮೈಲಾರ ಎಂದು ಗುರುತಿಸಲಾಗಿದೆ. ಆರೋಪಿಗಳು ರಾಣೆಬೆನ್ನೂರಿನ ಎಸ್‌ಬಿಐ ಎಟಿಎಂನಲ್ಲಿ 500 ರೂಪಾಯಿ ಮುಖಬೆಲೆಯ 76 ನಕಲಿ ನೋಟುಗಳನ್ನು ಜಮೆ ಮಾಡಲು ಯತ್ನಿಸಿದ್ದರು. ಈ ವೇಳೆ ಎಟಿಎಂ ಯಂತ್ರವು ನಕಲಿ ನೋಟುಗಳನ್ನು ಪತ್ತೆಹಚ್ಚಿ ಬ್ಯಾಂಕ್‌ಗೆ ಅಲರ್ಟ್ ನೀಡಿದೆ. ಬಳಿಕ ಬ್ಯಾಂಕ್ ಸಿಬ್ಬಂದಿ ನೀಡಿದ ದೂರಿನ ಮೇರೆಗೆ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ, ಆರೋಪಿಗಳು ಅಸಲಿ 500 ರೂಪಾಯಿ ನೋಟುಗಳನ್ನು ಸ್ಕ್ಯಾನ್ ಮಾಡಿ ನಕಲಿ ನೋಟುಗಳನ್ನು ತಯಾರಿಸಿರುವ ಶಂಕೆ ವ್ಯಕ್ತವಾಗಿದೆ. ನಕಲಿ ನೋಟುಗಳಲ್ಲಿ 'ಚಿಲ್ಡ್ರನ್ಸ್ ಬ್ಯಾಂಕ್ ಆಫ್ ಇಂಡಿಯಾ' ಎಂಬ ಹೆಸರನ್ನು ನಮೂದಿಸಿರುವುದು ಗಮನಕ್ಕೆ ಬಂದಿದೆ. ನಕಲಿ ನೋಟುಗಳ ತಯಾರಿಕೆ ಹಾಗೂ ಚಲಾವಣೆಯ ಹಿಂದಿರುವ ಮೂಲವನ್ನು ಪತ್ತೆ ಹಚ್ಚಲು ರಾಣೆಬೆನ್ನೂರು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.ಈ ಜಾಲದಲ್ಲಿ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆ ಎಂಬ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ. ಈ ಸಂಬಂಧ ರಾಣೆಬೆನ್ನೂರು ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಳ್ಳಾರಿ ಕನಕದುರ್ಗಮ್ಮ ದೇವಸ್ಥಾನದ ಹುಂಡಿಯಲ್ಲಿ 1.17 ಕೋಟಿ ಕಾಣಿಕೆ ಸಂಗ್ರಹ



ಬಳ್ಳಾರಿ,ನ.24. ನಗರದ ಕನಕದುರ್ಗಮ್ಮ ದೇವಸ್ಥಾನದ ಹುಂಡಿ ಎಣಿಕೆ ಕಾರ್ಯವು ಸೋಮವಾರ ಅತ್ಯಂತ ಪಾರದರ್ಶಕವಾಗಿ ನಡೆದಿದ್ದು, ಒಟ್ಟು 1,17,87,950 ಕಾಣಿಕೆ ಸಂಗ್ರಹವಾಗಿದೆ.

ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಸಹಾಯಕ ಆಯುಕ್ತರಾದ ಎಚ್. ಸವಿತಾ, ಬಳ್ಳಾರಿ ತಾಲೂಕು ಉಪ ತಹಶೀಲ್ದಾರ್ ಕೆ.ಎಸ್. ಮಂಜುನಾಥ್ ಹಾಗೂ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಗೌಡರ ಯುವರಾಜಗೌಡ ಅವರ ನೇತೃತ್ವದಲ್ಲಿ ಹುಂಡಿಯನ್ನು ತೆರೆಯಲಾಯಿತು.

ಕಂದಾಯ ಇಲಾಖೆ, ಪೊಲೀಸ್ ಇಲಾಖೆ, ಬ್ಯಾಂಕ್ ಸಿಬ್ಬಂದಿ, ಗೃಹರಕ್ಷಕ ದಳ ಹಾಗೂ ದೇವಸ್ಥಾನದ ಸಿಬ್ಬಂದಿ ವರ್ಗದವರ ಸಮಕ್ಷಮದಲ್ಲಿ ಎಣಿಕೆ ಕಾರ್ಯವು ಸುಸೂತ್ರವಾಗಿ ನೆರವೇರಿತು. ಎಣಿಕೆ ಪೂರ್ಣಗೊಂಡ ಬಳಿಕ ಸಂಗ್ರಹವಾದ ಸಂಪೂರ್ಣ ಮೊತ್ತವನ್ನು ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ತಿಳಿಸಿದೆ.

ಬೀದರ್ ಜಿಲ್ಲಾ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ

ದಕ್ಷಿಣ ಆಫ್ರಿಕಾಗಿಂತ ಭಾರತದ ಮೇಲೆ ಪ್ರೀತಿ, ಬಾಂಧವ್ಯ ಹೆಚ್ಚು: ಮಾಜಿ ಕ್ರಿಕೆಟಿಗ ಜಾಂಟಿ ರೋಡ್ಸ್



ಬೀದರ್, ನ.25: ಸ್ವದೇಶ ದಕ್ಷಿಣ ಆಫ್ರಿಕಾಕ್ಕಿಂತ ಹೆಚ್ಚಾಗಿ ಭಾರತವನ್ನೇ ನೋಡಿದ್ದೇನೆ. ಈ ರಾಷ್ಟ್ರದ ಮೇಲೆ ನನಗೆ ಅಪಾರ ಪ್ರೀತಿ, ಬಾಂಧವ್ಯವನ್ನು ಹೊಂದಿದ್ದೇನೆ. ಮುಂಬೈನಲ್ಲಿ ಜನಿಸಿರುವ ಇಬ್ಬರು ಮಕ್ಕಳಿದ್ದು, ಒಬ್ಬ ಮಗಳಿಗೆ 'ಇಂಡಿಯಾ' ಎಂದು ಹೆಸರನ್ನಿಟ್ಟಿದ್ದೇನೆ ಮಾಜಿ ಕ್ರಿಕೆಟ್ ಆಟಗಾರ ಜೊನಾಥನ್ ನೀಲ್ ರೋಡ್ಸ್ (ಜಾಂಟಿ) ಹೇಳಿದರು.

ನಗರದ ಪೊಲೀಸ್ ಕವಾಯಿತು ಮೈದಾನದಲ್ಲಿ ಬುಧವಾರ ಜಿಲ್ಲಾ ಪೊಲೀಸ್ ಇಲಾಖೆ ಆಯೋಜಿಸಿರುವ ಮೂರು ದಿನಗಳ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತ ವಿಶಾಲ ಮತ್ತು ಸುಂದರವಾದ ದೇಶ. ಇಲ್ಲಿನ ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬರಿಗೂ ಸುರಕ್ಷಿತವಾಗಿ ಮತ್ತು ಭದ್ರವಾಗಿ ಬದುಕುವ ಹಕ್ಕಿದೆ ಎಂದು ತಿಳಿಸಿದರು.

ನಾನು ಕ್ರಿಕೆಟ್ ಆಡಲು ಮತ್ತು ಕ್ರಿಕೆಟ್ ವೀಕ್ಷಿಸಲು ಭಾರತದಾದ್ಯಂತ ಅನೇಕ ಸ್ಥಳಗಳಿಗೆ ಭೇಟಿ ನೀಡಿದ್ದೇನೆ. ಕರ್ನಾಟಕಕ್ಕೆ ಮತ್ತು ಬೀದರಗೆ ಬರುತ್ತಿರುವುದು ಇದೇ ಮೊದಲು ಎಂದು ಸಂತಸ ವ್ಯಕ್ತಪಡಿಸಿದರು.

ಒತ್ತಡವನ್ನು ನಿಭಾಯಿಸಲು ಸದಾ ಚಟುವಟಿಕೆಯಿಂದ ಇರುವುದು ಅತ್ಯುತ್ತಮ ಮಾರ್ಗ. ಒತ್ತಡದ ವಾತಾವರಣವನ್ನು ನಿಭಾಯಿಸುವಲ್ಲಿ ಕ್ರೀಡೆಯು ಬಹಳ ಮುಖ್ಯವಾದ ಪಾತ್ರವನ್ನು ವಹಿಸುತ್ತದೆ. ಪೊಲೀಸ ಸಿಬ್ಬಂದಿಗೆ ಕ್ರೀಡಾ ಚಟುವಟಿಕೆಯು ಕೇವಲ ವಾರ್ಷಿಕ ಕ್ರೀಡಾಕೂಟಕ್ಕೆ ಮಾತ್ರ ಸೀಮಿತವಾಗಬಾರದು. ಸದಾ ಚಲನಶೀಲರಾಗಿ ಆರೋಗ್ಯದಿಂದ ಇರಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಶಾಸಕ ರಹೀಮ್ ಖಾನ್, ಬುಡಾ ಅಧ್ಯಕ್ಷ ವಿನೋದ್ ಅಪ್ಪೆ, ಎಸ್.ಪಿ ಪ್ರದೀಪ್ ಗುಂಟಿ, ಅಕ್ಕ ಪಡೆ ರಾಜ್ಯ ಸಂಯೋಜಕಿ ಶೈನಿ ಗುಂಟಿ, ಎಸ್ಪಿ ಚಂದ್ರಕಾಂತ ಪೂಜಾರಿ ವೇದಿಕೆಯಲ್ಲಿದ್ದರು.

ಪೊಲೀಸರ ನಿಸ್ವಾರ್ಥ ಸೇವೆಗೆ ಕೃತಜ್ಞರಾಗಿರಬೇಕು

ನಾವೆಲ್ಲರೂ ನೆರಳಿನಲ್ಲಿ ಕುಳಿತಿರುವಾಗ, ಭದ್ರತಾ ಪಡೆ ಸಿಬ್ಬಂದಿಗಳು ಬಿಸಿಲಿನಲ್ಲಿ ನಿಂತು ಕರ್ತವ್ಯ ನಿರ್ವಹಿಸುತ್ತಾರೆ. ಅವರ ತಾಳ್ಮೆ ಮತ್ತು ಬದ್ಧತೆ ಮೆಚ್ಚುವಂತಹದ್ದು. ನೀವು ಪೊಲೀಸ್ ಪಡೆಯಲ್ಲಿದ್ದಾಗ, ಯಾರೂ ನಿಮಗೆ ಕರೆ ಮಾಡಿ ಧನ್ಯವಾದಗಳು ಎಂದು ಹೇಳುವುದಿಲ್ಲ ಅಥವಾ ನೀವು ಹೇಗಿದ್ದೀರಿ ಎಂದು ವಿಚಾರಿಸುವುದಿಲ್ಲ. ಅದರೆ, ಜನರಿಗೆ ನಿಮ್ಮ ಸಹಾಯ ಬೇಕಾದಾಗ ಮಾತ್ರ ಅವರು ನಿಮಗೆ ಕರೆ ಮಾಡುತ್ತಾರೆ. ಆದ್ದರಿಂದ ಪೊಲೀಸ್ ವೃತ್ತಿ ಜೀವನವು ಅತ್ಯಂತ ಒತ್ತಡದಿಂದ ಕೂಡಿರುತ್ತದೆ. ಅವರ ನಿಸ್ವಾರ್ಥ ಸೇವೆಗೆ ನಾವುಗಳು ಕೃತಜ್ಞರಾಗಿರಬೇಕು ಎಂದು ಜಾಂಟಿ ರೋಡ್ಸ್ ಹೇಳಿದರು.

ಮುದ್ದೇನಹಳ್ಳಿಯಲ್ಲಿ 500 ವಿದ್ಯಾರ್ಥಿ ಕಲಾವಿದರಿಂದ ವೈವಿಧ್ಯಮಯ ಕಲಾ ಪ್ರದರ್ಶನ, ಸಾಹಸ ಕ್ರೀಡೆ; 20 ಸಾವಿರ ಜನರ ನಿರೀಕ್ಷೆ

ಸತ್ಯಸಾಯಿ ಗ್ರಾಮದ ಸುವರ್ಣ ಸಂಭ್ರಮಕ್ಕೆ ಆಳ್ವಾಸ್ ಸಾಂಸ್ಕೃತಿಕ ವೈಭವದ ಮೆರುಗು



ಚಿಕ್ಕಬಳ್ಳಾಪುರ, ನ.25: ಐದು ದಶಕಗಳ ಸೇವಾ ಪಯಣದ ಮೈಲಿಗಲ್ಲು ತಲುಪಿರುವ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ಸುವರ್ಣ ಮಹೋತ್ಸವದ ಸಂಭ್ರಮ ಮನೆಮಾಡಿದೆ. ಇದರ ಅಂಗವಾಗಿ ನ.26ರಂದು ನಡೆಯಲಿರುವ 'ಆಳ್ವಾಸ್ ಸಾಂಸ್ಕೃತಿಕ ವೈಭವ' ಕಾರ್ಯಕ್ರಮದಲ್ಲಿ ಮೂಡುಬಿದಿರೆಯ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ 500 ಕಲಾವಿದರು ವೈವಿಧ್ಯಮಯ ಕಲಾ ಪ್ರದರ್ಶನ ಹಾಗೂ ಸಾಹಸ ಕ್ರೀಡೆಗಳನ್ನು ಪ್ರಸ್ತುತಪಡಿಸಲಿದ್ದಾರೆ.

ಮುದ್ದೇನಹಳ್ಳಿಯ ಸಾಯಿ ಕೃಷ್ಣನ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಸುಮಾರು 20 ಸಾವಿರ ಜನರು ಆಗಮಿಸುವ ನಿರೀಕ್ಷೆಯಿದೆ. ರಾಜ್ಯದ ವಿವಿಧ ಜಿಲ್ಲೆಗಳು, ದೇಶದ ಹಲವು ರಾಜ್ಯಗಳು ಹಾಗೂ ವಿದೇಶಗಳಿಂದಲೂ ಭಕ್ತರು ಮತ್ತು ಸಂದರ್ಶಕರು ಪಾಲ್ಗೊಳ್ಳಲಿದ್ದಾರೆ. ಸತ್ಯಸಾಯಿ ಗ್ರಾಮದ 50 ವರ್ಷಗಳ ಪಯಣ, ಭಗವಾನ್ ಸತ್ಯಸಾಯಿ ಬಾಬಾ ಅವರ 101ನೇ ಜನ್ಮದಿನೋತ್ಸವ ಹಾಗೂ ಮಡಿಯಾಲ ನಾರಾಯಣ ಭಟ್ ಅವರ 100ನೇ ಜನ್ಮದಿನದ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ.

ದೇಶ–ವಿದೇಶದ ಕಲಾ ಪ್ರಕಾರಗಳ ಸಂಗಮ

ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ ನೇತೃತ್ವದ

ಸೇವೆಯ ಬಾಳು ಮನುಷ್ಯನ ಬದುಕಿನ ಸಾರ್ಥಕತೆ

ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆ ಜನ್ಮದಿನಾಚರಣೆ ಡಾ. ಪೆರ್ಲ ಅಭಿಮತ

ಕಲಬುರಗಿ, ನ.25: ಧರ್ಮಸ್ಥಳದ ಧರ್ಮಾಧಿಕಾರಿ ಡಾ ಡಿ. ವೀರೇಂದ್ರ ಹೆಗ್ಗಡೆಯವರ ಜನ್ಮದಿನವನ್ನು ನ. 24ರಂದು ಎಲ್ಲೆಡೆ, "ಸೇವಾ ದಿನ" ವನ್ನಾಗಿ ಆಚರಿಸುವ ಮೂಲಕ ಮೌಲ್ಯ ತಂದುಕೊಡಲಾಗಿದೆ. ಮನುಷ್ಯನ ಬದುಕಿನ ಸಾರ್ಥಕತೆಯು ಸೇವೆಯ ಬಾಳಿನಲ್ಲಿ ನೆಲೆಗೊಂಡಿದೆ ಎಂದು ಆಕಾಶವಾಣಿ ನಿವೃತ್ತ ಕಾರ್ಯಕ್ರಮಮುಖ್ಯಸ್ಥರಾದ ಡಾ. ಸದಾನಂದ ಪೆರ್ಲ ಅಭಿಪ್ರಾಯಪಟ್ಟರು.



ಕಲಬುರಗಿಯ ಕೋಟನೂರ ಡಿ ಗ್ರಾಮದ ಎಲ್ಲಾ ಲಿಂಗ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಎಲ್ಲಾ ಲಿಂಗ ನಿರ್ಗತಿಕ ಮಕ್ಕಳ ಕುಟೀರದಲ್ಲಿ ನವೆಂಬರ್ 24ರಂದು ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆ ಯವರ ಜನ್ಮದಿನವನ್ನು ಸೇವಾ ದಿನವನ್ನಾಗಿ ಆಚರಿಸಿ ಶಾಲಾ ಮಕ್ಕಳಿಗೆ ಹಣ್ಣು ಹಂಪಲು ಆಹಾರ ಸಾಮಗ್ರಿ ವಿತರಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ ದೇಶದ ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಬದುಕನ್ನು ಸೇವೆಗಾಗಿ ಮೀಸಲಿಟ್ಟು ಪ್ರಧಾನ ಮಂತ್ರಿ ಕಚೇರಿಯನ್ನು ಸೇವಾ ತೀರ್ಥ ಎಂದು ಕರೆದಿದ್ದಾರೆ ರಾಷ್ಟ್ರಕ್ಕಾಗಿ 20 ಗಂಟೆಗಳಷ್ಟು ಸೇವೆ ಸಲ್ಲಿಸುತ್ತಿದ್ದು ದೇಶಕ್ಕೆ ಮಾದರಿಯಾಗಿದ್ದಾರೆ. ಧರ್ಮಸ್ಥಳದ ಧರ್ಮಾಧಿಕಾರಿ ಹೆಗ್ಗಡೆಯವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಅನೇಕ ಸೇವಾ ಪ್ರಕಲ್ಪಗಳನ್ನು ಆರಂಭಿಸಿ ಇಡೀ ರಾಜ್ಯದಲ್ಲಿ ಜನಸೇವೆಯೇ ಜನಾರ್ಧನ ಸೇವೆ ಎಂಬಂತೆ ಶೋಷಿತರ, ದೀನದಲಿತರ, ಬಡವರ, ನೊಂದವರ, ಕಣ್ಣೀರು ಒರೆಸುವ ಹಾಗೂ ನೆರವು ನೀಡುವ ಮೂಲಕ ಸೇವಾ ಕಾರ್ಯಗಳನ್ನು ನಡೆಸಿ ಜನಾನುರಾಗಿದ್ದಾರೆ ಅವರ ಜನ್ಮದಿನವನ್ನು ಸೇವಾ ದಿನವಾಗಿ ಘೋಷಿಸಿ ಅರ್ಥಪೂರ್ಣವಾಗಿ ಆಚರಿಸುತ್ತಿರುವುದು ಸಂತಸದ ಸಂಗತಿ ಎಂದು ಡಾ.ಪೆರ್ಲ ಹೇಳಿದರು.

ಕಾರ್ಯಕ್ರಮದಲ್ಲಿ ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ದಿನೇಶ ಪೂಜಾರಿ ಜನಜಾಗೃತಿಯ ಜಿಲ್ಲಾಧ್ಯಕ್ಷರಾದ, ಜನಜಾಗೃತಿ ಅಧ್ಯಕ್ಷರಾದ ಸಿ.ಎನ್ ಬಾಬಳಗಾಂವ, ಯೋಜನೆ ಜಿಲ್ಲಾ ನಿರ್ದೇಶಕರಾದ ಗಣಪತಿ ಮಳಿಂಜೆ, ಯೋಜನಾಧಿಕಾರಿ ಸಂಗಪ್ಪ ಸಂಗಳದ ಮಹಿಳಾ ಒಕ್ಕೂಟದ ಅಧ್ಯಕ್ಷ ಸರೋಜಾ ಶಂಕರಯ್ಯ ಹಿರೇಮಠ, ಶಾಲೆಯ ಅಧ್ಯಕ್ಷ ಶರಣಪ್ಪ ಕೆ ಗೋಟೂರ, ಶಿಕ್ಷಕರಾದ ಭಾಗ್ಯಶ್ರೀ, ಅಶ್ವಿನಿ, ಪದ್ಮಾವತಿ, ಸ್ವಾತಿ ಶರಣಪ್ಪ ಉಪಸ್ಥಿತರಿದ್ದರು.

ಸೇವಾ ದಿನದ ಅಂಗವಾಗಿ ಕಲಬುರಗಿ ನಗರದ ವಿವಿಧ ಕಡೆಗಳ ವೃದ್ಧಾಶ್ರಮ ನಿರ್ಗತಿಕರ ಕೇಂದ್ರಗಳಲ್ಲಿ ಹಣ್ಣು ಹಂಪಲು ಹಾಗೂ ಆಹಾರ ಸಾಮಗ್ರಿ ವಿತರಿಸಲಾಯಿತು.



ಸರ್ಕಾರಿ ಶಾಲೆಗಳಲ್ಲಿ 'ಕ್ಲಸ್ಟರ್ ಕಿಚನ್' (ಸಮೂಹ ಅಡುಗೆ ವ್ಯವಸ್ಥೆ) ಪದ್ಧತಿಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಉದ್ದೇಶಿಸಿರುವುದನ್ನು ವಿರೋಧಿಸಿ, ಕರ್ನಾಟಕ ರಾಜ್ಯ ಮಧ್ಯಾಹ್ನದ ಬಿಸಿಯೂಟ ನೌಕರರ ಸಂಘವು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆಯನ್ನು ಆರಂಭಿಸಿದೆ.

ವಿಶ್ವ ಪರಂಪರೆ ಸಪ್ತಾಹ ಅಂಗವಾಗಿ ಸಾಂಪ್ರದಾಯಿಕ ಟಾಂಗಾಗಳಲ್ಲಿ ಐತಿಹಾಸಿಕ ಸ್ಮಾರಕಗಳ ವೀಕ್ಷಣೆ

ಕಲಬುರಗಿ, ನ. 26: ಇಂದಿನ ವಿದ್ಯಾರ್ಥಿಗಳೇ ನಾಳಿನ ಸಾಂಸ್ಕೃತಿಕ ರಾಯಭಾರಿಗಳು. ಅವರು ನಮ್ಮ ನಾಡಿನ ಶ್ರೀಮಂತ ಇತಿಹಾಸ, ಪರಂಪರೆ ಹಾಗೂ ಸ್ಮಾರಕಗಳ ಮಹತ್ವವನ್ನು ಅರಿತು, ಮುಂದಿನ ಪೀಳಿಗೆಗೆ ಮತ್ತು ಜಗತ್ತಿಗೆ ಪರಿಚಯಿಸುವ ಜವಾಬ್ದಾರಿ ಹೊರಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ವಿಶ್ವ ಪರಂಪರೆ ಸಪ್ತಾಹದ ಅಂಗವಾಗಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಇಂಟ್ಯಾಕ್ ಕಲಬುರಗಿ ಅಧ್ಯಾಯ ಹಾಗೂ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ವಿದ್ಯಾರ್ಥಿನಿಯರಿಗಾಗಿ ಹಮ್ಮಿಕೊಳ್ಳಲಾಗಿದ್ದ 'ಸಾಂಪ್ರದಾಯಿಕ ಟಾಂಗಾಗಳಲ್ಲಿ ಐತಿಹಾಸಿಕ ಸ್ಮಾರಕಗಳ ವೀಕ್ಷಣೆ' ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸಿ ಮಾತನಾಡಿದ ಅವರು, 14 ಮತ್ತು 15ನೇ ಶತಮಾನಗಳಲ್ಲಿ ಸಾರಿಗೆ ಮತ್ತು ಪ್ರಯಾಣಕ್ಕೆ ಟಾಂಗಾಗಳು ಪ್ರಮುಖ ಸಾಧನಗಳಾಗಿದ್ದವು. ಅಂತಹ ಪಾರಂಪರಿಕ ಸಾರಿಗೆ ವ್ಯವಸ್ಥೆಯ ಅನುಭವವನ್ನು ಇಂದಿನ ವಿದ್ಯಾರ್ಥಿನಿಯರಿಗೆ ನೀಡಿರುವದು ಅತ್ಯಂತ ವಿಶೇಷ ಹಾಗೂ ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪ ನಿರ್ದೇಶಕಿ ಡಾ. ಮಂಜುಳಾ ಅವರು ಮಾತನಾಡಿ, ಐತಿಹಾಸಿಕ ಸ್ಮಾರಕಗಳು ನಮ್ಮ ದೇಶದ ಅಮೂಲ್ಯ ಸಂಪತ್ತು. ಇಂತಹ ಕ್ಷೇತ್ರ ಭೇಟಿಗಳು ವಿದ್ಯಾರ್ಥಿಗಳಲ್ಲಿ ಸ್ಮಾರಕಗಳ ಇತಿಹಾಸ, ವಾಸ್ತುಶಿಲ್ಪದ ಅರಿವು ಹಾಗೂ ಅವುಗಳ ಸಂರಕ್ಷಣೆಯ ಹೊಣೆಗಾರಿಕೆಯನ್ನು ಬೆಳೆಸುತ್ತವೆ.ಸ್ಮಾರಕಗಳ ದರ್ಶನ: ಸರ್ಕಾರಿ ವಸ್ತುಸಂಗ್ರಹಾಲಯದಿಂದ ಆರಂಭವಾದ ಟಾಂಗಾ ಪ್ರವಾಸದಲ್ಲಿ ವಿದ್ಯಾರ್ಥಿನಿಯರು ಐವಾನ್-ಇ-ಶಾಹಿ ಕಟ್ಟಡ, ಜಿಲ್ಲಾಧಿಕಾರಿಗಳ ಕಚೇರಿ, ಮೆಹಬೂಬ್ ಗುಲ್ಷನ್ ಉದ್ಯಾನವನ, ಅಪ್ಪಾ ಕೆರೆ, ಶರಣಬಸವೇಶ್ವರ ದೇವಸ್ಥಾನ, ಕಲಬುರಗಿ ಕೋಟೆ, ರಣಮಂಡಲ, ಜಾಮಿಯಾ ಮಸೀದಿ ಹಾಗೂ ವಿದೇಶಿ ಮಾರ್ಕೆಟ್ ಸೇರಿದಂತೆ ನಗರದ ಪ್ರಮುಖ ಐತಿಹಾಸಿಕ ಮತ್ತು ಸಾಂಸ್ಕೃತಿಕ ಸ್ಥಳಗಳಿಗೆ ಭೇಟಿ ನೀಡಿದರು.



ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಇಂಟ್ಯಾಕ್ ಕಲಬುರಗಿ ಅಧ್ಯಾಯದ ಸಂಯೋಜಕ ಡಾ. ಶಂಭುಲಿಂಗ ಎಸ್.ವಾಣಿ ಅವರು ಪ್ರತಿಯೊಂದು ಸ್ಮಾರಕದ ಇತಿಹಾಸ, ಹಿನ್ನೆಲೆ ಮತ್ತು ವಾಸ್ತುಶಿಲ್ಪದ ವೈಶಿಷ್ಟ್ಯಗಳನ್ನು ವಿವರಿಸಿದರು.

ಪಠ್ಯಪುಸ್ತಕಗಳಲ್ಲಿ ಓದಿದ್ದ ಇತಿಹಾಸವನ್ನು ಟಾಂಗಾ ಸವಾರಿಯ ಮೂಲಕ ನೇರವಾಗಿ ಕಣ್ತುಂಬಿಕೊಂಡ ವಿದ್ಯಾರ್ಥಿನಿಯರು ಸಂಭ್ರಮಿಸಿ, ಇದೊಂದು ಸ್ಮರಣೀಯ ಅನುಭವ ಎಂದು ಅಭಿಪ್ರಾಯಪಟ್ಟರು.

ಪರವಾನಗಿ ಇಲ್ಲದೆ ತಂಬಾಕು ಮಾರಾಟ; 310 ಪ್ರಕರಣ ದಾಖಲು



ಕಲಬುರಗಿ, ನ. 25: ಜಿಲ್ಲೆಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟದ ಪರವಾನಗಿ ಇಲ್ಲದೆ ಮಾರಾಟ ಮಾಡಿದವರ ವಿರುದ್ಧ 310 ಪ್ರಕರಣಗಳನ್ನು ದಾಖಲಿಸಿದ್ದು, 1,02,490 ರೂ ದಂಡ ಸಂಗ್ರಹಿಸಲಾಗಿದೆ.

ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರ ಸೂಚನೆಯಂತೆ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿ ಅಮರದೀಪ ಪವಾರ ನೇತೃತ್ವದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಜಿಲ್ಲೆಯಾದ್ಯಂತ ಕಾರ್ಯಾಚರಣೆ ನಡೆಸಿದರು.

ತಂಬಾಕು ಮುಕ್ತ ಯುವ ಅಭಿಯಾನ 4.0 ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಮಾರ್ಗದರ್ಶನದಲ್ಲಿ ನಗರ, ಕೊಟ್ಟಾ ಕಾಯ್ದೆ ಕುರಿತು ಜಾಗೃತಿ ಮೂಡಿಸಲಾಯಿತು. ಕಲಬುರಗಿ ಟಿಎಚ್ಒ ಡಾ.ವೀರನಾಥ, ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವಿನಾಯಕ ಜೋಶಿ, ಜಯಪ್ರಕಾಶ್, ಜಿಲ್ಲಾ ತಂಬಾಕು ನಿಯಂತ್ರಣ ಕೇಂದ್ರದ ಸಲಹೆಗಾರ್ತಿ ಸುಜಾತಾ ಪಾಟೀಲ, ಡಾ.ಪ್ರೀತಮ್ ಎ.ತೇಲ್ಕರ್, ಸಾಮಾಜಿಕ ಕಾರ್ಯಕರ್ತೆ ಆರತಿ ಧನಶ್ರೀ, ಸುಧಾಕರ್, ರವಿಕುಮಾರ ಪೂಜಾರಿ, ಹಿರಗೆಪ್ಪ ಹಾಗೂ ಪೊಲೀಸ್ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಪಾಲಿಕೆ ಸದಸ್ಯನಿಂದ ಸರ್ಕಾರಿ ಶಾಲೆಯ ಅಭಿವೃದ್ಧಿ

ಪ್ರತಿಯೊಬ್ಬ ಸದಸ್ಯರೂ ಸರ್ಕಾರಿ ಶಾಲೆಗಳನ್ನು ದತ್ತು ಪಡೆಯಲಿ: ಅಲ್ಲಮಪ್ರಭು ಪಾಟೀಲ್



ಕಲಬುರಗಿ, ನ. 25: ತಾರತಮ್ಯ ಕೊಳಚೆ ಪ್ರದೇಶದಲ್ಲಿ ಸೌಕರ್ಯಗಳಿಲ್ಲದೆ ಸಮಸ್ಯೆಗಳ ಸುಳಿಗೆ ಸಿಲುಕಿದ್ದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯೊಂದನ್ನು ಮಹಾನಗರ ಪಾಲಿಕೆ ಸದಸ್ಯ ಸಚಿನ್ ಶಿರವಾಳ ದತ್ತು ತೆಗೆದುಕೊಂಡು ಮಾದರಿ ರೀತಿಯಲ್ಲಿ ಅಭಿವೃದ್ಧಿಪಡಿಸುವ ಮೂಲಕ ಮಕ್ಕಳು ಸ್ಮಾರ್ಟ್ ಕ್ಲಾಸ್‌ನಲ್ಲಿ ಕುಳಿತುಕೊಳ್ಳುವಂತೆ ಮಾಡಿದ್ದಾರೆ. ಪ್ರತಿಯೊಬ್ಬ ಪಾಲಿಕೆ ಸದಸ್ಯರೂ ಕೂಡ ಆಸಕ್ತಿ ವಹಿಸಿದರೆ ನಗರದ ಎಲ್ಲ ಸರ್ಕಾರಿ ಶಾಲೆಗಳು ಅಭಿವೃದ್ಧಿ ಹೊಂದುತ್ತವೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಜನಸೇವಾ ಮನೋಭಾವ ಹಾಗೂ ಸಮಾಜಮುಖಿ ಚಿಂತನೆಗೆ ಗೌರವ ಸಲ್ಲಿಸಲು ಸರ್ಕಾರಿ ಶಾಲಾ ಕಟ್ಟಡದಲ್ಲಿ ಸಣ್ಣಪುಟ್ಟ ರಿಪೇರಿ ಕೆಲಸ ಮಾಡಿಸಿ ಬಣ್ಣ ಬಳಿಯಲಾಗಿದೆ. ಮಕ್ಕಳಲ್ಲಿ ಸೃಜನಶೀಲತೆ ಹಾಗೂ ಕಲಿಕೆಯ ಆಸಕ್ತಿ ಹೆಚ್ಚಿಸಲು ಶಾಲೆ ಸುತ್ತುಗೋಡೆ ಮೇಲೆ ಆಕರ್ಷಕ ಕಲಾತ್ಮಕ ಚಿತ್ರಕಲೆಗಳನ್ನು ಬಿಡಿಸಲಾಗಿದೆ ಎಂದರು.

ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ, ಆಧುನಿಕ ತಂತ್ರಜ್ಞಾನ ಮೂಲಕ ಗುಣಮಟ್ಟದ ಶಿಕ್ಷಣ ಒದಗಿಸಲು ಸ್ಮಾರ್ಟ್ ಕ್ಲಾಸ್‌ಗಳನ್ನಾಗಿ ಪರಿವರ್ತಿಸಲಾಗಿದೆ. ಇಡೀ ಶಾಲೆ ಆವರಣ ಹಾಗೂ ಸುತ್ತಲಿನ ಪ್ರದೇಶದಲ್ಲಿ ಹಸಿರು ವಾತಾವರಣಕ್ಕಾಗಿ ಸಸಿಗಳನ್ನು ಶಿರವಾಳ ನೆಡಿಸಿದ್ದಾರೆ. ಇದಕ್ಕಾಗಿ ಸ್ವಂತ ಹಣ ಕೂಡ ವೆಚ್ಚ ಮಾಡಿದ್ದಾರೆ. ಅದೇ ಶಾಲೆಯಲ್ಲಿ ಸಚಿವ ಖರ್ಗೆ ಜನ್ಮದಿನ ಆಚರಿಸಿ ಅರ್ಥಪೂರ್ಣಗೊಳಿಸಿದ್ದಾರೆ ಎಂದು ಅಲ್ಲಮಪ್ರಭು ಪಾಟೀಲ್ ತಿಳಿಸಿದರು.

ಪ್ರತಿಯೊಬ್ಬ ಪಾಲಿಕೆ ಸದಸ್ಯರೂ ಕೂಡ ಈ ಕೆಲಸವನ್ನು ನೋಡಿ ಕಲಿಯಬೇಕಾದ್ದು ಇದೆ. ನಗರದ ಬಹುತೇಕ ಸರ್ಕಾರಿ ಶಾಲೆಗಳು ವಿವಿಧ ಸೌಲಭ್ಯಗಳಿಲ್ಲದೇ ಸರಗುತ್ತಿವೆ. ಅವುಗಳಿಗೆ ಜೀವ ತುಂಬುವ ಕೆಲಸ ಮಾಡಿದರೆ, ಬಡವರ ಮಕ್ಕಳು ಈ ಸಲೆಗಲಲ್ಲಿ ಅಕ್ಷರಾಭ್ಯಾಸ ಮಾಡಲು ಅನುಕೂಲ ಮಾಡಿಕೊಟ್ಟಂತಾಗುತ್ತದೆ ಎಂದರು.

ಗ್ರಂಥಾಲಯದ ಪುಸ್ತಕಗಳು, ಸೌಲಭ್ಯಗಳ ಸದ್ಬಳಕೆ ಬಳ್ಳಾರಿ ಜನತೆಗೆ ಮೇಯರ್ ಗಾದೆಪ್ಪ ಕರೆ

ಬಳ್ಳಾರಿ,ನ.25. ಮಕ್ಕಳು, ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳು ಹಾಗೂ ಸಾರ್ವಜನಿಕರು ಗ್ರಂಥಾಲಯದ ಪುಸ್ತಕಗಳು ಮತ್ತು ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಬಳ್ಳಾರಿ ಮಹಾನಗರ ಪಾಲಿಕೆ ಮಹಾಪೌರರು ಹಾಗೂ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷ ಪಿ. ಗಾದೆಪ್ಪ ಅವರು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಓದುವ ಹವ್ಯಾಸದಿಂದಲೇ ದೇಶಕ್ಕೆ ಸಂವಿಧಾನ ನೀಡಿದ್ದಾರೆ; ಸ್ವಾಮಿ ವಿವೇಕಾನಂದರು ಸೇರಿದಂತೆ ಹಲವು ಮಹನೀಯರು ಗ್ರಂಥಾಲಯಗಳ ಬಳಕೆಯಿಂದ ದೇಶಕ್ಕೆ ಕೊಡುಗೆ ನೀಡಿದ್ದಾರೆ. ಕಳೆದ ವಾರ ವಿವಿಧ ಶಾಖಾ ಗ್ರಂಥಾಲಯಗಳನ್ನು ವೀಕ್ಷಿಸಿ ವಾರ್ಡ್ ಸದಸ್ಯರೊಂದಿಗೆ ಚರ್ಚಿಸಿದ್ದು, ಮಹಾನಗರ ಪಾಲಿಕೆ ಹಾಗೂ ಗ್ರಂಥಾಲಯ ಪ್ರಾಧಿಕಾರದಿಂದ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು ಎಂದು ತಿಳಿಸಿದರು. ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಗ್ರಾಮೀಣ ವಿದ್ಯಾರ್ಥಿಗಳಿಗೆ ಅವರು ಶುಭ ಹಾರೈಸಿದರು.



ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಡಾ. ನರಸಣ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯ, ಜಿಲ್ಲೆ ಹಾಗೂ ನಗರದ ಗ್ರಂಥಾಲಯಗಳ ಅಂಕಿ-ಅಂಶಗಳನ್ನು ನೀಡಿದ ಅವರು, ಕಳೆದ ನಾಲ್ಕು ವರ್ಷಗಳಲ್ಲಿ ಗ್ರಂಥಾಲಯದ ಅಭಿವೃದ್ಧಿ ಕಾರ್ಯಗಳ ಜತೆಗೆ ಕಳೆದ ವರ್ಷ ಪ್ರಥಮ ಬಾರಿಗೆ ಓದುಗರಿಗೆ ಪುಸ್ತಕ ಮಾಹಿತಿಗಾಗಿ ಗ್ರಂಥಾಲಯ ಮಾಹಿತಿ ಕಿಯೋಸ್ಕ್ ಅಳವಡಿಸಲಾಗಿದ್ದು, ಎಲ್ಲರೂ ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದರು.

ನ. 14ರಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕಿ ಬಿ.ಕೆ. ಲಕ್ಷ್ಮಿ ಕಿರಣ್ ಅವರು ಪುಸ್ತಕ ಪ್ರದರ್ಶನಕ್ಕೆ ಚಾಲನೆ ನೀಡಿದ ವಿಚಾರವನ್ನು ಪ್ರಸ್ತಾಪಿಸಿದರು.

ವೀರಶೈವ ಮಹಾವಿದ್ಯಾಲಯದ ನಿವೃತ್ತ ಹಿರಿಯ ಗ್ರಂಥಪಾಲಕ ಡಾ. ಬಿ.ಆರ್. ಗದಗಿನ್ ಅವರು 'ಸಾರ್ವಜನಿಕ ಗ್ರಂಥಾಲಯಗಳ ಕುರಿತು' ವಿಶೇಷ ಉಪನ್ಯಾಸ ನೀಡಿ, ನಗರ ಹಾಗೂ ಗ್ರಾಮೀಣ ಗ್ರಂಥಾಲಯಗಳ ಮಹತ್ವ ಮತ್ತು ಓದುವ ಸಂಸ್ಕೃತಿಯ ಬಗ್ಗೆ ವಿವರಿಸಿದರು.

ನಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯ ಹಾಗೂ ನಿವೃತ್ತ ಉಪನ್ಯಾಸಕ ಎನ್. ಬಸವರಾಜ ಮಾತನಾಡಿ, ಓದುವ ಹವ್ಯಾಸ ರೂಢಿಸಿಕೊಂಡು ಗ್ರಂಥಾಲಯ ಸೌಲಭ್ಯ ಬಳಸಿಕೊಳ್ಳುವುದರಿಂದ ಭಾರತ ವಿಶ್ವಗುರುವಾಗಲು ಸಾಧ್ಯವಾಗುತ್ತದೆ ಎಂದರು.

14.8 ಲಕ್ಷ.ರೂ ಮೌಲ್ಯದ 37 ಬೈಕ್‌ಗಳನ್ನು ವಶಪಡಿಸಿಕೊಂಡು ಆರೋಪಿಗಳ ಬಂಧನ: ಬಳ್ಳಾರಿ ಪೋಲೀಸರ ಕಾರ್ಯಾಚರಣೆ

ಬಳ್ಳಾರಿ, ನ.25: ಬಳ್ಳಾರಿ ನಗರ ಸೇರಿದಂತೆ ನಾನಾಕಡೆ ದ್ವಿಚಕ್ರ ವಾಹನ ಕಳ್ಳತನ ಮಾಡಿರುವ ಆರೋಪಿಯನ್ನು ಬಂಧಿಸಿದ ನಗರದ ಬ್ರೂಸ್‌ಪೇಟೆ ಹಾಗೂ ಗಾಂಧಿನಗರ ಠಾಣೆಯ ಪೊಲೀಸರು ಹರಸಾಹಸ ಕಾರ್ಯಾಚರಣೆ ನಡೆಸಿ, 14.80ಲಕ್ಷ.ರೂ ಮೌಲ್ಯದ 37 ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.



ಬಹಳ ದಿನಗಳಿಂದ ಚಾಣಾಕ್ಷತನದಿಂದ ಕಳ್ಳತನ ಮಾಡುತ್ತಾ ತಪ್ಪಿಸಿಕೊಂಡು ತಿರುಗುತ್ತಿದ್ದ ಬಳ್ಳಾರಿ ನಗರದ ರೂಪನಗುಡಿ ರಸ್ತೆಯ ಹರಿಶ್ಚಂದ್ರ ನಗರದ ನಿವಾಸಿ ಕಾಳಿ ಪ್ರಸಾದ್(40) ಆರೋಪಿಯನ್ನು ಅನುಮಾನದಿಂದ ಪೊಲೀಸ್ ಠಾಣೆಗೆ ಕರೆತಂದು ವಿಚಾರಣೆ ನಡೆಸಿದಾಗ ಬೈಕ್ ಕಳ್ಳತನ ಮಾಡಿದ ವಿಚಾರ ಬೆಳಕಿಗೆ ಬಂದಿದೆ.

ನಗರದ ಗಾಂಧಿನಗರ, ಬ್ರೂಸ್‌ಪೇಟೆ, ತೋರಣಗಲ್ಲು, ಮುನಿರಬಾದ್, ಕಂಪ್ಲಿ ಹಾಗೂ ಗುಂತಕಲ್ಲು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ 36 ಬೈಕ್‌ಗಳನ್ನು ಪೊಲೀಸರು ವಶಪಡಿಸಿಕೊಂಡು, ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿದ್ದಾರೆ.

ಬಳ್ಳಾರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಡಾ. ಸುಮನ್ ಡಿ.ಪೆನ್ನೇಕರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರ ರವರ ಮಾರ್ಗದರ್ಶನದಲ್ಲಿ ಡಿಎಸ್‌ಪಿ ಗೋವಿಂದ್ ರಾಜ್, ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಪಿಐ ಮಹಾಂತೇಶ್ ಟಿ., ಪಿಎಸ್‌ಐ ಶಹನಾಜ್, ಗಾಂಧಿನಗರ ಪೊಲೀಸ್ ಠಾಣೆಯ ಪಿಐ ರವಿಚಂದ್ರ ಡಿಬಿ., ಪಿಎಸ್‌ಐ ಕೆ.ವಿರುಪಾಕ್ಷಪ್ಪ, ಎರಡು ಠಾಣೆಯ ಸಿಬ್ಬಂದಿಗಳಾದ ರಮೇಶ್, ಬಸವರಾಜ್, ಉಮೇಶ್ ರೆಡ್ಡಿ, ಶಿವರಾಜ್ ಕುಮಾರ್, ಪರಶುರಾಮ್, ಗರಡಿ ರಾಜಶೇಖರ್, ದೊಡ್ಡ ಬಸವನಗೌಡ, ಬಿ.ಜಯರಾಮ್, ಸೋಮಪ್ಪ, ರಾಮದಾಸ್, ಮಹಾಲಿಂಗಪ್ಪ, ಜಯರಾಜ್, ತಿಮ್ಮಪ್ಪ, ಕೋಸಿಗಿ ಕಾಳಿಂಗಪ್ಪ, ಮಂಜುನಾಥ ಮತ್ತು ಇನ್ನಿತರರು ಕಾರ್ಯಾಚರಣೆಯಲ್ಲಿ ಭಾಗವಹಿಸಿ ಬೈಕ್ ಕಳ್ಳತನ ಪ್ರಕರಣವನ್ನು ಭೇದಿಸಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಭತ್ತದ ಕಣಜ ರಾಯಚೂರಿಗೆ ಹೊರರಾಜ್ಯಗ

ಭಾರತ, ಚೀನಾ ಸೇರಿ ಹಲವು ರಾಷ್ಟ್ರಗಳ ಮೇಲೆ ಹೊಸ ಸುಂಕ ಹೇರಲು ಟ್ರಂಪ್ ಸಿದ್ಧತೆ

ವಾಷಿಂಗ್ಟನ್, ನ.25: ನಾನಾ ರಾಷ್ಟ್ರಗಳು ದೇಶೀಯ ಕೈಗಾರಿಕಾ ಉತ್ಪಾದನೆಗೆ ಸರ್ಕಾರಿ ಸಬ್ಸಿಡಿ ಮತ್ತು ಬೆಂಬಲ ನೀಡುವ ಮೂಲಕ ಅಮೆರಿಕದ ಕಂಪನಿಗಳಿಗೆ ನಷ್ಟ ಉಂಟುಮಾಡುತ್ತಿವೆ ಎಂದು ಟ್ರಂಪ್ ಆಡಳಿತ ಆರೋಪಿಸಿದೆ. ಇದೇ ಕಾರಣಕ್ಕಾಗಿ, ಭಾರತ ಸೇರಿದಂತೆ ಹತ್ತಾರು ಪ್ರಮುಖ ರಾಷ್ಟ್ರಗಳ ಮೇಲೆ ಹೊಸದಾಗಿ ಆಮದು ಸುಂಕ ಹೇರಲು ಟ್ರಂಪ್ ಸಿದ್ಧತೆ ನಡೆಸಿದ್ದಾರೆ. ಶೀಘ್ರವೇ ಹೊಸ ಸುಂಕ ಅಧಿಕೃತವಾಗಿ ಘೋಷಣೆಯಾಗುವ ಸಾಧ್ಯತೆ ಇದೆ ಎಂದು ವಾಲ್ ಸ್ಟ್ರೀಟ್ ಜರ್ನಲ್ ವರದಿ ಮಾಡಿದೆ.

ಈ ಪ್ರಸ್ತಾವಿತ ಹೊಸ ಸುಂಕಗಳು ಭಾರತ, ಚೀನಾ, ಜಪಾನ್, ದಕ್ಷಿಣ ಕೊರಿಯಾ, ಯುರೋಪಿಯನ್ ಒಕ್ಕೂಟ ಹಾಗೂ ಇತರ ಪ್ರಮುಖ ರಾಷ್ಟ್ರಗಳನ್ನು ಗುರಿಯಾಗಿಸಿಕೊಳ್ಳುವ ಸಾಧ್ಯತೆಯಿದೆ.

ಟ್ರಂಪ್ ತಂಡವು ಕಳೆದ ಹಲವು ತಿಂಗಳುಗಳಿಂದ ನಡೆಸುತ್ತಿದ್ದ ಸುಂಕ ತನಿಖಾ ವರದಿಯನ್ನು ಅಮೆರಿಕದ ವ್ಯಾಪಾರ ಪ್ರತಿನಿಧಿ (ಯುಎಸ್‌ಟಿಆರ್) ಜೇಮಿಸನ್ ಗ್ರೀರ್ ಅವರು ಈ ವಾರವೇ ಬಹಿರಂಗಪಡಿಸುವ ನಿರೀಕ್ಷೆಯಿದ್ದು, ಮಂಗಳವಾರದ ವೇಳೆಗೆ ಈ ಕುರಿತು ಘೋಷಣೆಯಾಗಬಹುದು ಎಂದು ಬ್ಲೂಮ್‌ಬರ್ಗ್ ವರದಿ ತಿಳಿಸಿದೆ. ಆದರೆ, ಶ್ವೇತಭವನವಾಗಲಿ ಅಥವಾ ಯುಎಸ್‌ಟಿಆರ್ ಕಚೇರಿಯಾಗಲಿ ಈ ವರದಿಗಳ ಬಗ್ಗೆ ಇದುವರೆಗೆ ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ.

ಅಮೆರಿಕದ 1974ರ ವ್ಯಾಪಾರ ಕಾಯ್ದೆಯ ಸೆಕ್ಷನ್ 301ರ ಅಡಿಯಲ್ಲಿ ಕಳೆದ ಮಾರ್ಚ್ 11ರಂದು ಭಾರತ, ಚೀನಾ, ಯುರೋಪಿಯನ್ ಒಕ್ಕೂಟ ಹಾಗೂ ಇತರ 13 ದೇಶಗಳ ಕೈಗಾರಿಕಾ ಸಬ್ಸಿಡಿಗಳ ಕುರಿತು ತನಿಖೆಯನ್ನು ಆರಂಭಿಸಲಾಗಿತ್ತು. ಈ ದೇಶಗಳು ನೀಡುತ್ತಿರುವ ಸಬ್ಸಿಡಿ ಮತ್ತು ಸರ್ಕಾರಿ ಬೆಂಬಲದಿಂದಾಗಿ ಹೆಚ್ಚುವರಿ ಕೈಗಾರಿಕಾ ಸಾಮರ್ಥ್ಯ ಸೃಷ್ಟಿಯಾಗಿದ್ದು, ಆಯಾ ದೇಶಗಳ ಕಂಪನಿಗಳು ಜಾಗತಿಕ ಮಾರುಕಟ್ಟೆಗೆ ಅಗ್ಗದ ದರದಲ್ಲಿ ಸರಕುಗಳನ್ನು ಪೂರೈಸುವ ಮೂಲಕ ಅಮೆರಿಕದ ಉತ್ಪಾದಕರಿಗೆ ಹೊಡೆತ ನೀಡುತ್ತಿವೆ ಎಂದು ಜೇಮಿಸನ್ ಗ್ರೀರ್ ಪ್ರತಿಪಾದಿಸಿದ್ದಾರೆ.

ಯುಎಸ್‌ಟಿಆರ್ ಹೊರಡಿಸಲಿರುವ ಹೊಸ ಪ್ರಕಟಣೆಯು ಉದ್ದೇಶಿತ ದೇಶಗಳಿಂದ ರಫ್ತಾಗುವ ಬಹುತೇಕ ಉತ್ಪನ್ನಗಳ ಮೇಲೆ ಹೆಚ್ಚಿನ ಸುಂಕವನ್ನು ಹೇರುವ ಸಾಧ್ಯತೆಯಿದೆ. ಆದಾಗ್ಯೂ, ಪ್ರತ್ಯೇಕ ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಈಗಾಗಲೇ ಸುಂಕಕ್ಕೆ ಒಳಪಟ್ಟಿರುವ ಉಕ್ಕು, ಅಲ್ಯೂಮಿನಿಯಂ ಮತ್ತು ಆಟೋಮೊಬೈಲ್‌ಗಳಂತಹ ಕೆಲವು ಕೈಗಾರಿಕಾ ಸರಕುಗಳನ್ನು ಈ ಪಟ್ಟಿಯಿಂದ ಹೊರಗಿಡುವ ನಿರೀಕ್ಷೆಯಿದೆ.

ಹೊಸ ಸುಂಕದ ಅಂತಿಮ ದರಗಳು ಎಷ್ಟಿರಲಿವೆ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಆವದರೂ, 2026ರ ಫೆಬ್ರವರಿಯಲ್ಲಿ ಅಮೆರಿಕದ ಸುಪ್ರೀಂ ಕೋರ್ಟ್ ರದ್ದುಗೊಳಿಸಿದ್ದ 2025ರ ಸುಂಕದ ದರಗಳಿಗೆ ಸಮನಾದ ಸುಂಕವನ್ನೇ ಮತ್ತೆ ವಿಧಿಸಲು ಉದ್ದೇಶಿಸಿರುವುದಾಗಿ ಟ್ರಂಪ್ ಆಡಳಿತದ ಅಧಿಕಾರಿಗಳು ಪದೇಪದೇ ಹೇಳಿದ್ದಾರೆ.

ಇದರ ಜೊತೆಗೆ, ವಿದೇಶಿ ಪೂರೈಕೆ ಸರಪಳಿಗಳಲ್ಲಿ ಬಲವಂತದ ದುಡಿಮೆಯ ಕುರಿತು ಯುಎಸ್‌ಟಿಆರ್ ಕಳೆದ ಜುಲೈನಲ್ಲಿ ನಡೆಸಿದ್ದ ತನಿಖೆಯ ಅನ್ವಯ, ಹೆಚ್ಚುವರಿ ಉತ್ಪಾದನಾ ತನಿಖೆಗೆ ಒಳಪಟ್ಟಿರುವ ಎಲ್ಲ 16 ಆರ್ಥಿಕತೆಗಳು ಸೇರಿದಂತೆ ಹತ್ತಾರು ವ್ಯಾಪಾರ ಪಾಲುದಾರರ ಮೇಲೆ 10 ರಿಂದ 12.5% ರಷ್ಟು ಸುಂಕ ವಿಧಿಸಲು ಶಿಫಾರಸು ಮಾಡಲಾಗಿತ್ತು. ಇದೀಗ ಘೋಷಣೆಯಾಗಲಿರುವ ಹೊಸ ಸುಂಕಗಳು, ಜುಲೈನಲ್ಲಿ ಪ್ರಕಟಿಸಲಾದ ಆ ಸುಂಕಗಳಿಗೆ ಹೆಚ್ಚುವರಿಯಾಗಿ ಸೇರ್ಪಡೆಯಾಗುವ ಸಾಧ್ಯತೆಯಿದೆ.

ಮತ್ತೊಂದೆಡೆ, ಭಾರತ ಮತ್ತು ಅಮೆರಿಕ ನಡುವೆ ಮಧ್ಯಂತರ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕಾಗಿ ಕಳೆದ ಹಲವು ತಿಂಗಳುಗಳಿಂದ ಮಾತುಕತೆಗಳು ನಡೆಯುತ್ತಿವೆ. ಫೆಬ್ರವರಿಯಲ್ಲಿ ಈ ಒಪ್ಪಂದದ ಚೌಕಟ್ಟನ್ನು ಅಂತಿಮ ಗೊಳಿಸಲಾಗಿತ್ತಾದರೂ, ಕಳೆದ ವರ್ಷ ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆಯಡಿ ವಿಧಿಸಲಾಗಿದ್ದ ಸುಂಕಗಳನ್ನು ಅಮೆರಿಕ ಸುಪ್ರೀಂ ಕೋರ್ಟ್ ರದ್ದುಗೊಳಿಸಿದ ನಂತರ ಈ ಒಪ್ಪಂದವು ಮತ್ತೆ ಚರ್ಚೆಯ ಹಂತಕ್ಕೆ ಮರಳಿತ್ತು. ಈ ವ್ಯಾಪಾರ ಒಪ್ಪಂದದ ಅಡಿಯಲ್ಲಿ, ಅಮೆರಿಕದ ಮಾರುಕಟ್ಟೆಯಲ್ಲಿ ತನ್ನ ಪ್ರತಿಸ್ಪರ್ಧಿ ರಾಷ್ಟ್ರಗಳಾದ ಬಾಂಗ್ಲಾದೇಶ, ವಿಯೆಟ್ನಾಂ ಮತ್ತು ಕಾಂಬೋಡಿಯಾಗಳಿಗಿಂತ ಕಡಿಮೆ ಸುಂಕದ ಸೌಲಭ್ಯವನ್ನು ಪಡೆಯಲು ಭಾರತ ತೀವ್ರ ಪ್ರಯತ್ನ ನಡೆಸುತ್ತಿದೆ.

ಹಸೀನಾ ವಾಪಸಾತಿ ಪ್ರತ್ಯೇಕ, ಗಡಿಪಾರು ಪರಿಶೀಲನೆಯಲ್ಲಿದೆ: ಭಾರತ ಸ್ಪಷ್ಟನೆ



ನವದೆಹಲಿ, ನ.25: ಆಗಸ್ಟ್ 2024ರಲ್ಲಿ ವಿದ್ಯಾರ್ಥಿಗಳ ನೇತೃತ್ವದ ದಂಗೆಯಲ್ಲಿ ತಮ್ಮ ಅವಾಮಿ ಲೀಗ್ ಪಕ್ಷ ಅಧಿಕಾರದಿಂದ ಕೆಳಗಿಳಿದ ನಂತರ ಭಾರತದಲ್ಲಿ ಸ್ವಯಂ-ಗಡಿಪಾರಿನಲ್ಲಿರುವ ಹಸೀನಾ, ಮಂಗಳವಾರ ದೇಶದ ವಿಜಯ ದಿನದಂದು ಬಾಂಗ್ಲಾದೇಶಕ್ಕೆ ಮರಳುವ ಯೋಜನೆಯನ್ನು ಪ್ರಕಟಿಸಿದ್ದರು. ಆಡಳಿತಾರೂಢ ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಕ್ಷ (ಬಿಎನ್‌ಪಿ) ನಾಯಕರು ಅವರ ಹಸ್ತಾಂತರಕ್ಕೆ ಒತ್ತಾಯಿಸಿದ್ದು, ಮರಳಿದ ಕೂಡಲೇ ಅವರನ್ನು ಬಂಧಿಸಲಾಗುವುದು ಎಂದು ಹೇಳಿದ್ದಾರೆ.

ಹಸೀನಾ ಅವರ ತವರಿಗೆ ಮರಳುವ ಯೋಜನೆಯ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇದು ಮಾಜಿ ಪ್ರಧಾನಿ ಮತ್ತು ಬಾಂಗ್ಲಾದೇಶ ಸರ್ಕಾರದ ನಡುವಿನ ವಿಷಯವಾಗಿದ್ದು, ತಮಗೆ ಹೆಚ್ಚೇನೂ ಹೇಳಲು ಇಲ್ಲ. ಡಿಸೆಂಬರ್ 2024ರಲ್ಲಿ ಮೊದಲ ಬಾರಿಗೆ ಸಲ್ಲಿಸಲಾಗಿದ್ದ ಹಸೀನಾ ಅವರ ಹಸ್ತಾಂತರ ಕೋರಿಕೆಯನ್ನು ಭಾರತದ ಸ್ಥಾಪಿತ ಪ್ರಕ್ರಿಯೆಗಳಿಗೆ ಅನುಗುಣವಾಗಿ ಪರಿಶೀಲಿಸಲಾಗುತ್ತಿದೆ ಎಂದು ಹೇಳಿದರು.

ಆದಾಗ್ಯೂ, ಹಸ್ತಾಂತರ ಕೋರಿಕೆ ಮತ್ತು ತಮ್ಮ ವಾಪಸಾತಿಗೆ ಅನುಕೂಲವಾಗುವಂತೆ ಪಾಸ್‌ಪೋರ್ಟ್ ಹಾಗೂ ರಾಷ್ಟ್ರೀಯ ಗುರುತಿನ ಚೀಟಿ ನೀಡುವಂತೆ ಹಸೀನಾ ಅವರು ನವದೆಹಲಿಯಲ್ಲಿರುವ ಬಾಂಗ್ಲಾದೇಶ ಹೈಕಮಿಷನ್‌ಗೆ ಇತ್ತೀಚೆಗೆ ಸಲ್ಲಿಸಿದ ಮನವಿಯ ನಡುವೆ ಅವರು ವ್ಯತ್ಯಾಸ ತೋರಿಸಿದರು. ಪ್ರಯಾಣ ದಾಖಲೆಯ ಮೇಲೆ ನಾಗರಿಕರೊಬ್ಬರು ಸ್ವಯಂಪ್ರೇರಿತವಾಗಿ ತಮ್ಮ ದೇಶಕ್ಕೆ ಮರಳಲು ಬಯಸುವ ಪ್ರಕರಣವು ಹಸ್ತಾಂತರ ಕೋರಿಕೆಗಿಂತ ಭಿನ್ನವಾಗಿದೆ ಎಂದು ಜೈಸ್ವಾಲ್ ಹೇಳಿದರು.

ಈ ವಿಷಯದ ಬಗ್ಗೆ ತಿಳಿದಿರುವ ಮೂಲಗಳು ಈ ಹಿಂದೆ, ಹಸೀನಾ ಅವರಿಗೆ ಪಾಸ್‌ಪೋರ್ಟ್ ನೀಡಲು ಬಾಂಗ್ಲಾದೇಶ ನಿರಾಕರಿಸುತ್ತಿರುವುದನ್ನು ವಿಳಂಬ ತಂತ್ರವೆಂದು ಪರಿಗಣಿಸಲಾಗಿದ್ದು, ಅವರ ಮರಳುವಿಕೆಗೆ ಭಾರತ ಯಾವುದೇ ಅಡೆತಡೆಗಳನ್ನು ಸೃಷ್ಟಿಸಿಲ್ಲ ಎಂದು ಹೇಳಿದ್ದವು.

ಹಸೀನಾ ಅವರ ಮರಳುವಿಕೆಯ ಸುದ್ದಿ ಹಿನ್ನೆಲೆಯಲ್ಲಿ ಬಾಂಗ್ಲಾದೇಶದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಈ ತಿಂಗಳು ದೇಶದ ಹಲವೆಡೆ ಅವರ ಅವಾಮಿ ಲೀಗ್ ಪಕ್ಷದ ಬೆಂಬಲಿಗರು ಪ್ರತಿಭಟನೆಗಳನ್ನು ಸಂಘಟಿಸಿದ್ದಾರೆ. ನಿಷೇಧಕ್ಕೊಳಗಾಗಿರುವ ಅವಾಮಿ ಲೀಗ್ ಮತ್ತು ಬಿಎನ್‌ಪಿ ಬೆಂಬಲಿಗರ ನಡುವೆ ಇತ್ತೀಚಿನ ದಿನಗಳಲ್ಲಿ ಹಿಂಸಾತ್ಮಕ ಘರ್ಷಣೆಗಳೂ ನಡೆದಿವೆ. ಪಬ್ನಾ ಸೇರಿದಂತೆ ಕೆಲವು ಕಡೆ ನಡೆದ ಹಿಂಸಾಚಾರವು ಸಾಂಪ್ರದಾಯಿಕವಾಗಿ ಅವಾಮಿ ಲೀಗ್‌ಗೆ ಬೆಂಬಲ ನೀಡುತ್ತಿರುವ ಹಿಂದೂ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡಿದೆ. ಬಾಂಗ್ಲಾದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಡುತ್ತಿರುವುದು ಹಾಗೂ ಹಿಂದೂಗಳ ಮೇಲಿನ ದಾಳಿಗಳ ಕುರಿತ ಪ್ರಶ್ನೆಗೆ ಉತ್ತರಿಸಿದ ಜೈಸ್ವಾಲ್, ಈ ಬೆಳವಣಿಗೆಗಳ ಬಗ್ಗೆ ಭಾರತಕ್ಕೆ ಕಳವಳವಿದೆ ಎಂದು ಹೇಳಿದರು.

ಕನ್ನಡದ ಕಂಪು, ನಾಡು-ನುಡಿಯ ವೈಭವಕ್ಕೆ ಸಾಕ್ಷಿಯಾದ ದುಬೈ ಕರ್ನಾಟಕ ರಾಜ್ಯೋತ್ಸವ

ಡಾ. ಎನ್.ಸೋಮೇಶ್ವರಗೆ ಅಂತಾರಾಷ್ಟ್ರೀಯ ಕನ್ನಡರತ್ನ ಪ್ರಶಸ್ತಿ ಪ್ರದಾನ



ಮುಂಬಯಿ, ನ.25: ಕರ್ನಾಟಕ ಸಂಘ ದುಬೈ ಸಂಸ್ಥೆಯು ಕನ್ನಡಿಗರ ಕೂಟ ದುಬೈ ಸಹಕಾರದೊಂದಿಗೆ ದುಬೈನ ಅಲ್ ಖಿಸೈಸ್‌ನ ನ್ಯೂ ಡೋನ್ ಪ್ರೈವೇಟ್ ಸ್ಕೂಲ್‌ನ ಸಭಾಂಗಣದಲ್ಲಿ ಕಳೆದ ರವಿವಾರ ದುಬೈ ಕರ್ನಾಟಕ ರಾಜ್ಯೋತ್ಸವ ಅದ್ದೂರಿಯಾಗಿ ಸಂಭ್ರಮಿಸಿತು. ಭವ್ಯ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿದ್ದ ಕರ್ನಾಟಕ ವಿಧಾನ ಪರಿಷತ್‌ನ ಪ್ರತಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್ ಸಂಭ್ರಮಕ್ಕೆ ಚಾಲನೆಯನ್ನಿತ್ತರು.

ಲೇಖಕ ಇರ್ಷಾದ್ ಮೂಡಬಿದ್ರೆ ಅವರ 'ಬದುಕಿನ ಸವಾರಿ ಪ್ರಬಂಧ ಸಂಕಲನವನ್ನು ಗಣ್ಯರು ಲೋಕಾರ್ಪಣೆ ಮಾಡಿದರು.

ಈ ವರ್ಷದಿಂದ ಒಂದೇ ರಾಜ್ಯೋತ್ಸವವನ್ನು ಆಚರಿಸುವ ಉದ್ದೇಶದಿಂದ ಎರಡೂ ಸಂಘಟನೆಗಳನ್ನು ಒಗ್ಗೂಡಿಸಿದ ಡಾ। ರೊನಾಲ್ಡ್ ಕೊಲಾಸೊ ಅವರಿಗೆ ಉಭಯ ಸಂಸ್ಥೆಗಳ ವತಿಯಿಂದ 'ಗ್ಲೋಬಲ್ ಐಕಾನ್ ಆಫ್ ಯುನಿಟಿ ಬಿರುದು ಪ್ರದಾನ ಮಾಡಲಾಯಿತು. ಹಾಗೂ ಡಾ। ತುಂಬೆ ಮೊಯ್ದೀನ್ ಅವರನ್ನೂ ಸನ್ಮಾನಿಸಿ ಅಭಿನಂದಿಸಲಾಯಿತು.

ಉದ್ಯಮಿ ರಾಮಚಂದ್ರ ಹೆಗ್ಡೆ ಅವರಿಗೆ 'ದುಬೈ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಮೊಹಮ್ಮದ್ ಸಮೀರ್ ಅವರಿಗೆ ಮತ್ತು ಸಾಮಾಜಿಕ ಕಾರ್ಯಕರ್ತ ಶೇಖ್ ಮುಝಾಫರ್ ಅವರಿಗೆ 'ಸೇವಾ ರತ್ನ; ಪ್ರಶಸ್ತಿ, ಯಕ್ಷಗಾನ ಕಲಾವಿದ ಕಿಶೋರ್ ಗಟ್ಟಿ ಉಚ್ಚಿಲ ಅವರಿಗೆ 'ಗಿರೀಶ್ ಶೆಟ್ಟಿ ಸೇವಾರತ್ನ; ಪ್ರಶಸ್ತಿ, ಯಕ್ಷಗಾನ ಕಲಾವಿದ ಶೇಖರ್ ಡಿ.ಶೆಟ್ಟಿಗಾರ್ ಅವರಿಗೆ 'ಯುವರಾಜ್ ದೇವಾಡಿಗ ಸೇವಾರತ್ನ; ಪ್ರಶಸ್ತಿ ಪ್ರದಾನಿಸಿ, ಪ್ರಾಣಿ ಸಂರಕ್ಷಕಿ ಮಂಗಳೂರು ಅಲ್ಲಿನ ರಜನಿ ಶೆಟ್ಟಿ ಅವರಿಗೆ ವಿಶೇಷ ಪುರಸ್ಕಾರ ನೀಡಿ, ದುಬೈನಲ್ಲಿ ವಕೀಲ ಉದ್ಯಮದಲ್ಲಿ ಮುಂಚೂಣಿಯಲ್ಲಿರುವ ಮತ್ತು ಕನ್ನಡ ಸಮುದಾಯಕ್ಕೆ ಕಾನೂನು ನೆರವು ನೀಡುತ್ತಿರುವ ಸುನೀಲ್ ಅಂಬಲವೇಲಿ ಅವರಿಗೆ 'ಕಮ್ಯುನಿಟಿ ಲಾಯರ್ ಆಫ್ ದಿ ಈಯರ್-2026; ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಬೆಂಗಳೂರು ಅಲ್ಲಿನ ಚಿತ್ರ ಕಲಾವಿದೆ ಕು। ಮಾನಸ ಶ್ರೀನಿವಾಸ್ ಅವರನ್ನು ಸನ್ಮಾನಿಸಲಾಯಿತು. ಬೆಂಗಳೂರಿನ ಪ್ರಸಿದ್ಧ ಸಮಾಜಸೇವಕ ಹಾಗೂ ಜೈ ಫೌಂಡೇಶನ್‌ನ ಸ್ಥಾಪಕ ಜಯಕುಮಾರ್ ಅವರನ್ನೂ ಗೌರವಿಸಲಾಯಿತು.

ಕ್ರೀಡಾ ಕ್ಷೇತ್ರದಲ್ಲಿ ರಾಷ್ಟ್ರೀಯ ವಾಲಿಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಸಿಬಿಎಸ್‌ಇ ಯುಎಇ ಗಲ್ಫ್ ವಲಯವನ್ನು ಪ್ರತಿನಿಧಿಸಲು ಆಯ್ಕೆಯಾಗಿರುವ ಕನ್ನಡಿಗ ಆಯುಷ್ ಮತ್ತು ಆತಿಶ್, ನಾಯಕತ್ವ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಾಧನೆಗೈದ ಅಡ್ರಿಯನ್ ರೋಜರ್ ಮಿನೇಜಸ್ ಅವರನ್ನೂ ಗೌರವಿಸಲಾಯಿತು.

ಲೇಖಕ ಡಾ। ಎನ್.ಸೋಮೇಶ್ವರ ಅವರಿಗೆ ಕನ್ನಡಿಗರ ಕೂಟ ದುಬೈ ವತಿಯಿಂದ 'ಅಂತಾರಾಷ್ಟ್ರೀಯ ಕನ್ನಡ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ರಾಜೇಶ್ ಮಾರ್ವಿನ್ ಅಲೋಸಿಯಸ್ ಸಿಕ್ವೇರ ಅವರಿಗೆ ಪ್ರತಿಷ್ಠಿತ 'ಡಾ। ಪುನೀತ್ ರಾಜ್‌ಕುಮಾರ್ ಪ್ರಶಸ್ತಿ ಹಾಗೂ ಕನ್ನಡಪರ ಸಂಘಟಕರು ಮತ್ತು ಸಾಧಕ ಸಿ.ಎಂ. ನಾಗರಾಜ್ ಅವರಿಗೆ ಪ್ರತಿಷ್ಠಿತ 'ಕನ್ನಡ ಸೇವಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅನಿವಾಸಿ ಕನ್ನಡಿಗರ ಬಗ್ಗೆ ಕರ್ನಾಟಕ ಸರ್ಕಾರದ ಧೋರಣೆ ಬದಲಾಗಬೇಕು

ಡಾ। ರೊನಾಲ್ಡ್ ಕೊಲಾಸೊ ಮಾತನಾಡಿ ಗಲ್ಫ್ ರಾಷ್ಟ್ರಗಳಲ್ಲಿರುವ ಅನಿವಾಸಿ ಕನ್ನಡಿಗರ ಬಗ್ಗೆ ಕರ್ನಾಟಕ ರಾಜ್ಯ ಸರಕಾರದ ಧೋರಣೆ ಬದಲಾಗಬೇಕು ಎಂದು ಅಭಿಪ್ರಾಯಪಟ್ಟು ಕರ್ನಾಟಕ ಸರಕಾರದ ಗಲ್ಫ್ ಅನಿವಾಸಿ ಸಹಕಾರದ ನೀತಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಹಾಗೂ ಗಲ್ಫ್ ರಾಷ್ಟ್ರಗಳಲ್ಲಿ ದುಡಿಯುತ್ತಿರುವ ಕನ್ನಡಿಗರನ್ನೂ ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅನಿವಾಸಿಗಳಂತೆಯೇ ಸಮಾನ ಗೌರವ ಮತ್ತು ಮನ್ನಣೆಯಿಂದ ಕಾಣಬೇಕು ಎಂದು ಒತ್ತಾಯಿಸಿದರು.

ಶಶಿಧರ ನಾಗರಾಜಪ್ಪ ಮಾತನಾಡಿ, ನಮಗೆ ಅತೀ ಮುಖ್ಯವಾಗಿ ದುಬೈನಲ್ಲಿ ಕನ್ನಡ ಭವನದ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಕನ್ನಡ ಭವನ ನಿರ್ಮಿಸಲು ರಾಜ್ಯ ಸರಕಾರ ನಮಗೆ ಆರ್ಥಿಕ ನೆರವಿನ ಜೊತೆ ಸಹಕಾರ ನೀಡಬೇಕು ಎಂದು ಒತ್ತಾಯಿಸಿದರು.

ಅರುಣ್ ಕುಮಾರ್, ರೊನಾಲ್ಡ್ ಮಾರ್ಟಿಸ್, ಡಾ। ನಾ. ಸೋಮೇಶ್ವರ ಮಾತನಾಡಿದರು. ಅತಿಥಿಗಳಾಗಿ ಅನಿವಾಸಿ ಉದ್ಯಮಿ, ಪೋಷಕ ಡಾ। ರೊನಾಲ್ಡ್ ಕೊಲಾಸೊ, ತುಂಬೆ ಗ್ರೂಪ್‌ನ ಸಂಸ್ಥಾಪಕ ಅಧ್ಯಕ್ಷ ಡಾ। ತುಂಬೆ ಮೊಯ್ದೀನ್, ಉದ್ಯಮಿ ಡಾ। ಬಿ. ಆರ್. ಶೆಟ್ಟಿ, ಪ್ರಸಿದ್ಧ ಕ್ವಿಜ್ ಮಾಸ್ಟರ್ ಹಾಗೂ ಲೇಖಕ ಡಾ। ನಾ.ಸೋಮೇಶ್ವರ, ದುಬೈನ ಆಕ್ಮೆ ಬಿಲ್ಡಿಂಗ್ ಮೆಟೀರಿಯಲ್ಸ್ ಆಡಳಿತ ನಿರ್ದೇಶಕ ಹರೀಶ್ ಶೇರಿಗಾರ್, ಸೈಯೋನ್ ಪ್ರಾಪರ್ಟೀಸ್, ದುಬೈನ ಸಂಸ್ಥಾಪಕ, ವ್ಯವಸ್ಥಾಪಕ ನಿರ್ದೇಶಕ ಪ್ರವೀಣ್‌ಕುಮಾರ್ ಅಮರನಾಥ್, ದುಬೈ ಬಿಸಿಎಫ್ ಅಧ್ಯಕ್ಷ ಡಾ। ಬಿ.ಕೆ ಯೂಸುಫ್, ಉದ್ಯಮಿ ರಾಮಚಂದ್ರ ಹೆಗ್ಡೆ, ಸಂಘದ ಪೋಷಕ ರೊನಾಲ್ಡ್ ಮಾರ್ಟಿಸ್, ಸಂಘದ ಸಲಹೆಗಾರ ಜಯಂತ್ ಶೆಟ್ಟಿ ಎಸ್ಟಿವ ರಿಯಲೆಸ್ಟೇಟ್ ಸಂಸ್ಥಾಪಕಿ ಮೋನಿಕಾ ಮಂದಣ್ಣ, ಕರ್ನಾಟಕ ಸಂಘ ದುಬೈ ಅಧ್ಯಕ್ಷ ಶಶಿಧರ ನಾಗರಾಜಪ್ಪ, ಕನ್ನಡಿಗರ ಕೂಟದ ಅಧ್ಯಕ್ಷ ಅರುಣ್ ಕುಮಾರ್ ಎಂ.ಕೆ ಹಾಜರಿದ್ದರು.

ಬಲೂಚ್ ನಂತರ ಸಿಂಧ್‌ನಲ್ಲಿ ತೀವ್ರಗೊಂಡ ಪ್ರತ್ಯೇಕತೆಯ ಕೂಗು

ಸಿಂಧ್ ಪ್ರಾಂತ್ಯವನ್ನು ವಿಭಜಿಸಿ ಹೊಸ ಪ್ರಾಂತ್ಯ ರಚಿಸುವ ಪಾಕ್ ಸರ್ಕಾರದ ಪ್ರಸ್ತಾವನೆಗೆ ವಿರೋಧ

ಇಸ್ಲಾಮಾಬಾದ್, ನ.25: ಪಾಕಿಸ್ತಾನದ ನಾಲ್ಕು ಪ್ರಾಂತ್ಯಗಳನ್ನು ವಿಭಜಿಸಿ 12ರಿಂದ 15 ಹೊಸ ಆಡಳಿತ ಘಟಕಗಳನ್ನು ರಚಿಸುವ ಸರ್ಕಾರ ಮತ್ತು ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರ ಪ್ರಸ್ತಾವನೆಗೆ ವಿರೋಧ ವ್ಯಕ್ತವಾಗಿದೆ. ಬಲೂಚಿಸ್ತಾನದ ಪ್ರತ್ಯೇಕತಾ ಹೋರಾಟದ ನಡುವೆಯೇ, ಕರಾಚಿ ಸೇರಿ ಸಿಂಧ್ ಪ್ರಾಂತ್ಯದಾದ್ಯಂತ ಸಾವಿರಾರು ಸಿಂಧಿ ರಾಷ್ಟ್ರೀಯವಾದಿಗಳು ಬೀದಿಗಿಳಿದು ಬೃಹತ್ ಪ್ರತಿಭಟನೆ ಮಾಡುತ್ತಿದ್ದಾರೆ.

ಪಾಕಿಸ್ತಾನದ ಪ್ರಸ್ತುತ ಇರುವ 4 ಪ್ರಾಂತ್ಯಗಳನ್ನು (ಪಂಜಾಬ್, ಸಿಂಧ್, ಖೈಬರ್ ಪಖ್ತುಂಖ್ವಾ, ಬಲೂಚಿಸ್ತಾನ) ವಿಭಜಿಸಿ 12 ರಿಂದ 15 ಸಣ್ಣ ಆಡಳಿತ ಪ್ರಾಂತ್ಯಗಳನ್ನಾಗಿ ಮಾಡಲು ಇಸ್ಲಾಮಾಬಾದ್ ಸರ್ಕಾರ ಮತ್ತು ಫೀಲ್ಡ್ ಮಾರ್ಷಲ್/ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಮುಂದಾಗಿದ್ದಾರೆ ಎಂಬ ವರದಿಗಳು ಈ ಆಕ್ರೋಶಕ್ಕೆ ಕಿಡಿ ಹಚ್ಚಿವೆ. ಅದರಲ್ಲೂ, ಈ ವಿಭಜನೆಯ ಮೂಲಕ ದೇಶದ